ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 139 RNI Number : KNKAN/25/A2770 28-05-2026 Thursday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :139 ರಾಯಚೂರು 28-05-2026 ಗುರುವಾರ ಪುಟ 04 ಬೆಲೆ ರೂ.2/- ಮೊ:8660146563

ಜಿಲ್ಲಾ ಉಸ್ತುವಾರಿ ಜಿಲ್ಲೆಯ ನಾಯಕರಿಗೇ ಇರಲಿ: ಸ್ಥಳೀಯರ ಒತ್ತಾಯ!

ರಾಯಚೂರು,ಮೇ.27-

ರಾಜ್ಯ ರಾಜಕೀಯದಲ್ಲಿ ಕಾಂಗ್ರೆಸ್ ಪಕ್ಷವು ಮೂರು ವರ್ಷದ ಅವಧಿ ಪೂರ್ಣಗೊಳಿಸಿದ ಹಿನ್ನೆಲೆ ಹಲವು ಜಿಲ್ಲೆಗಳ ಉಸ್ತುವಾರಿ ಸಚಿವರ ಹಾಗೂ ಇನ್ನಿತರ ಬದಲಾವಣೆಯ ಚರ್ಚೆ ತೀವ್ರಗೊಂಡಿದೆ. ಈ ನಡುವೆ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವ ಸ್ಥಾನದಲ್ಲೂ ಬದಲಾವಣೆ ಆಗುತ್ತದೆಯೇ ಎಂಬ ಕುತೂಹಲ ಜಿಲ್ಲೆಯ ರಾಜಕೀಯ ವಲಯದಲ್ಲಿ ಹೆಚ್ಚಾಗಿದೆ. ಒಂದು ವೇಳೆ ಬದಲಾವಣೆ ನಡೆದರೆ ಯಾರಿಗೆ ಹೊಣೆಗಾರಿಕೆ ನೀಡಲಾಗುತ್ತದೆ ಎಂಬುದರ ಬಗ್ಗೆ ಕಾಂಗ್ರೆಸ್ ಕಾರ್ಯಕರ್ತರು ಹಾಗೂ ಸಾರ್ವಜನಿಕರಲ್ಲಿ ಚರ್ಚೆಗಳು ಜೋರಾಗಿವೆ.

''ರಾಯಚೂರು ಜಿಲ್ಲೆಯ ಉಸ್ತುವಾರಿ ಹುದ್ದೆಯನ್ನು ಜಿಲ್ಲೆಯವರಿಗೇ ನೀಡಬೇಕು ಎಂಬ ಬೇಡಿಕೆ ಹಲವು ವರ್ಷಗಳಿಂದ ಕೇಳಿಬರುತ್ತಿದ್ದರೂ, ಕಾಂಗ್ರೆಸ್ ಪಕ್ಷವು ಹೊರ ಜಿಲ್ಲೆಯ ನಾಯಕರಿಗೆ ಅವಕಾಶ ನೀಡುತ್ತಾ ಬಂದಿದೆ. ಪ್ರಸ್ತುತ ರಾಯಚೂರು ಜಿಲ್ಲಾ ಉಸ್ತುವಾರಿಯಾಗಿ ಸಚಿವ ಶರಣ ಪ್ರಕಾಶ ಪಾಟೀಲ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಅವರು ಕಲಬುರಗಿ ಭಾಗಕ್ಕೆ ಸೇರಿದವರಾಗಿದ್ದು, ರಾಯಚೂರು ಜಿಲ್ಲೆಯ ಅಭಿವೃದ್ಧಿಗೆ ಅಗತ್ಯ ಮಟ್ಟದ ಆದ್ಯತೆ ನೀಡಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ. ಜಿಲ್ಲೆಗೆ ಮಂಜೂರಾಗುವ ಅನುದಾನ ಮತ್ತು ಅಭಿವೃದ್ಧಿ ಯೋಜನೆಗಳಲ್ಲೂ ಸಮರ್ಪಕ ಗಮನ ಹರಿಸಲಿಲ್ಲ '' ಎಂಬ ಟೀಕೆಗಳು ಸಾರ್ವಜನಿಕ ವಲಯದಲ್ಲಿ ಚರ್ಚೆಯಾಗುತ್ತಿವೆ.



ಕೆಲವು ಹೋರಾಟಗಾರರು ಹಾಗೂ ಸ್ಥಳೀಯ ಮುಖಂಡರ ಆರೋಪದಂತೆ, ''ರಾಯಚೂರಿಗೆ ಬರಬೇಕಿದ್ದ ಅನುದಾನ ಮತ್ತು ಯೋಜನೆಗಳು ಕಲಬುರಗಿ ಭಾಗದತ್ತ ತಿರುಗಿವೆ ಎಂಬ ಅಸಮಾಧಾನವಿದ್ದು, ಇದರಿಂದಾಗಿ ಜಿಲ್ಲೆಯ ಅಭಿವೃದ್ಧಿಗೆ ಹಿನ್ನಡೆಯಾಗಿದೆ ಎನ್ನುವ ಅಭಿಪ್ರಾಯ ವ್ಯಕ್ತವಾಗುತ್ತಿದೆ. ರಾಯಚೂರು ಜಿಲ್ಲೆಯ ಸಮಸ್ಯೆಗಳು, ಜನರ ಅವಶ್ಯಕತೆಗಳು ಹಾಗೂ ಅಭಿವೃದ್ಧಿ ದೃಷ್ಟಿಕೋನವನ್ನು ಜಿಲ್ಲೆಯ ನಾಯಕರೇ ಸಮರ್ಪಕವಾಗಿ ಅರ್ಥಮಾಡಿಕೊಳ್ಳಬಲ್ಲರು. ಆದ್ದರಿಂದ ಜಿಲ್ಲಾ ಉಸ್ತುವಾರಿ ಸ್ಥಾನವನ್ನು ಸ್ಥಳೀಯ ನಾಯಕರಿಗೇ ನೀಡಬೇಕು'' ಎಂದು ವಿವಿಧ ಸಂಘಟನೆಗಳು ಹಾಗೂ ಸಾರ್ವಜನಿಕರು ಒತ್ತಾಯಿಸುತ್ತಿದ್ದಾರೆ.

ವಿಶೇಷವಾಗಿ ಬರಪೀಡಿತ ತಾಲ್ಲೂಕುಗಳು, ಕುಡಿಯುವ ನೀರಿನ ಸಮಸ್ಯೆ, ರಸ್ತೆ ಅಭಿವೃದ್ಧಿ, ಉದ್ಯೋಗ ಸೃಷ್ಟಿ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಹೆಚ್ಚಿನ ಗಮನ ಅಗತ್ಯವಿದೆ. ಸ್ಥಳೀಯ ನಾಯಕತ್ವಕ್ಕೆ ಅವಕಾಶ ನೀಡಿದರೆ ಮಾತ್ರ ಜಿಲ್ಲೆಯ ಅಭಿವೃದ್ಧಿಗೆ ವೇಗ ಸಿಗಲಿದೆ ಎಂಬ ವಿಶ್ವಾಸ ಜನರಲ್ಲಿ ಮೂಡಿದೆ. ಈಗ ಕಾಂಗ್ರೆಸ್ ಹೈಕಮಾಂಡ್ ಯಾವ ರೀತಿಯ ತೀರ್ಮಾನ ಕೈಗೊಳ್ಳುತ್ತದೆ, ರಾಯಚೂರು ಜಿಲ್ಲಾ ಉಸ್ತುವಾರಿಯಲ್ಲಿ ಬದಲಾವಣೆಯಾಗಿ, ಜಿಲ್ಲೆಯ ನಾಯಕರಿಗೆ ಅವಕಾಶ ಸಿಗುತ್ತದೆಯೇ ಎಂಬುದನ್ನು ಕಾದು ನೋಡಬೇಕಾಗಿದೆ.

''ಜಿಲ್ಲೆಯ ಹಿರಿಯ ರಾಜಕೀಯ ನಾಯಕ ಹಾಗೂ ಸಣ್ಣ ನೀರಾವರಿ ಇಲಾಖೆ ಸಚಿವ ಎನ್.ಎಸ್. ಬೋಸರಾಜು ಉಸ್ತುವಾರಿ ಸ್ಥಾನಕ್ಕೆ ಸಮರ್ಪಕರಾಗಿದ್ದು. ಪಕ್ಷ ಸಂಘಟನೆಗಾಗಿ ಹಲವು ವರ್ಷಗಳಿಂದ ಹಗಲು-ರಾತ್ರಿ ಶ್ರಮಿಸಿರುವ ಅವರು, ರಾಯಚೂರು ಜಿಲ್ಲೆಯ ಜೊತೆಗೆ ಗಡಿ ಭಾಗದ ಆಂಧ್ರ ಪ್ರದೇಶದಲ್ಲಿಯೂ ಕಾಂಗ್ರೆಸ್ ಸಂಘಟನೆಯನ್ನು ಬಲಪಡಿಸಲು ಕೆಲಸ ಮಾಡಿದ್ದಾರೆ'' ಎಂಬ ಮಾತುಗಳು ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿವೆ.

ಕಾಂಗ್ರೆಸ್ ಮುಖಂಡ ನರಸಿಂಹ ಮಾಡಗಿರಿ ಮಾತನಾಡಿ, ''ಜಿಲ್ಲಾ ಉಸ್ತುವಾರಿ ಸಚಿವರು ನಮ್ಮ ಜಿಲ್ಲೆಯವರೇ ಆಗಿರಬೇಕು. ಆಗ ಮಾತ್ರ ಜಿಲ್ಲೆಯ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಲು ಸಾಧ್ಯವಾಗುತ್ತದೆ. ಪ್ರಸ್ತುತ ಇರುವ ಜಿಲ್ಲಾ ಉಸ್ತುವಾರಿ ಸಚಿವರು ಧ್ವಜಾರೋಹಣ ಹಾಗೂ ಕೆಡಿಪಿ ಸಭೆಗಳಿಗೆ ಮಾತ್ರ ಸೀಮಿತರಾಗಿದ್ದಾರೆ. ಕಳೆದ ಮೂರು ವರ್ಷಗಳಿಂದ ಮಹಾನಗರ ಪಾಲಿಕೆಯ ಕುಂದುಕೊರತೆ ಸಭೆಯನ್ನು ಒಂದನ್ನೂ ನಡೆಸಿಲ್ಲ,''

3ನೇ ಪುಟಕ್ಕೆ

ಇಂದು ಅಧಿಕಾರ ಹಸ್ತಾಂತರ ಬಗ್ಗೆ ಸಿದ್ಧರಾಮಯ್ಯ ಪ್ರತಿಕ್ರಿಯೆ

ಬೆಂಗಳೂರು,ಮೇ.27-

ಕಾಂಗ್ರೆಸ್ ಹೈಕಮಾಂಡ್ ಸೂಚನೆಯ ಮೇರೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ರಾಜೀನಾಮೆ ನೀಡ ಲಿದ್ದಾರೆ ಎಂಬ ವರದಿಗಳ ನಡುವೆ, ಸಿದ್ದರಾಮಯ್ಯ ನಾಳೆ (ಗುರುವಾರ) ಬೆಳಗ್ಗೆ ತಮ್ಮ ಸಂಪುಟ ಸಹೋದ್ಯೋಗಿಗಳಿಗೆ ಉಪಹಾರ ಸಭೆ ಆಯೋಜಿಸಿ ದ್ದಾರೆ.

ಉಪಮುಖ್ಯಮಂತ್ರಿ ಡಿ.ಕೆ.ಶಿವಕು ಮಾರ್ ಅವರ ದೆಹಲಿ ಪ್ರವಾಸದ ವೇಳಾಪಟ್ಟಿಯಲ್ಲಿ ಕೊನೆ ಕ್ಷಣದ ಬದಲಾವಣೆ ಕಂಡುಬಂದಿದೆ. ಆರಂಭದಲ್ಲಿ ಇಂದು ಮಧ್ಯಾಹ್ನ ಬೆಂಗಳೂರಿಗೆ ಮರಳಬೇಕಿದ್ದ ಅವರು, ಇದೀಗ ನಾಳೆ ಮುಂಜಾನೆ ದೆಹಲಿಯಿಂದ ಹೊರಟು ಸಿಎಂ ಅವರ ಅಧಿಕೃತ ನಿವಾಸದಲ್ಲಿ ಉಪಹಾರ ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿದು ಬಂದಿದೆ. ಡಿಕೆಶಿಗೆ ಮುಖ್ಯಮಂತ್ರಿ ಸ್ಥಾನ ನೀಡಲು ಸಿದ್ದರಾಮಯ್ಯ ನಾಳೆಯೇ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವ ಕುರಿತ ಮಾತುಗಳು ಬಲವಾಗಿ ಕೇಳಿಬರುತ್ತಿವೆ.

ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡಲಿದ್ದಾರೆ ಎಂಬ ಚರ್ಚೆ ಮಧ್ಯೆ ನಾಳೆ ಮಹತ್ವದ ಆತಿಥ್ಯ ಕೂಟ ನಿಗದಿಯಾಗಿದೆ. ಈ ಸಭೆ ಕೇವಲ ಸೌಜನ್ಯದ ಭೇಟಿಯೇ ಅಥವಾ ಮುಂದಿನ ರಾಜ್ಯ ರಾಜಕಾರಣದ ಬಗ್ಗೆ ಚರ್ಚೆಯೋ ಎಂಬ ಲೆಕ್ಕಾಚಾರಗಳು ರಾಜಕೀಯ ಪಡಸಾಲೆಯಲ್ಲಿ ಶುರುವಾಗಿವೆ.

ಮಂಗಳವಾರ ದೆಹಲಿಯಲ್ಲಿ ನಡೆದ ಹೈಕಮಾಂಡ್ ನೇತೃತ್ವದ ಸಭೆಯಲ್ಲಿ ಸಿದ್ದರಾಮಯ್ಯ ಅಧಿಕಾರ ಹಸ್ತಾಂತರಕ್ಕೆ ಸಮ್ಮತಿಸಿದ್ದಾರೆ ಎಂದು ಮೂಲಗಳು ತಿಳಿಸಿವೆ.


ರಾಜ್ಯದಲ್ಲಿ ನಾಯಕತ್ವ ಬದಲಾವಣೆಗೆ ಸೂಚಿಸಿರುವ ಕಾಂಗ್ರೆಸ್ ಹೈಕಮಾಂಡ್, ರಾಜ್ಯಸಭಾ ಸ್ಥಾನದ ಜೊತೆಗೆ ಸಿದ್ದರಾಮಯ್ಯಗೆ ಪಕ್ಷದಲ್ಲಿ ಕೇಂದ್ರ ಪಾತ್ರ ನೀಡಲು ಮುಂದಾಗಿದೆ. ಆದರೆ ಸಿದ್ದರಾಮಯ್ಯ ಕೇಂದ್ರ ಪಾತ್ರವನ್ನು ತಕ್ಷಣ ಒಪ್ಪಿಕೊಂಡಿಲ್ಲ. ರಾಹುಲ್ ಗಾಂಧಿಯವರಿಂದಲೇ ಸಂದೇಶ ಬಂದಿದ್ದರಿಂದ ರಾಜೀನಾಮೆ ನೀಡಲು ನಿರ್ಧರಿಸಿರಬಹುದು ಎಂದು ಮೂಲಗಳು ಹೇಳಿವೆ.

ಅಲ್ಲದೆ, ಡಿಕೆಶಿ ಜೊತೆಗೆ ಸತೀಶ್ ಜಾರಕಿಹೊಳಿ ಕೂಡ ದೆಹಲಿಯಲ್ಲೇ ಉಳಿದುಕೊಂಡಿದ್ದು, ಇಂದು ಹೈಕಮಾಂಡ್ ಜೊತೆ ಚರ್ಚಿಸುವ



ಸಾಧ್ಯತೆಯಿದೆ. ಕೆಪಿಸಿಸಿ ಅಧ್ಯಕ್ಷ ಹುದ್ದೆ ಸತೀಶ್ ಜಾರಕಿಹೊಳಿ ಅವರಿಗೆ ಒಲಿಯಲಿದೆ ಎಂದು ಹೇಳಲಾಗುತ್ತಿದೆ.

ರಾಜ್ಯದ ಹಲವೆಡೆ ಭಾರೀ ಅವಾಂತರ ಸೃಷ್ಟಿಸಿದ ಪೂರ್ವ ಮುಂಗಾರು ಮಳೆ



ಬೆಂಗಳೂರು,ಮೇ 27-

ರಾಜ್ಯದ ಹಲವೆಡೆ ಪೂರ್ವ ಮುಂಗಾರು ಮಳೆ ಅಬ್ಬರಿಸಿದ್ದು, ಭಾರೀ ಅವಾಂತರ ಸೃಷ್ಟಿಸಿದ್ದು, ಜನಜೀವನ ಅಸ್ತವ್ಯಸ್ತಗೊಂಡಿದೆ.ಬೆಂಗಳೂರು, ಬೆಂಗಳೂರು ಗ್ರಾಮಾಂತರ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಮಂಡ್ಯ, ಮೈಸೂರು, ದಾವಣಗೆರೆ, ಚಿತ್ರದುರ್ಗ, ರಾಯಚೂರು, ಗುಲ್ಬರ್ಗ, ಹುಬ್ಬಳ್ಳಿ, ಬೀದರ್ ಸೇರಿದಂತೆ ಮತ್ತಿತರ ಜಿಲ್ಲೆಗಳಲ್ಲಿ ಮಳೆಯಾಗಿದೆ.

ರಾಯಚೂರಿನಲ್ಲಿ ಗುಡುಗು ಸಿಡಿಲು ಸಹಿತ ಮಳೆಯಾಗುತ್ತಿದ್ದು, ಇಂದು ಬೆಳ್ಳಂಬೆಳಿಗ್ಗೆಯೇ ಮಳೆ

3ನೇ ಪುಟಕ್ಕೆ

ವಾಹನ ಸವಾರನಿಗೆ ಪೊಲೀಸ್‌ರಿಂದ ಅವಾಚ್ಯ ಶಬ್ದದಿಂದ ನಿಂದನೆ...?

ಸಿಂಧನೂರು:ಮೇ.26 -

ಬೈಕ್ ತಪಾಸಣೆ ನೆಪದಲ್ಲಿ ಬೈಕ್ ಸವಾರನಿಗೆ ಬಳಗಾನೂರು ಪೊಲೀಸರು ಅವಾಚ್ಯ ಶಬ್ದಗಳಿಂದ ನಿಂದಿಸಿ ಕೊರಳು ಪಟ್ಟಿ ಹಿಡಿದು ತಳ್ಳಾಡಿದ ಘಟನೆ ಇಂದು ಜವಳಗೇರಾ ಹತ್ತಿರ ನಡೆದಿದೆ.

ಮಂಗಳವಾರ ಬೈಕ್ ತ'ಪಾ'ಸ'ಣೆ'ಗ್ಯೆ ಯ'ು'ತ್ತಿ ರ'ು'ವ' ಬಳಗಾನೂರ ಎ.ಎಸ್.ಐ ಸಿದ್ದಪ್ಪ ,ಪೆದೆದಯಾನಂದ,ಹೊಂಗಾರ್ಡ ಪಂಪಾಪತಿತಪಾಸಣೆಯಲ್ಲಿದ್ದವರು. ಮಂಜುನಾಥ ಎಂಬ ಯುವಕ ಸಿಂಧನೂರು ಕಡೆಯಿಂದ ನೀರಮಾನ್ವಿಗೆ ಹೊರಟಿರುವಾಗ ತಪಾಸಣೆ ನಡೆಸಲಾಗಿದೆ.ಹೆಲ್ಮೆಟ್ ಇಲ್ಲದಕ್ಕೆ ರಶೀದಿ ಕೊಡಿ



ಕೋರ್ಟ್ ನಲ್ಲಿ ಪಾವತಿ ಮಾಡುತ್ತೆವೆಂದು ಎಂದು ಹೇಳಿದರೂ ಕೇಳದ ಪೊಲೀಸರು ಬೈಯ್ದಾಡಿಕೊರಳು ಪಟ್ಟಿ ಹಿಡಿದು ತಳ್ಳಾಡಿದ್ದಾರೆ ಮತ್ತು ಕೈ ಮೇಲೆ ಉಗುರು ಗುರುತುಗಳು ಬೀಳುವಂತೆ ಚೂರಿದ್ದಾರೆ.ಬೇರೆ ಗಾಡಿಗಳನ್ನು ಬಿಡುತ್ತಿದ್ದಿರಿ ನಮ್ಮನ್ನು ಯಾಕೆ ಬಿಡುವುದಿಲ್ಲ ಎಂದು ಕೇಳಿದಾಗ ನಿವೇನು ಕಿತ್ತಿಕೊಳ್ಳಲಾಗುವುದಿಲ್ಲ ಮುಂತಾದ ಅನೇಕ ಅವಾಚ್ಯ ಶಬ್ದಗಳುವಿಡಿಯೋರೆಕಾರ್ಡ್ ಆಗಿದೆ.

ಏಕವಚನದಲ್ಲಿ ನಿಂದನೆ ಮಾಡಲು ಬೈಕ್ ಕಿತ್ತಿಕೊಳ್ಳಲು ಪೊಲೀಸರಿಗೆ ಅಧಿಕಾರ ಕೊಟ್ಟವರು ಯಾರು ಎಂದು ನೊಂದಿತಮಂಜುನಾಥ ನಾಯಕ ಪತ್ರಿಕೆ ಮುಂದೆ ಆಕ್ರೋಶ ಹೊರ ಹಾಕಿದರು.

ಕ್ರೀಡಾಂಗಣದ ಜಾಗ ಉಳಿಸಿ: ಸಭಾಂಗಣ ನಿರ್ಮಾಣಕ್ಕೆ ವಿದ್ಯಾರ್ಥಿಗಳ ವಿರೋಧ

ಕೃವಿವಿ ಆವರಣದಲ್ಲಿ ಸಾರ್ವಜನಿಕ ಸಮಾವೇಶ ಸಭಾಂಗಣ ಬೇಡ ಎಂದು ಜಿಲ್ಲಾಧಿಕಾರಿಗೆ ಮನವಿ

ರಾಯಚೂರು, ಮೇ.26

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ (ಕೃವಿವಿ) ರಾಯಚೂರು ಆವರಣದ ಕ್ರೀಡಾಂಗಣದ ಪಕ್ಕದಲ್ಲಿ ಉದ್ದೇಶಿತ ಸಾರ್ವಜನಿಕ ಸಮಾವೇಶ ಸಭಾಂಗಣ ನಿರ್ಮಾಣಕ್ಕೆ ವಿದ್ಯಾರ್ಥಿಗಳು ಹಾಗೂ ಕ್ರೀಡಾಸಕ್ತರು ತೀವ್ರ ವಿರೋಧ ವ್ಯಕ್ತಪಡಿಸಿದ್ದಾರೆ.

ಕೃವಿವಿ ವ್ಯವಸ್ಥಾಪನಾ ಮಂಡಳಿಯ 58ನೇ ಸಭೆಯ ನಿರ್ಧಾರದಂತೆ ಸುಮಾರು 2 ಎಕರೆ ಜಾಗದಲ್ಲಿ ಸಭಾಂಗಣ ನಿರ್ಮಿಸಲು ಯೋಜನೆ ರೂಪಿಸಿರುವುದು ವಿದ್ಯಾ ರ್ಥಿಗಳ ಆಕ್ರೋಶಕ್ಕೆ ಕಾರಣವಾಗಿದೆ. ಈ ಕುರಿತು ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿರುವ ವಿದ್ಯಾರ್ಥಿಗಳು,



ಕ್ರೀಡಾಂಗಣದ ಪಕ್ಕದಲ್ಲಿ ಕಟ್ಟಡ ನಿರ್ಮಾಣವಾದರೆ ಕ್ರೀಡಾಪಟುಗಳ ಅಭ್ಯಾಸ, ಮುಕ್ತ ಚಲನೆ ಹಾಗೂ ಭವಿಷ್ಯದ ಕ್ರೀಡಾಂಗಣ ವಿಸ್ತರಣೆಗೆ ತೊಂದರೆಯಾಗಲಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

ಕೃಷಿ ವಿಶ್ವವಿದ್ಯಾಲಯವು ಶೈಕ್ಷಣಿಕ ಸಂಸ್ಥೆಯಾಗಿದ್ದು, ಇಲ್ಲಿನ ಶಾಂತಿಯುತ ಮತ್ತು ನೈಸರ್ಗಿಕ ವಾತಾವರಣ ವಿದ್ಯಾರ್ಥಿಗಳ ಓದಿಗೆ ಪೂರಕವಾಗಿದೆ. ಸಾರ್ವಜನಿಕ ಸಮಾವೇಶ ಸಭಾಂಗಣ ನಿರ್ಮಾ ಣವಾದಲ್ಲಿ ಸಾರ್ವಜನಿಕರ ನಿರಂತರ ಓಡಾಟ, ವಾಹನ ಸಂಚಾರ ಹಾಗೂ ಧ್ವನಿಮಾಲಿನ್ಯದಿಂದ ಶೈಕ್ಷಣಿಕ ಏಕಾಗ್ರತೆಗೆ ಧಕ್ಕೆಯಾಗುವ ಸಾಧ್ಯತೆ ಇದೆ ಎಂದು ವಿದ್ಯಾರ್ಥಿಗಳು ಮನವಿಯಲ್ಲಿ ಉಲ್ಲೇಖಿಸಿದ್ದಾರೆ.

ಕ್ರೀಡೆಗೆ ಮೀಸಲಾದ ಜಾಗವನ್ನು ಉಳಿಸಿಕೊಳ್ಳುವುದು ಅತ್ಯಗತ್ಯ ವಾಗಿದ್ದು, ಸಭಾಂಗಣ ನಿರ್ಮಾಣಕ್ಕೆ ಕೃವಿವಿ ಆವರಣದ ಬೇರೆ ಸೂಕ್ತ ಸ್ಥಳವನ್ನು ಗುರುತಿಸಬೇಕು ಎಂದು ಆಗ್ರಹಿಸಿದ್ದಾರೆ. ಮುಂದಿನ ದಿನಗಳಲ್ಲಿ ಕ್ರೀಡಾಂಗಣವನ್ನು ಆಧುನೀಕರಿಸಲು ಹಾಗೂ ವಿಸ್ತರಿಸಲು ಇದೇ ಜಾಗ ಅಗತ್ಯವಾಗುತ್ತದೆ ಎಂದು ತಿಳಿಸಿದ್ದಾರೆ.

ಒಂದು ವೇಳೆ ಕೃಷಿ ಮೇಳದ ಮೈದಾನ ಅಥವಾ ಕ್ರೀಡಾಂಗಣದ ಪಕ್ಕದಲ್ಲೇ ಸಭಾಂಗಣ ನಿರ್ಮಾಣಕ್ಕೆ ಅನುಮತಿ ನೀಡಿದಲ್ಲಿ ವಿದ್ಯಾರ್ಥಿ ಗಳು ಮತ್ತು ಕ್ರೀಡಾಸಕ್ತರ ಪರವಾಗಿ ತೀವ್ರ ಹೋರಾಟ ನಡೆಸಲಾಗು ವುದು ಎಂದು ಎಚ್ಚರಿಕೆ ನೀಡಿದ್ದಾರೆ.

ವಿದ್ಯಾರ್ಥಿಗಳ ಮನವಿಗೆ ಜಿಲ್ಲಾಡಳಿತ ಯಾವ ರೀತಿಯಲ್ಲಿ ಸ್ಪಂದಿಸಲಿದೆ ಎಂಬುದು ಈಗ ಕುತೂಹಲಕ್ಕೆ ಕಾರಣವಾಗಿದೆ.

ಪೆಟ್ರೋಲ್ ಬಂಕ್ ಬಳಿ ಡಿಸೇಲ್‌ಗಾಗಿ ಪರದಾಟ; ರೈತರ ಆಕ್ರೋಶ



ರಾಯಚೂರು : ರಾಯಚೂರು ನಗರ, ಲಿಂಗಸುಗೂರು, ದೇವದುರ್ಗ ಸೇರಿ ಜಿಲ್ಲೆಯಾದ್ಯಂತ ಕ್ಯಾನ್ ಗಳಲ್ಲಿ ಡಿಸೇಲ್ ಹಾಕುತ್ತಿಲ್ಲ ಎಂದು ರೈತರು ಆಕ್ರೋಶ ವ್ಯಕ್ತಪಡಿಸಿದ್ದು, ಹಲವೆಡೆ ಡೀಸೆಲ್ ಕೊರತೆ ಮತ್ತು ಬೆಲೆ ಏರಿಕೆಯ ಪರಿಣಾಮ ವಾಹನ ಸವಾರರು ಹಾಗೂ ರೈತರು ಸಂಕಷ್ಟ ಅನುಭವಿಸುತ್ತಿದ್ದಾರೆ.

ಪೆಟ್ರೋಲ್ ಬಂಕ್‌ಗಳಲ್ಲಿ ಡೀಸೆಲ್‌ಗಾಗಿ ವಾಹನಗಳ ಉದ್ದ ಸಾಲು ಕಂಡುಬಂದಿದ್ದು, ಕೆಲವೆಡೆ ನಿಯಂತ್ರಿತ ಪ್ರಮಾಣದಲ್ಲಿ ಮಾತ್ರ ಡೀಸೆಲ್ ವಿತರಣೆ ಮಾಡಲಾಗುತ್ತಿದೆ.

ಮುಂಗಾರು ಸನೀಹವಾಗಿದ್ದು, ಜಿಲ್ಲೆಯಲ್ಲಿ ಕೃಷಿ ಚಟುವಟಿಕೆಗಳು ಗರಿಗೆದರಿರುವ ಸಮಯದಲ್ಲಿ ಟ್ರ್ಯಾಕ್ಟರ್, ಜನರೇಟರ್ ಹಾಗೂ ಸರಕು ಸಾಗಣೆ ವಾಹನಗಳಿಗೆ ಡೀಸೆಲ್ ಅಗತ್ಯ ಹೆಚ್ಚಾಗಿದೆ. ಆದರೆ ಬೇಡಿಕೆಗೆ ತಕ್ಕಂತೆ ಸರಬರಾಜು ಆಗದ ಹಿನ್ನೆಲೆಯಲ್ಲಿ ಸಾರ್ವಜನಿಕರು ಹಲವು ಗಂಟೆಗಳ ಕಾಲ ಬಂಕ್‌ಗಳ ಮುಂದೆ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ. ಕೆಲವು ಪೆಟ್ರೋಲ್ ಬಂಕ್‌ಗಳಲ್ಲಿ ಒಂದು ವಾಹನಕ್ಕೆ 20 ರಿಂದ 50 ಲೀಟರ್‌ವರೆಗೆ ಮಾತ್ರ ಡೀಸೆಲ್ ನೀಡಲಾಗುತ್ತಿದೆ ಎನ್ನಲಾಗಿದೆ. ಇದರಿಂದ ರೈತರು ಕೃಷಿ ಕಾರ್ಯಗಳಲ್ಲಿ ವಿಳಂಬ ಎದುರಿಸುತ್ತಿದ್ದು, ಸರಕು ಸಾಗಣೆ ವಾಹನಗಳ ಸಂಚಾರಕ್ಕೂ ತೊಂದರೆ ಉಂಟಾಗಿದೆ.

ಸಮಸ್ಯೆ ಕುರಿತು ತೈಲ ಕಂಪನಿಗಳು ಹಾಗೂ ಜಿಲ್ಲಾಡಳಿತ ತಕ್ಷಣ ಕ್ರಮ ಕೈಗೊಂಡು ಸಮರ್ಪಕ

3ನೇ ಪುಟಕ್ಕೆ

ಸರ್ಕಾರಿ ನೌಕರರ ವೇತನ ಪ್ಯಾಕೇಜ್ ಯೋಜನೆಯಡಿ ಮೃತ ನೌಕರರ ಕುಟುಂಬಕ್ಕೆ ₹1 ಕೋಟಿ ಪರಿಹಾರ



ರಾಯಚೂರು,ಮೇ.26-

ಸರ್ಕಾರಿ ನೌಕರರ ವೇತನ ಪ್ಯಾಕೇಜ್ ಯೋಜನೆಯಡಿ ಮೃತಪಟ್ಟ ಆರೋಗ್ಯ ಇಲಾಖೆಯ ಸರ್ಕಾರಿ ನೌಕರ ಅರುಣಕುಮಾರ ಅವರ ಕುಟುಂಬಕ್ಕೆ ₹1 ಕೋಟಿ ಮೊತ್ತದ ಪರಿಹಾರ ಚೆಕ್ ಅನ್ನು ಜಿಲ್ಲಾಧಿಕಾರಿಗಳು, ಮಹಾನಗರ ಪಾಲಿಕೆ ಆಯುಕ್ತರು, ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳ ಸಮ್ಮುಖದಲ್ಲಿ ವಿತರಿಸಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮೃತ ನೌಕರರ ಕುಟುಂಬದ ಸದಸ್ಯರಿಗೆ ಸಾಂತ್ವನ ಸೂಚಿಸಿದ ಜಿಲ್ಲಾಧಿಕಾರಿಗಳು, ಸರ್ಕಾರದ ವಿವಿಧ ಯೋಜನೆಗಳು ಸಂಕಷ್ಟದ ಸಂದರ್ಭದಲ್ಲಿ ಕುಟುಂಬಗಳಿಗೆ ಆರ್ಥಿಕ ಭದ್ರತೆ ಒದಗಿಸುತ್ತವೆ ಎಂದು ಹೇಳಿದರು. ಮೃತ ನೌಕರರ ಸೇವೆಯನ್ನು ಸ್ಮರಿಸಿ, ಅವರ ಕುಟುಂಬದೊಂದಿಗೆ ಸರ್ಕಾರ ಹಾಗೂ ಸಂಘ ಸದಾ ಇರುತ್ತದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಸರ್ಕಾರಿ ನೌಕರರ ಸಂಘದ ಜಿಲ್ಲಾ ಅಧ್ಯಕ್ಷ ಕೃಷ್ಣ ಶಾವಂತಗೇರಿ ಮಾತನಾಡಿ, ವೇತನ ಪ್ಯಾಕೇಜ್ ಯೋಜನೆಯ ಸದುಪಯೋಗವನ್ನು ಎಲ್ಲಾ ಸರ್ಕಾರಿ ನೌಕರರು ಪಡೆಯಬೇಕು ಎಂದು ಕರೆ ನೀಡಿದರು. ಸಂಘದ ಪದಾಧಿಕಾರಿಗಳು ಮೃತ ನೌಕರರ

3ನೇ ಪುಟಕ್ಕೆ

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಕಟ್ಟುನಿಟ್ಟಿನ ತಾಕೀತು: ಪರಿಹಾರ ವಿತರಣೆಯಲ್ಲಿ ವಿಳಂಬ ಸಲ್ಲ



ಬಳ್ಳಾರಿ,ಮೇ 27-

ಜಿಲ್ಲೆಯಲ್ಲಿ ನೈಸರ್ಗಿಕ ವಿಕೋಪ ಹಾಗೂ ಮಳೆಯಿಂದ ಹಾನಿಗೊಳಗಾದ ಸಂತ್ರಸ್ತರಿಗೆ ಪರಿಹಾರ ಒದಗಿಸುವಲ್ಲಿ ವಿಳಂಬ ಧೋರಣೆ ಸಲ್ಲದು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ತಾಕೀತು ಮಾಡಿದರು.

ಮುಂಬರುವ ಮುಂಗಾರು ಮಳೆ ಹಾಗೂ ಸಂಭವನೀಯ ಕುಡಿಯುವ ನೀರಿನ ಅಭಾವವನ್ನು ಎದುರಿಸಲು ಕೈಗೊಂಡಿರುವ ಮುಂಜಾಗ್ರತಾ ಕ್ರಮಗಳು ಮತ್ತು ಪ್ರಕೃತಿ ವಿಕೋಪ ನಿರ್ವಹಣೆಗೆ ಸಂಬಧಿಸಿದತೆ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮುಂಗಾರು ಮಳೆ ಆರಂಭವಾಗಿದ್ದು, ಮಳೆಯಿಂದ ಉಂಟಾಗ ಬಹುದಾದ ಪ್ರವಾಹ ಪರಿಸ್ಥಿತಿಯನ್ನು ಎದುರಿಸಲು ಅಧಿಕಾರಿಗಳು ಸನ್ನದ್ಧರಾಗಬೇಕು. ಪ್ರವಾಹ ಭೀತಿಯಿರುವ ನದಿ ತೀರದ ಗ್ರಾಮಗಳ ಕಡೆಗೆ ಅಧಿಕಾರಿಗಳು ನಿರಂತರ ನಿಗಾ ವಹಿಸಬೇಕು. ಯಾವುದೇ ಅನಾಹುತ ಸಂಭವಿಸಿದರೂ ತಕ್ಷಣವೇ ಸ್ಪಂದಿಸಬೇಕು ಎಂದು ತಿಳಿಸಿದರು.

ಮಳೆಯಿಂದಾಗಿ ಜಿಲ್ಲೆಯಲ್ಲಿ ಒಟ್ಟು 11 ಮನೆಗಳು ಭಾಗಶಃ ಹಾನಿಗೊಳಗಾಗಿವೆ. ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ, ಅರ್ಹರಿಗೆ ಸಿಗಬೇಕಾದ ತುರ್ತು ಪರಿಹಾರ ಹಾಗೂ ಸರ್ಕಾರದ ಇತರೆ ಸೌಲಭ್ಯಗಳು ತಲುಪುವಂತೆ ನೋಡಿಕೊಳ್ಳಬೇಕು. ಮೃತಪಟ್ಟ ಜಾನುವಾರುಗಳ ಮಾಲೀಕರಿಗೆ ಪರಿಹಾರ ನೀಡುವ ಪ್ರಕ್ರಿಯೆಯಲ್ಲಿ ಮರಣೋತ್ತರ ಪರೀಕ್ಷೆ (ಪಿಎಂ) ವರದಿ ಪಡೆಯುವಲ್ಲಿ ವಿಳಂಬವಾಗುತ್ತಿದೆ ಎಂಬ ದೂರುಗಳಿದ್ದು, ಜಾನುವಾರುಗಳು ಮೃತಪಟ್ಟ ದಿನವೇ ಪಿಎಂ ವರದಿ ಸಿದ್ಧವಾಗಬೇಕು. ವರದಿಗಾಗಿ ದಿನಗಟ್ಟಲೆ ಕಾಯಿಸುವುದು ಸರಿಯಲ್ಲ. ವರದಿ ಬಂದ ತಕ್ಷಣವೇ ಎಸಿ ಅವರಿಂದ ಅನುಮೋದನೆ ಪಡೆದು, ತಹಶೀಲ್ದಾರರು ವಿಳಂಬವಿಲ್ಲದೆ ಪರಿಹಾರದ ಹಣವನ್ನು ಪಾವತಿಸಬೇಕು. ಯಾವುದೇ ಕಾರಣಕ್ಕೂ ರೈತರನ್ನು ಕಚೇರಿಗಳಿಗೆ ಅಲೆದಾಡಿಸಬಾರದು ಎಂದು ಸ್ಪಷ್ಟಪಡಿಸಿದರು.

ಕುಡಿಯುವ ನೀರಿನ ಸಮಸ್ಯೆ ನಿರ್ವಹಣೆಗೆ ಸೂಚನೆ:

ಜಿಲ್ಲೆಯ ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ನೀರಿನ ಅಭಾವ ಉಂಟಾಗದತೆ ತಡೆಯಲು ಜಿ.ಪಂ ಹಾಗೂ ಪೌರಾಡಳಿತ ಇಲಾಖೆಗಳು ಜಂಟಿಯಾಗಿ ಕಾರ್ಯಯೋಜನೆ ರೂಪಿಸಬೇಕು. ತುರ್ತು ಪರಿಸ್ಥಿತಿಯಲ್ಲಿ ಬಾಡಿಗೆಗೆ ಪಡೆಯಲು ಖಾಸಗಿ ಕೊಳವೆಬಾವಿಗಳನ್ನು ಹಾಗೂ ಟ್ಯಾಂಕರ್ ಗಳನ್ನು ಗುರುತಿಸಿ ಕಾಯ್ದಿರಿಸಿಟ್ಟುಕೊಳ್ಳಬೇಕು. ಯಾವುದೇ ಪರಿಸ್ಥಿತಿಯಲ್ಲೂ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗಬಾರದು ಎಂದರು.

ಗ್ರಾಮೀಣ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಕುಡಿಯುವ ನೀರು ಒದಗಿಸುವ ಉದ್ದೇಶದಿಂದ ಸ್ಥಾಪಿಸಲಾಗಿರುವ ಆರ್‌ಓ (ಶುದ್ಧೀಕರಣ) ಪ್ಲಾಂಟ್‌ಗಳ ವಿದ್ಯುತ್ ಬಿಲ್ ಪಾವತಿ ಮತ್ತು ನಿರ್ವಹಣೆಗೆ ಸಂಬಧಿಸಿದತೆ ಉದ್ಭವಿಸಿರುವ ಗೊಂದಲಗಳನ್ನು ಶೀಘ್ರ ಇತ್ಯರ್ಥಪಡಿಸಬೇಕು ಎಂದರು.

ಗ್ರಾಮೀಣ ಭಾಗದಲ್ಲಿ ಈಗಾಗಲೇ ನೂರಾರು ಆರ್‌ಓ ಪ್ಲಾಂಟ್‌ಗಳು ದುರಸ್ತಿಯಲ್ಲಿದ್ದು, ಸರಿಯಾದ ನಿರ್ವಹಣೆ ಇಲ್ಲದೆ ಹಾಳಾಗುತ್ತಿರುವುದಕ್ಕೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಜಿಲ್ಲಾಧಿಕಾರಿಯವರು, ಇನ್ಮುಂದೆ ಯಾವುದೇ ಖಾಸಗಿ ಕಂಪನಿ ಅಥವಾ ಕೈಗಾರಿಕೆಗಳು ಸಿಎಸ್‌ಆರ್ ಅಡಿ ಹೊಸ ಆರ್‌ಓ ಪ್ಲಾಂಟ್‌ಗಳನ್ನು ಸ್ಥಾಪಿಸಬೇಕಾದರೆ ಪೂರ್ವಾನುಮತಿ ಕಡ್ಡಾಯವಾಗಿದೆ ಎಂದು ತಿಳಿಸಿದರು.

ಸಿಡಿಲು ಮತ್ತು ಮಿಂಚು ಬರುವಾಗ ಯಾವುದೇ ಕಾರಣಕ್ಕೂ ಮರಗಳ ಕೆಳಗೆ ನಿಲ್ಲಬಾರದು. ಸಿಡಿಲು ಬಡಿತದ ಮುನ್ನೆಚ್ಚರಿಕೆಗಳ ಬಗ್ಗೆ ಗ್ರಾಮೀಣ ಭಾಗದ ಜನರಿಗೆ ಮಾಹಿತಿ ತಲುಪಿಸಲು ಪ್ರತಿ ತಿಂಗಳು ಪಂಚಾಯಿತಿ ಮಟ್ಟದಲ್ಲಿ ಹಮ್ಮಿಕೊಳ್ಳುವ ಗ್ರಾಮ ಸಭೆಗಳಲ್ಲಿ ಅರಿವು ಮೂಡಿಸಬೇಕು. ಇದರೊಂದಿಗೆ, ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ತಮ್ಮ ವ್ಯಾಪ್ತಿಯ ಗ್ರಾಮಗಳಲ್ಲಿ ಧ್ವನಿವರ್ಧಕಗಳ (ಟಾಮ್ ಟಾಮ್) ಮೂಲಕ ಸಿಡಿಲಿನ ಸಂದರ್ಭದಲ್ಲಿ ಕೈಗೊಳ್ಳಬೇಕಾದ ಸುರಕ್ಷತಾ ಕ್ರಮಗಳ ಬಗ್ಗೆ ಜನರಿಗೆ ಕಡ್ಡಾಯವಾಗಿ ಜಾಗೃತಿ ಮೂಡಿಸಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

ನಗರ ಮತ್ತು ಗ್ರಾಮೀಣ ಭಾಗದ ರಾಜಕಾಲುವೆಗಳು, ಚರಂಡಿಗಳ ಹೂಳು ತೆಗೆಯಬೇಕು. ವಿದ್ಯುತ್ ಕಂಬಗಳು ಬಿದ್ದಲ್ಲಿ ನಿಗದಿತ ಕಾಲಾವಧಿಯೊಳಗೆ ವಿದ್ಯುತ್ ಸಂಪರ್ಕ ಮರುಸ್ಥಾಪಿಸಬೇಕು. ಮುಂಗಾರು ಮಳೆಯಿಂದಾಗಿ ಸಾಂಕ್ರಾಮಿಕ ರೋಗಗಳು ಹರಡುವ ಸಾಧ್ಯತೆ ಹೆಚ್ಚು ಇದ್ದು, ಇದಕ್ಕಾಗಿ ಸಮುದಾಯಗಳಲ್ಲಿ ಹೆಚ್ಚಾಗಿ ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಬೇಕು ಎಂದು ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೈರ್, ಮಹಾನಗರ ಪಾಲಿಕೆ ಆಯುಕ್ತ ಪಿ.ಎಸ್.ಮಂಜುನಾಥ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಬ್ದುಲ್ ರೆಹಮಾನ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರ ಇಂದುಧರ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿಡಿಯೋ ಮೂಲಕ ತಹಶೀಲ್ದಾರರು ಭಾಗವಹಿಸಿದ್ದರು.



ಕೃಷಿ ಅಧಿಕಾರಿಗಳು ಆಗ್ರೋ ಮಾಲೀಕರೊಂದಿಗೆ ಶಾಮೀಲು; ರೈತರ ಆರೋಪ

ಅಫಜಲಪುರ,ಮೇ.27-

ತಾಲೂಕಿನ ಕೃಷಿ ಅಧಿಕಾರಿಗಳು ರೈತರ ಪರವಾಗಿ ಕೆಲಸ ಮಾಡದೆ ಆಗ್ರೋ ಮಾಲಕರ ಪರವಾಗಿ ನಡೆದುಕೊಳ್ಳುತ್ತಿದ್ದಾರೆ ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ತಹಸೀಲ್ದಾರ್ ಅವರಿಗೆ ಮನವಿ ಪತ್ರ ನೀಡಿ ಮಾತನಾಡಿದ ಅವರು, ಇತ್ತೀಚೆಗೆ ಸುರಿದ ಭಾರೀ ಮಳೆ ಹಾಗೂ ಗಾಳಿಯಿಂದ ತಾಲೂಕಿನ ಅನೇಕ ರೈತರ ಬೆಳೆಗಳಿಗೆ ಹಾನಿಯಾಗಿದೆ. ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಅಧಿಕಾರಿಗಳು ಕೂಡಲೇ ರೈತರ ಜಮೀನಿಗೆ ಭೇಟಿ ನೀಡಿ ಬೆಳೆಹಾನಿ ಪರಿಶೀಲನೆ ನಡೆಸಿ ಸರ್ಕಾರದಿಂದ ಸೂಕ್ತ ಪರಿಹಾರ ದೊರಕಿಸಿಕೊಡಬೇಕು ಎಂದು ಆಗ್ರಹಿಸಿದರು.

ರೈತರ ಸಂಕಷ್ಟವನ್ನು ಅಧಿಕಾರಿಗಳು ನಿರ್ಲಕ್ಷಿಸಿದರೆ ರಸ್ತೆಗಿಳಿದು ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ನಂತರ ಮಾತನಾಡಿದ ತಾಲೂಕು ಪ್ರಧಾನ ಕಾರ್ಯದರ್ಶಿ ಶ್ರೀಶೈಲ ಗೋಳೆ, ತಾಲೂಕಿನ ವಿವಿಧ ಆಗ್ರೋ ಕೇಂದ್ರಗಳಲ್ಲಿ ಬೀಜ ಮತ್ತು ರಸಗೊಬ್ಬರಗಳನ್ನು ಮನಬಂದಂತೆ ಹೆಚ್ಚುವರಿ ದರಕ್ಕೆ ಮಾರಾಟ ಮಾಡಿ ರೈತರಿಂದ ಹಣ ವಸೂಲಿ ಮಾಡಲಾಗುತ್ತಿದೆ. ಆದರೆ ಕೃಷಿ ಅಧಿಕಾರಿಗಳು ಆಗ್ರೋ ಮಾಲಕರ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದಿರುವುದು ಅನುಮಾನಕ್ಕೆ ಕಾರಣವಾಗಿದೆ ಎಂದು ಆರೋಪಿಸಿದರು.

ಕೂಡಲೇ ರೈತರು ಹಾಗೂ ಆಗ್ರೋ ಮಾಲೀಕರ ಸಭೆ ಕರೆಯಬೇಕು. ಸಭೆಯಲ್ಲಿ ಆಗ್ರೋ ಮಾಲೀಕರು ರೈತರಿಗೆ ಯಾವ ರೀತಿಯಲ್ಲಿ ಅನ್ಯಾಯ ಹಾಗೂ ಮೋಸ ಮಾಡುತ್ತಿದ್ದಾರೆ ಎಂಬುದನ್ನು ಸ್ಪಷ್ಟಪಡಿಸಲಾಗುವುದು ಎಂದರು.

ತಕ್ಷಣ ಸಭೆ ಕರೆಯದಿದ್ದರೆ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ರೈತ ಸಂಘದ ಮುಖಂಡರು ಎಚ್ಚರಿಕೆ ನೀಡಿದರು.

ಈ ಸಂದರ್ಭದಲ್ಲಿ ಶಿವರಾಜ ಗೂಳೆ, ಪ್ರಶಾಂತ ರಾಚಗೋಳ್, ವಿರೇಶ ಜಮಾದಾರ , ಹಾಜಿ ಮಲ್ಲಬಾದ ಇದ್ದರು.

ಕೃಷಿ ಪರಿಕರಗಳ ಖರೀದಿಸುವಾಗ ಅನುಸರಿಸಬೇಕಾದ ಕ್ರಮಗಳು: ರೈತರಿಗೆ ಸಲಹೆ

ಕೊಪ್ಪಳ ಮೇ 27-

ರೈತರು ಕೃಷಿ ಪರಿಕರಗಳನ್ನು ಖರೀದಿಸುವ ಸಮಯದಲ್ಲಿ ಅನುಸರಿಸಬೇಕಾದ ಕ್ರಮಗಳ ಬಗ್ಗೆ ಕೃಷಿ ಇಲಾಖೆಯಿಂದ ರೈತರಿಗೆ ಸಲಹೆಗಳನ್ನು ನೀಡಲಾಗಿದೆ.

ಈ ವರ್ಷದ ಮುಂಗಾರು ಹಂಗಾಮು ಉತ್ತಮವಾಗಿ ಪ್ರಾರಂಭಗೊಂಡಿದೆ. ಇಲ್ಲಿಯವರೆಗೆ ವಾಡಿಕೆ ಮಳೆಯ ಪ್ರಮಾಣ 64.30 ಮಿ.ಮೀ. ಇದ್ದು, ವಾಸ್ತವಿಕ ಮಳೆಯ ಪ್ರಮಾಣ 92.00 ಮಿ.ಮೀ. ದಾಖಲಾಗಿದೆ. 43% ಹೆಚ್ಚಿನ ಮಳೆಯಾಗಿದ್ದು, ಮಳೆಯು ಪ್ರಾರಂಭವಾಗಿರುವುದರಿಂದ ಈ ಹಂಗಾಮು ಆಶಾದಾಯಕವಾಗಿರುವ ನಿರೀಕ್ಷೆಯಿದೆ. ಈ ಸಂದರ್ಭದಲ್ಲಿ ರೈತರು ಕೆಲವು ಕ್ರಮಗಳನ್ನು ಕೈಗೊಳ್ಳುವುದು ಅಗತ್ಯವಾಗಿದೆ.

ಅಧೀಕೃತ ಬಿತ್ತನೆ ಬೀಜ ಹಾಗೂ ರಸಗೊಬ್ಬರ ಮಾರಾಟ ಮಳಿಗೆಗಳಿಂದ ಮಾತ್ರ ಬಿತ್ತನೆ ಬೀಜ, ರಸಗೊಬ್ಬರ ಮತ್ತು ಇತರೆ ಕೃಷಿ ಪರಿಕರಗಳನ್ನು ಖರೀದಿಸಬೇಕು. ಬಿಡಿ (ಲೂಸ್) ಬಿತ್ತನೆ ಬೀಜಗಳನ್ನು ಖರೀದಿಸಬಾರದು. ಖರೀದಿಸುವ ಸಂದರ್ಭದಲ್ಲಿ ಕಡ್ಡಾಯವಾಗಿ ಬಿಲ್ ಪಡೆದುಕೊಳ್ಳಬೇಕು ಹಾಗೂ ಬಿಲ್ಲಿನಲ್ಲಿ ಉಲ್ಲೇಖಿತ ವಿವರಗಳನ್ನು ಪರಿಶೀಲಿಸಬೇಕು. ಬಿಲ್‌ನಲ್ಲಿ ಲಾಟ್ ಸಂಖ್ಯೆ ಅಥವಾ ಬ್ಯಾಚ್ ಸಂಖ್ಯೆ ಇರುವುದನ್ನು ಖಾತ್ರಿಪಡಿಸಿಕೊಳ್ಳಬೇಕು. ತಮ್ಮ ಜಮೀನಿನ ಸ್ವರೂಪಕ್ಕೆ (ಖುಷ್ಕಿ ಅಥವಾ ನೀರಾವರಿ) ಅನುಗುಣವಾಗಿ ಶಿಫಾರಸ್ಸು ಮಾಡಿದ ತಳಿಗಳನ್ನು ಆಯ್ಕೆ ಮಾಡಿಕೊಳ್ಳಬೇಕು.

ರೈತರು ಯೂರಿಯಾ ರಸಗೊಬ್ಬರ ಖರೀದಿಸಲು ಎಫ್‌ಐಡಿ ಕಡ್ಡಾಯವಾಗಿದ್ದು, ಆಧಾರ್ ಕಾರ್ಡ್‌ನೊಂದಿಗೆ ಮಾರಾಟ ಮಳಿಗೆ ಅಥವಾ ಸೊಸೈಟಿಗಳಿಗೆ ಭೇಟಿ ನೀಡಿ ಖರೀದಿ ಮಾಡಬೇಕು. ರೈತರು ತಾವು ಬೆಳೆಯುವ ಬೆಳೆಯ ಪ್ರಕಾರ ಶಿಫಾರಸ್ಸು ಮಾಡಿದ ಪ್ರಮಾಣದಲ್ಲಿ ರಸಗೊಬ್ಬರಗಳನ್ನು ಖರೀದಿಸಬೇಕು ಹಾಗೂ ಕಡ್ಡಾಯವಾಗಿ ಖರೀದಿ ಬಿಲ್ ಪಡೆಯಬೇಕು. ಡಿ.ಎ.ಪಿ. ರಸಗೊಬ್ಬರದ ಪರ್ಯಾಯವಾಗಿ 20:20:0:13, ನ್ಯಾನೋ ಡಿಎಪಿ, ಯೂರಿಯಾ ರಸಗೊಬ್ಬರದ ಪರ್ಯಾಯವಾಗಿ ನ್ಯಾನೋ ಯೂರಿಯಾ ರಸಗೊಬ್ಬರಗಳನ್ನು ಬಳಸಬಹುದು.

ಬೆಳೆಗಳಿಗೆ ಶಿಫಾರಸ್ಸು ಮಾಡಿರುವ ಪೀಡೆನಾಶಕಗಳನ್ನು ಮಾತ್ರ ಬಳಸಬೇಕು. ಕಳೆನಾಶಕಗಳ ಬಳಕೆಯ ವೇಳೆ ಎಚ್ಚರಿಕೆಯಿಂದಿರಬೇಕು. ಪೀಡೆನಾಶಕ ಸಿಂಪಡನೆ ಮಾಡುವ ವೇಳೆ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು. ರೈತರು ಬಿತ್ತನೆ ಬೀಜ, ರಸಗೊಬ್ಬರ ಹಾಗೂ ಇತರೆ ಕೃಷಿ ಪರಿಕರಗಳನ್ನು ಖರೀದಿಸುವ ಸಮಯದಲ್ಲಿ ಮಾರಾಟಗಾರರು ದಾಸ್ತಾನು ಹಾಗೂ ದರಪಟ್ಟಿ ಪದರ್ಶಿಸಿರುವುದು ಕಂಡು ಬಂದಿಲ್ಲದಿದ್ದಲ್ಲಿ, ಖರೀದಿ ಬಿಲ್‌ನ್ನು ನೀಡದೇ ಇದಲ್ಲಿ ಅಥವಾ ಕೃಷಿ ಪರಿಕರಗಳನ್ನು ಹೆಚ್ಚಿನ ದರದಲ್ಲಿ ಮಾರಾಟ ಮಾಡುವುದು ಕಂಡುಬಂದಲ್ಲಿ ಅಥವಾ ಕಳಪೆ ಗುಣಮಟ್ಟದ ಬೀಜ, ರಸಗೊಬ್ಬರ ಅಥವಾ ಕೀಟನಾಶಕ ಕಂಡುಬಂದಲ್ಲಿ ಕೃಷಿ ಇಲಾಖೆಯ ಅಧಿಕಾರಿಗಳಾದ ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರಾದ ಜೀವನಸಾಬ ಮೊ.ಸಂ: 8277922143, ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರಾದ (ಜಾರಿದಳ) ಎಂ.ಟಿ.ಸುನೀಲ್ ಕುಮಾರ ಮೊ.ಸಂ: 8277932117 ಮತ್ತು ಕೊಪ್ಪಳ ಸಹಾಯಕ ಕೃಷಿ ನಿರ್ದೇಶಕರಾದ (ಜಾರಿದಳ) ಇವರನ್ನು ಸಂಪರ್ಕಿಸಿ ಮಾಹಿತಿ ನೀಡುವಂತೆ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ

ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆ ಕಾಲಮಿತಿಯೊಳಗೆ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ಪೂರ್ಣಗೊಳಿಸಿ-ಜಿಲ್ಲಾಧಿಕಾರಿ



ಬಳ್ಳಾರಿ,ಮೇ 27-

ಜಿಲ್ಲೆಯಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಹೇಳಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಕೆಸ್ವಾನ್ ಹಾಲ್‌ನಲ್ಲಿ ಮಂಗಳವಾರ ಜನನ ಮತ್ತು ಮರಣ ನೊಂದಣಿ ಪ್ರಕ್ರಿಯೆ, ಬೆಳೆ ಅಂದಾಜು ಸಮೀಕ್ಷೆ ಹಾಗೂ ಕೃಷಿ ಗಣತಿಯ ವಿವಿಧ ಹಂತಗಳ ಪ್ರಗತಿ ಕುರಿತು ಏರ್ಪಡಿಸಿದ್ದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಯಾವುದೇ ಜನನ ಅಥವಾ ಮರಣ ಸಂಭವಿಸಿದಾಗ ಅದನ್ನು ನಿಗದಿತ ಅವಧಿಯೊಳಗೆ ನೋಂದಾಯಿಸುವುದು ಕಡ್ಡಾಯವಾಗಿದೆ. ತಾಲ್ಲೂಕು ಮಟ್ಟದ ಜನನ ಮತ್ತು ಮರಣ ಸಮನ್ವಯ ಸಮಿತಿ ಸಭೆಗಳು ಕಡ್ಡಾಯವಾಗಿ ಜರುಗಿಸಬೇಕು. ಈ ಕುರಿತು ಆಯಾ ತಾಲ್ಲೂಕು ತಹಶೀಲ್ದಾರರು ಮೇಲ್ವಿಚಾರಣೆ ನಡೆಸಬೇಕು ಎಂದು ಸೂಚಿಸಿದರು.

ಜನನ ಅಥವಾ ಮರಣ ಸಂಭವಿಸಿದ 21 ದಿನಗಳ ಒಳಗಾಗಿ ಉಚಿತವಾಗಿ ನೋಂದಣಿ ಮಾಡಬಹುದು. 21 ದಿನಗಳು ಕಳೆದ ನಂತರ ಮತ್ತು 30 ದಿನಗಳ ಒಳಗಾಗಿ ಸಣ್ಣ ಪ್ರಮಾಣದ ತಡಶುಲ್ಕ ಪಾವತಿಸಿ ನೋಂದಾಯಿಸಬಹುದು. 30 ದಿನಗಳ ನಂತರ ಮತ್ತು 1 ವರ್ಷದ ಒಳಗಾಗಿ ನೋಂದಣಿ ಮಾಡಬೇಕಾದರೆ ನಿಗದಿತ ಪ್ರಾಧಿಕಾರದ ಅನುಮತಿ ಮತ್ತು ತಡಶುಲ್ಕ ಬೇಕಾಗುತ್ತದೆ. ಒಂದು ವರ್ಷ ಕಳೆದರೆ ಮ್ಯಾಜಿಸ್ಟೆಟ್ ಆದೇಶದ ಮೇರೆಗೆ ಮಾತ್ರ ನೋಂದಣಿ ಮಾಡಲು ಅವಕಾಶವಿರುತ್ತದೆ. ಹಾಗಾಗಿ ಸಾರ್ವಜನಿಕರಿಗೆ ಯಾವುದೇ ರೀತಿಯಲ್ಲಿ ತೊಂದರೆಯಾಗದತೆ ನಿಗದಿತ ಅವಧಿಯೊಳಗೆ ನೋಂದಾಯಿಸಿಕೊಳ್ಳುವತೆ ಸೂಚಿಸಬೇಕು ಎಂದರು.

ಕೆಲವು ಖಾಸಗಿ ಮತ್ತು ಸರ್ಕಾರಿ ಆಸ್ಪತ್ರೆಗಳು ಮಗುವಿನ ಜನನ ಅಥವಾ ವ್ಯಕ್ತಿಯ ಮರಣದ ಮಾಹಿತಿಯನ್ನು ನಿಗದಿತ ಸಮಯದೊಳಗೆ ಸಾರ್ವಜನಿಕ ಆರೋಗ್ಯ ಅಧಿಕಾರಿಗಳಿಗೆ ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡದಿರುವುದು ವಿಳಂಬಕ್ಕೆ ಕಾರಣವಾಗಿದೆ. ಆಧಾರ್ ಕಾರ್ಡ್, ವಿಳಾಸದ ಪುರಾವೆ ಮತ್ತು ಆಸ್ಪತ್ರೆಯ ದಾಖಲೆಗಳಲ್ಲಿ ಸಣ್ಣ ತಪ್ಪುಗಳಿದ್ದರೂ ಅರ್ಜಿಗಳನ್ನು ತಿರಸ್ಕರಿಸಲಾಗುತ್ತಿದೆ ಅಥವಾ ಮರುಪರಿಶೀಲನೆಗೆ ಕಳುಹಿಸಲಾಗುತ್ತಿದೆ. ಜನನ ಮತ್ತು ಮರಣ ಪ್ರಮಾಣಪತ್ರಗಳು ಸಕಾಲದಲ್ಲಿ ಸಿಗದೇ ಇರುವುದರಿಂದ ಜನಸಾಮಾನ್ಯರ ದೈನಂದಿನ ಕೆಲಸಗಳಿಗೆ ಭಾರಿ ಹಿನ್ನಡೆಯಾಗುತ್ತಿದೆ ಎಂದು ವಿಷಾದ ವ್ಯಕ್ತಪಡಿಸಿದರು.

ಜಿಲ್ಲೆಯ ಬಳ್ಳಾರಿ, ಕಂಪ್ಲಿ, ಸಿರಗುಪ್ಪ, ಸಂಡೂರು ಹಾಗೂ ಕುರುಗೋಡು ವ್ಯಾಪ್ತಿಯಲ್ಲಿ ಕೈಗೊಳ್ಳಲಾದ ಕೃಷಿ ಹಾಗೂ ತೋಟಗಾರಿಕಾ ಬೆಳೆಗಳ ಕಟಾವು ಪ್ರಯೋಗಗಳನ್ನು ತಪ್ಪಿಲ್ಲದಂತೆ ನಮೂದಿಸಬೇಕು. ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸಿ ಸಲ್ಲಿಸುವಂತೆ ನಿರ್ದೇಶನ ನೀಡಿದರು.

★ಡಿಜಿಟಲ್ ತಂತ್ರಜ್ಞಾನದ ಬಳಕೆ:★

ಬೆಳೆ ಅಂದಾಜು ಸಮೀಕ್ಷೆಗಳನ್ನು ಹೆಚ್ಚು ಪಾರದರ್ಶಕ ಹಾಗೂ ನಿಖರವಾಗಿಸಲು ತಂತ್ರಜ್ಞಾನ ಆಧಾರಿತ ವರದಿ ಸರಣಿಯನ್ನು ಬಳಸಲಾಗುತ್ತಿದೆ. ಕಟಾವು ಪ್ರಯೋಗಗಳ ಐಡಿಗಳ ಮೂಲಕ ಪ್ರತಿಯೊಂದು ಕಟಾವು ಪ್ರಕ್ರಿಯೆಯ ಪ್ರಗತಿಯನ್ನು ಆನ್‌ಲೈನ್‌ನಲ್ಲಿ ನಮೂದಿಸಲಾಗುತ್ತಿದ್ದು, ತಪ್ಪುಗಳಿಗೆ ಆಸ್ಪದವಿಲ್ಲದಂತೆ ದತ್ತಾಂಶ ನಿರ್ವಹಣೆ ಮಾಡಲು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿ ಪತ್ರಿಬಸಪ್ಪ ಅವರು ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆ ವಿಭಾಗದ ಮಾಹಿತಿಯನ್ನು ಸಭೆಗೆ ನೀಡಿದರು.

ಸಭೆಯಲ್ಲಿ ಕಳೆದ ಸಾಲಿನಲ್ಲಿ ಜನನ ಮತ್ತು ಮರಣ ನೋಂದಣಿ ಪ್ರಕ್ರಿಯೆಯಲ್ಲಿ ಶೇ.100 ರಷ್ಟು ಪ್ರಗತಿ ಸಾಧಿಸಿದ ಟ್ರಾಮಾ ಕೇರ್ ಆಸ್ಪತ್ರೆಯ ಉಪ ನೋಂದಣಾಧಿಕಾರಿ ಡಾ.ರಮೇಶ್ ಅವರಿಗೆ ಜಿಲ್ಲಾಧಿಕಾರಿಯವರು ಅಭಿನಂದನಾ ಪತ್ರ ವಿತರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಯಲ್ಲಾ ರಮೇಶ್ ಬಾಬು, ಜಿಲ್ಲಾ ಶಸ್ತಚಿಕಿತ್ಸ ಕ ಡಾ.ಎನ್.ಬಸರೆಡ್ಡಿ ಸೇರಿದಂತೆ ಕಂದಾಯ, ಕೃಷಿ ಅಧಿಕಾರಿಗಳು ಹಾಗೂ ವಿಡಿಯೋ ಕಾನ್ಫರೆನ್ಸ್ ಮೂಲಕ ಎಲ್ಲಾ ತಾಲ್ಲೂಕಿನ ತಹಸೀಲ್ದಾರರು, ಪುರಸಭೆಯ ಮುಖ್ಯಾಧಿಕಾರಿಗಳು, ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಹಾಜರಿದ್ದರು.

ಜೂ.28ರಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮ



ಕಲಬುರಗಿ,ಮೇ.27-

ಜಿಲ್ಲೆಯಾದ್ಯಂತ ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ ಜೂನ್ 28ರಂದು ನಡೆಯಲಿದ್ದು, 0ರಿಂದ 5 ವರ್ಷದೊಳಗಿನ ಯಾವುದೇ ಮಗು ಲಸಿಕೆಯಿಂದ ಹೊರಗುಳಿಯದಂತೆ ಅಧಿಕಾರಿಗಳು ವಿಶೇಷ ಗಮನ ಹರಿಸಬೇಕು ಎಂದು ಜಿಲ್ಲಾಧಿಕಾರಿ ಇಕ್ರಮ್ ಶರೀಫ್ ಸೂಚಿಸಿದರು.

ಮಂಗಳವಾರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಬಸ್ ನಿಲ್ದಾಣ, ರೈಲ್ವೆ ನಿಲ್ದಾಣ ಹಾಗೂ ಹೆದ್ದಾರಿ ಚೆಕ್‌ಪೋಸ್ಟ್‌ಗಳಂತಹ ಹೈ ರಿಸ್ಕ್ ಪ್ರದೇಶಗಳಲ್ಲಿ ತೀವ್ರ ನಿಗಾವಹಿಸಬೇಕು ಎಂದು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜೂನ್ 28ರಂದು ಜಿಲ್ಲೆಯಾದ್ಯಂತ ವಿವಿಧ ಬೂತ್‌ಗಳಲ್ಲಿ ಮಕ್ಕಳಿಗೆ ಪೋಲಿಯೋ ಲಸಿಕೆ ನೀಡಲಾಗುವುದು. ನಂತರ ಜೂನ್ 29, 30 ಹಾಗೂ ಜುಲೈ 1ರಂದು ಮನೆ ಮನೆಗೆ ಭೇಟಿ ನೀಡುವ ಮೂಲಕ ಲಸಿಕೆ ಪಡೆಯದ ಮಕ್ಕಳನ್ನು ಪತ್ತೆಹಚ್ಚಿ ಲಸಿಕೆ ನೀಡಲು 1,475 ತಂಡಗಳನ್ನು ನಿಯೋಜಿಸಲಾಗುವುದು ಎಂದು ತಿಳಿಸಿದರು. ಯಾವುದೇ ಕಾರಣಕ್ಕೂ ಒಂದು ಮಗುವೂ ಲಸಿಕೆಯಿಂದ ವಂಚಿತವಾಗಬಾರದು ಎಂದು ಅವರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಈ ಬಾರಿ ಜಿಲ್ಲೆಯಲ್ಲಿ 5 ವರ್ಷದೊಳಗಿನ ಅಂದಾಜು 3,51,716 ಮಕ್ಕಳಿಗೆ ಲಸಿಕೆ ನೀಡುವ ಗುರಿ ಹೊಂದಲಾಗಿದೆ. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿ ಒಟ್ಟು 1,519 ಲಸಿಕಾ ಕೇಂದ್ರಗಳನ್ನು ತೆರೆಯಲಾಗುತ್ತಿದ್ದು, 3,364 ಸಿಬ್ಬಂದಿ ಹಾಗೂ 334 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ. ಜೊತೆಗೆ 132 ಟ್ರಾನ್ಸಿಟ್ ತಂಡಗಳು ಮತ್ತು ದೂರದ ಪ್ರದೇಶಗಳಿಗಾಗಿ 31 ಸಂಚಾರಿ ತಂಡಗಳು ಕಾರ್ಯನಿರ್ವಹಿಸಲಿವೆ. ಅಂಗನವಾಡಿ ಹಾಗೂ ಶಾಲೆಗಳಲ್ಲಿ ಕೇಂದ್ರಗಳನ್ನು ತೆರೆಯಲು ಸಿದ್ಧತೆ ಮಾಡಿಕೊಳ್ಳುವಂತೆ ಜಿಲ್ಲಾಧಿಕಾರಿ ಸೂಚಿಸಿದರು.

ಕಾರ್ಮಿಕ ಇಲಾಖೆ ಸಹಯೋಗದೊಂದಿಗೆ ವಲಸೆ ಕಾರ್ಮಿಕರು ಮತ್ತು ಕಟ್ಟಡ ಕಾರ್ಮಿಕರ ಮಕ್ಕಳಿಗಾಗಿ ವಿಶೇಷ ಮೈಕ್ರೋ ಪ್ಲಾನ್ ಸಿದ್ಧಪಡಿಸಬೇಕು. ಕೊಳಗೇರಿ ಪ್ರದೇಶಗಳು, ಇಟ್ಟಿಗೆ ಭಟ್ಟಿಗಳು ಹಾಗೂ ವಲಸೆ ಕಾರ್ಮಿಕರ ವಸತಿ ಪ್ರದೇಶಗಳ ಮೇಲೆ ವಿಶೇಷ ನಿಗಾವಹಿಸಿ, ಉನ್ನತಾಧಿಕಾರಿಗಳ ತಂಡಗಳು ಖುದ್ದಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ತಿಳಿಸಿದರು.

ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವ ಮೂಲಕ ರಾಷ್ಟ್ರೀಯ ಅಭಿಯಾನವನ್ನು ಯಶಸ್ವಿಗೊಳಿಸಬೇಕು ಎಂದು ಮನವಿ ಮಾಡಿದ ಜಿಲ್ಲಾಧಿಕಾರಿಗಳು, ಕರಪತ್ರ ಹಾಗೂ ಸಾಮಾಜಿಕ ಜಾಲತಾಣಗಳ ಮೂಲಕ ಹೆಚ್ಚಿನ ಜಾಗೃತಿ ಮೂಡಿಸುವಂತೆ ಸೂಚಿಸಿದರು.

ಪಲ್ಸ್ ಪೋಲಿಯೋ ಕಾರ್ಯಕ್ರಮ ಯಶಸ್ವಿಗೆ ಶಿಕ್ಷಣ, ಸಾರಿಗೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ಕಟ್ಟಡ ಕಾರ್ಮಿಕ ಹಾಗೂ ಪೊಲೀಸ್ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳು ಸ'ವ'ು'ನ್'ವ'ಯ'ದಿ'ಂ'ದ' ಕಾರ್ಯನಿರ್ವಹಿಸಬೇಕು ಎಂದು ಹೇಳಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಸಂಕನೂರ, ಮಹಾನಗರ ಪಾಲಿಕೆ ಆಯುಕ್ತ ಅವಿನಾಶ್ ಶಿಂಧೆ, ಡಿಎಚ್‌ಓ ಡಾ. ಶರಣಬಸಪ್ಪ ಕ್ಯಾತನಾಳ, ಜಿಲ್ಲಾ ಸರ್ಜನ್ ಡಾ. ರುಖಿಯಾ ಅಸನಾರಬ್, ಆರ್‌ಸಿಎಚ್ ಅಧಿಕಾರಿ ಡಾ. ಸಿದ್ದು ಪಾಟೀಲ, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕಿ ಶಂಕ್ರಮ್ಮ ಡವಳಗಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಕುಮಾರ್ ರಾಠೋಡ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು, ವೈದ್ಯಾಧಿಕಾರಿಗಳು, ಅಂಗನವಾಡಿ ಮತ್ತು ಆಶಾ ಕಾರ್ಯಕರ್ತರು ಉಪಸ್ಥಿತರಿದ್ದರು.

ಮಳೆಗಾಲದಲ್ಲಿ ಸೊಳ್ಳೆ ನಿಯಂತ್ರಿಸಿ, ರೋಗ ಮುಕ್ತರಾಗಿರಿ: ಸಾರ್ವಜನಿಕರಿಗೆ ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು ಕರೆ

ಬಳ್ಳಾರಿ,ಮೇ 27-



ಮಳೆಗಾಲದ ಆರಂಭದ ಹಿನ್ನೆಲೆಯಲ್ಲಿ ಸಾರ್ವಜನಿಕರು ತಮ್ಮ ಮನೆಯ ಸುತ್ತಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ನೀರಿನ ಸಂಗ್ರಹಕಗಳನ್ನು ವಾರಕ್ಕೊಮ್ಮೆ ಸ್ವಚ್ಛಗೊಳಿಸುವ ಮೂಲಕ ಹಾಗೂ ಚರಂಡಿಗಳಲ್ಲಿ ಕಸಕಡ್ಡಿಗಳು ತುಂಬಿಕೊಳ್ಳದತೆ ನೀರು ಸರಾಗವಾಗಿ ಹರಿಯಲು ಬಿಡುವುದರಿಂದ ಸೊಳ್ಳೆಗಳಿಂದ ಹರಡುವ ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟಬಹುದು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಯಲ್ಲಾ ರಮೇಶಬಾಬು ಅವರು ವಿನಂತಿಸಿದ್ದಾರೆ.

ಸೊಳ್ಳೆಗಳ ಉತ್ಪತ್ತಿ ತಾಣಗಳ ನಾಶಕ್ಕೆ ಕರೆ: ಮನೆಯ ಸುತ್ತಮುತ್ತ ಹಾಗೂ ಮೇಲ್ಭಾಗದಲ್ಲಿ, ಹೂವಿನ ಕುಂಡ ಗಳು, ಟಿನ್, ಪ್ಲಾಸ್ಟಿಕ್ ಕಪ್‌ಗಳಲ್ಲಿ ಮಳೆ ನೀರು ನಿಲ್ಲದಂತೆ ನೋಡಿಕೊ ಳ್ಳಬೇಕು. ಇಲ್ಲದಿದ್ದರೆ ಇವು ಸೊಳ್ಳೆಗಳ ಉತ್ಪತ್ತಿ ಕೇಂದ್ರಗಳಾಗುತ್ತವೆ. ನೀರು ಸಂಗ್ರಹಿಸುವ ಡ್ರಮ್, ಬ್ಯಾರೆಲ್, ಸಿಮೆಂಟ್ ತೊಟ್ಟಿ, ಮಡಿಕೆ ಮುಂತಾದವುಗಳನ್ನು ನೀರು ತುಂಬುವ ಮುನ್ನ ಚೆನ್ನಾಗಿ ತಿಕ್ಕಿ ತೊಳೆದು, ಸರಿಯಾಗಿ ಮುಚ್ಚಳ ಮುಚ್ಚಬೇಕು ಎಂದು ಹೇಳಿದ್ದಾರೆ.

ಸಿಡಿಲು-ಮಿಂಚಿನ ಸಂದರ್ಭದಲ್ಲಿ ಸುರಕ್ಷತೆ ಮುಖ್ಯ: ಮಾನ್ಸೂನ್ ಮಳೆಯ ಆರಂಭದಲ್ಲಿ ಗುಡುಗು, ಮಿಂಚು ಸಹಿತ ಮಳೆ ಬರುವ ಸಾಧ್ಯತೆ ಹೆಚ್ಚಿರುತ್ತದೆ. ಈ ವೇಳೆ ಬಯಲು ಪ್ರದೇಶದಲ್ಲಿದ್ದರೆ ತಕ್ಷಣವೇ ತಗ್ಗು ಪ್ರದೇಶಕ್ಕೆ ಹೋಗಿ ಕುಳಿತುಕೊಳ್ಳಬೇಕು. ಒಂದು ವೇಳೆ ಆಶ್ರಯ ಪಡೆಯಲು ಯಾವುದೇ ತಗ್ಗು ಪ್ರದೇಶವಿಲ್ಲದೆ ಬಯಲಿನಲ್ಲೇ ಇರಬೇಕಾಗಿ ಬಂದರೆ, ತಲೆಯನ್ನು ಮೊಣಕಾಲುಗಳ ನಡುವೆ ಹುದುಗಿಸಿಕೊಂಡು ಕುಳಿತುಕೊಳ್ಳಬೇಕು. ಇದು ಮಿಂಚಿನಿದ ಮೆದುಳು ಮತ್ತು ಹೃದಯಕ್ಕೆ ಆಗುವ ಹಾನಿಯನ್ನು ತಪ್ಪಿಸುತ್ತದೆ. ಮರಗಳಿರುವ ಪ್ರದೇಶದಲ್ಲಿದ್ದರೆ ತಕ್ಷಣವೇ ಅಲ್ಲಿಂದ ಹೊರಬರುವುದು ಸುರಕ್ಷಿತ ಎಂದು ಅವರು ತಿಳಿಸಿದ್ದಾರೆ.

ಕಲುಷಿತ ನೀರು ಮತ್ತು ವಾಂತಿ-ಭೇದಿ ನಿಯಂತ್ರಣಕ್ಕೆ ಕ್ರಮ: ಮಳೆಯಿಂದಾಗಿ ನೀರಿನ ಮೂಲಗಳಿಗೆ ಹೊಸ ನೀರು ಬಂದು ಸೇರುವುದರಿಂದ, ಶುದ್ಧೀಕರಿಸದ ನೀರನ್ನು ಕುಡಿದರೆ ವಾಂತಿ-ಭೇದಿ ಉಂಟಾಗುವ ಸಾಧ್ಯತೆ ಇರುತ್ತದೆ. ಹಾಗಾಗಿ ಸಾರ್ವಜನಿಕರು ಕ್ಲೋರಿನೇಷನ್ ಕೈಗೊಂಡು ಶುದ್ಧೀಕರಿಸಿದ ಕುಡಿಯುವ ನೀರು ಅಥವಾ ಶುದ್ಧೀಕರಣ ಘಟಕದ ನೀರನ್ನೇ ಬಳಸಬೇಕು. ಸಾಧ್ಯವಿದ್ದಲ್ಲಿ ನೀರನ್ನು ಚೆನ್ನಾಗಿ ಕುದಿಸಿ ಆರಿಸಿ, ಸೋಸಿ ಕುಡಿಯಬೇಕು. ಬಿಸಿಯಾದ ಆಹಾರ ಪದಾರ್ಥಗಳನ್ನೇ ಸೇವಿಸಬೇಕು. ಊಟಕ್ಕೆ ಮುಂಚೆ ಮತ್ತು ಶೌಚಾಲಯದ ಬಳಕೆಯ ನಂತರ ಕೈಗಳನ್ನು ಸಾಬೂನಿನಿಂದ ಸ್ವಚ್ಛವಾಗಿ ತೊಳೆದುಕೊಳ್ಳಬೇಕು ಹಾಗೂ ಕಡ್ಡಾಯವಾಗಿ ಶೌಚಾಲಯವನ್ನೇ ಬಳಸಬೇಕು.

ಆತಂಕ ಬೇಡ, ಆಸ್ಪತ್ರೆಗಳಲ್ಲಿ ಔಷಧಿ ದಾಸ್ತಾನು ಇದೆ:

ಮೇ, ಜೂನ್, ಜುಲೈ ಮತ್ತು ಆಗಸ್ಟ್ ತಿಂಗಳುಗಳಲ್ಲಿ ವಾತಾವರಣ ಬ'ದ'ಲಾ'ಗ'ು'ವ'ು'ದ'ರಿ'ಂ'ದ' ಸಾರ್ವಜನಿಕರು ಆರೋಗ್ಯದ ಕಡೆಗೆ ಹೆಚ್ಚಿನ ಗಮನ ಹರಿಸಬೇಕು. ಎಲ್ಲಾ ಸರ್ಕಾರಿ ಆಸ್ಪತ್ರೆಗಳಲ್ಲಿ ಅಗತ್ಯ ಔಷಧಿಗಳನ್ನು ಈಗಾಗಲೇ ದಾಸ್ತಾನು ಮಾಡಲಾಗಿದ್ದು, ಸಾರ್ವಜನಿಕರು ಯಾವುದೇ ಆತಂಕಕ್ಕೆ ಒಳಗಾಗದೆ, ಅನಾರೋಗ್ಯ ಕಂಡುಬದಲ್ಲಿ ತಕ್ಷಣ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆಯಬೇಕು ಎಂದು ಡಿಹೆಚ್‌ಓ ಡಾ.ಯಲ್ಲಾ ರಮೇಶಬಾಬು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಒಂದನೇಯ ಪುಟದಿಂದ

ಜಿಲ್ಲಾ ಉಸ್ತುವಾರಿ ಜಿಲ್ಲೆಯ ನಾಯಕರಿಗೇ ಇರಲಿ: ಸ್ಥಳೀಯರ ಒತ್ತಾಯ!

ಎಂದು ಆರೋಪಿಸಿದರು.

ನಗರಸಭೆ ಉಪಾಧ್ಯಕ್ಷ ಸಾಜಿದ್ ಸಮೀರ್ ಮಾತನಾಡಿ, ''ನಮ್ಮ ಜಿಲ್ಲೆಯವರೇ ಜಿಲ್ಲಾ ಉಸ್ತುವಾರಿಯಾಗಿದ್ದರೆ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಇಚ್ಛಾಶಕ್ತಿ ಮೂಡುತ್ತದೆ. ಜಿಲ್ಲೆಗೆ ಉತ್ತಮ ಹೆಸರು ತರುವ ಉದ್ದೇಶದಿಂದ ಅನುದಾನ, ಪೋಸ್ಟಿಂಗ್ ಸೇರಿದಂತೆ ಹಲವು ಅನುಕೂಲಗಳು ದೊರೆಯುವ ಸಾಧ್ಯತೆಗೆ ಕೈ ಮೀರಿ ಕೆಲಸ ಮಾಡುತ್ತಾರೆ. ಇದಕ್ಕೂ ಮೊದಲು ಜಿಲ್ಲಾ ಉಸ್ತುವಾರಿಯಾಗಿ ತನ್ವೀರ್ ಸೇಠ್ ಕಾರ್ಯನಿರ್ವಹಿಸಿದ್ದು, ಜಿಲ್ಲೆಗೆ ಅನುದಾನ, ಅಭಿವೃದ್ಧಿ ಮಾಡುವಲ್ಲಿ ಸಾಧ್ಯವಾಗಲಿಲ್ಲ. ಜಿಲ್ಲೆಯವರೇ ಉಸ್ತುವಾರಿಯಾಗಿದ್ದರೆ ರಾಜಕೀಯ, ಶೈಕ್ಷಣಿಕ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳ ಅಭಿವೃದ್ಧಿಗೆ ಮತ್ತಷ್ಟು ಉತ್ತೇಜನ ಸಿಗುತ್ತದೆ'' ಎಂದು ತಿಳಿಸಿದರು.

ದಲಿತ ಮುಖಂಡ ಎಂ.ಆರ್. ಭೇರಿ ಮಾತನಾಡಿ, ''ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದಾಗಲೇ ನಮ್ಮ ಮೊದಲ ಬೇಡಿಕೆ ಜಿಲ್ಲೆಯ ಉಸ್ತುವಾರಿಯನ್ನು ನಮ್ಮ ಜಿಲ್ಲೆಯವರಿಗೇ ನೀಡಬೇಕು ಎಂಬುದಾಗಿತ್ತು. ಈ ಸಂಬಂಧ ಪತ್ರಿಕಾಗೋಷ್ಠಿಯನ್ನೂ ನಡೆಸಲಾಗಿತ್ತು. ಆದರೆ ನಮ್ಮ ಬೇಡಿಕೆ ಇನ್ನೂ ಈಡೇರಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಕೆಕೆಆರ್‌ಡಿಬಿ ಅನುದಾನ ಬಹುತೇಕ ಕಲಬುರಗಿ ಜಿಲ್ಲೆಗೆ ಮಾತ್ರ ಸೀಮಿತವಾಗುತ್ತಿದೆ. ಇದರಿಂದ ರಾಯಚೂರು ಜಿಲ್ಲೆಗೆ ಅನ್ಯಾಯವಾಗುತ್ತಿದೆ. ಈ ವಿಷಯವಾಗಿ ಹಲವು ಬಾರಿ ಹೋರಾಟಗಳು ಹಾಗೂ ಪತ್ರಿಕಾಗೋಷ್ಠಿಗಳನ್ನು ನಡೆಸಲಾಗಿದೆ'' ಎಂದು ಹೇಳಿದರು.

''ಕೆಕೆಆರ್‌ಡಿಬಿ ಅಧ್ಯಕ್ಷ ಅಜಯ್ ಸಿಂಗ್ ಕೂಡ ಕಲಬುರಗಿ ಜಿಲ್ಲೆಯವರೇ. ರಾಯಚೂರು ಜಿಲ್ಲಾ ಉಸ್ತುವಾರಿಯೂ ಕಲಬುರಗಿ ಜಿಲ್ಲೆಯವರೇ ಆಗಿರುವ ಕಾರಣ, ಅನುದಾನದ ಹಂಚಿಕೆ ಕಲಬುರಗಿ ಜಿಲ್ಲೆಗೆ ಹೆಚ್ಚು ಒಲಿಯುತ್ತಿದೆ. ಆದ್ದರಿಂದ ನಮ್ಮ ಜಿಲ್ಲೆಗೆ ನಮ್ಮ ಜಿಲ್ಲೆಯವರನ್ನೇ ಉಸ್ತುವಾರಿಯಾಗಿ ನೇಮಕ ಮಾಡಬೇಕು'' ಎಂದು ಅವರು ಆಗ್ರಹಿಸಿದರು.

ಸ್ಥಳೀಯ ಕಾರ್ಯಕರ್ತರ ಅಭಿಪ್ರಾಯದಂತೆ, ಜಿಲ್ಲೆಯ ಸಮಸ್ಯೆಗಳು, ರೈತರ ಸಂಕಷ್ಟ, ನೀರಾವರಿ ಯೋಜನೆಗಳು ಹಾಗೂ ಅಭಿವೃದ್ಧಿ ವಿಚಾರಗಳನ್ನು ಸಮಗ್ರವಾಗಿ ಅರ್ಥಮಾಡಿಕೊಂಡಿರುವ ನಾಯಕನಿಗೆ ಜಿಲ್ಲಾ ಉಸ್ತುವಾರಿ ಹೊಣೆ ನೀಡಿದರೆ ಮಾತ್ರ ರಾಯಚೂರಿನ ಅಭಿವೃದ್ಧಿಗೆ ಹೊಸ ದಿಕ್ಕು ಸಿಗಬಹುದು ಎಂದು ಜನರು ಆಶಾಭಾವನೆ ವ್ಯಕ್ತಪಡಿಸುತ್ತಿದ್ದಾರೆ. ಬದಲಾವಣೆ ವೇಳೆ ರಾಯಚೂರು ಜಿಲ್ಲಾ ಉಸ್ತುವಾರಿ ಸ್ಥಾನದಲ್ಲಿ ಬದಲಾವಣೆ ಆಗುತ್ತದೆಯೇ? ಒಂದು ವೇಳೆ ಬದಲಾವಣೆ ಆದರೆ ಸ್ಥಳೀಯ ನಾಯಕರಿಗೆ ಮಣೆ ಹಾಕಲಾಗುತ್ತದೆಯೇ? ಎಂಬ ಕುತೂಹಲ ಜಿಲ್ಲೆಯ ರಾಜಕೀಯ ವಲಯದಲ್ಲಿ ಹೆಚ್ಚಾಗಿದೆ. ಇದೀಗ ಪಕ್ಷದ ಹೈಕಮಾಂಡ್ ಯಾವ ನಿರ್ಧಾರ ಕೈಗೊಳ್ಳುತ್ತದೆ ಎಂಬುದನ್ನು ಕಾದು ನೋಡಬೇಕಾಗಿದೆ.

ರಾಜ್ಯದ ಹಲವೆಡೆ ಭಾರೀ ಅವಾಂತರ ಸೃಷ್ಟಿಸಿದ ಪೂರ್ವ ಮುಂಗಾರು ಮಳೆ

ಸುರಿದಿದ್ದು, ಜನರು ತೊಂದರೆ ಅನುಭವಿಸಬೇಕಾಯಿತು.ಕೆಲಸ ಕಾರ್ಯಗಳಿಗೆ ತೆರಳಲು ಹಾಗೂ ಬೀದಿಬದಿ ವ್ಯಾಪಾರಿಗಳು ತೊಂದರೆ ಅನುಭವಿಸುವಂತಾಯಿತು.

ರಾಯಚೂರು ತಾಲ್ಲೂಕಿನ ಕಡಗಂದೊಡ್ಡಿಯಲ್ಲಿ ರೈತರೊಬ್ಬರಿಗೆ ಸಿಡಿಲು ಬಡಿದಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬೀದರ್‌ನಲ್ಲೂ ಸಹ ತಡರಾತ್ರಿ ಬಿರುಗಾಳಿ ಸಹಿತ ಭಾರೀ ಮಳೆಯಾಗಿದ್ದು, ತಗ್ಗುಪ್ರದೇಶಗಳಿಗೆ ನೀರು ನುಗ್ಗಿದೆ. ಅಕ್ಕಮಹಾದೇವಿ ಕಾಲೇಜಿನ ಕಾಂಪೌಂಡ್ ಕುಸಿದುಬಿದ್ದಿದೆ.

ಹುಲಸೂರು ಪಟ್ಟಣದಲ್ಲಿ ಮನೆಯ ಶೀಟ್ ಮೇಲಿಟ್ಟದ್ದ ಕಲ್ಲು ಬಿದ್ದು ಬಾಲಕಿಯೊಬ್ಬಳು ಸಾವನ್ನಪ್ಪಿದ್ದಾಳೆ. ಯಾದಗಿರಿ ಜಿಲ್ಲೆಯಲ್ಲಿ ಸುರಿದ ಮಳೆಗೆ ಕೇಂದ್ರ ಬಸ್ ನಿಲ್ದಾಣದ ಸಮೀಪದ ರಸ್ತೆ ಜಲಾವೃತಗೊಂಡಿದ್ದು, ವಾಹನ ಸವಾರರು ಪರದಾಡುವಂತಾಯಿತು.

ಕಾಫಿನಾಡು ಚಿಕ್ಕಮಗಳೂರಿನಲ್ಲಿ ನಿನ್ನೆ ಮಧ್ಯಾಹ್ನದಿಂದ ಬಿಟ್ಟುಬಿಟ್ಟು ಸುರಿಯುತ್ತಿರುವ ಮಳೆಯಿಂದ ಜನರು ಭಾರೀ ತೊಂದರೆ ಅನುಭವಿಸಿದರು. ರಸ್ತೆಯಲ್ಲಿ ನೀರು ಹರಿಯುತ್ತಿದ್ದ ಪರಿಣಾಮ ವಾಹನಗಳ ಸೈಲೆನ್ಸ ರ್‌ಗಳಿಗೆ ನೀರು ನುಗ್ಗಿ ರಸ್ತೆಯಲ್ಲಿ ಕೆಟ್ಟು ನಿಂತಿದ್ದ ದೃಶ್ಯಗಳು ಕಂಡುಬಂದವು.

ಕೋಲಾರ ಜಿಲ್ಲೆಯ ಮಾಲೂರಿನಲ್ಲಿ ಸುಮಾರು ಒಂದೂವರೆ ಗಂಟೆ ಬಿರುಗಾಳಿ ಸಹಿತ ಆಲಿಕಲ್ಲು ಮಳೆಯಾಗಿದ್ದು, ಹಲವೆಡೆ ಮರಗಳು, ವಿದ್ಯುತ್ ಕಂಬಗಳು ಧರೆಗುರುಳಿದ್ದು, ಮೂರು ಕಾರು ಹಾಗೂ ಎರಡು ಆಟೋಗಳು ಜಖಂಗೊಂಡಿರುವ ಘಟನೆ ಅರಳೀಕೆರೆ ರಸ್ತೆಯಲ್ಲಿ ನಡೆದಿದೆ.

ಮೈಸೂರು ಜಿಲ್ಲೆಯ ವಿವಿಧೆಡೆ ಮಳೆಯಾಗುತ್ತಿದ್ದು, ತಾಲ್ಲೂಕಿನ ಇಲವಾಲದಲ್ಲಿ ಸಿಡಿಲು ಬಡಿದು ಮಡಿಕೇರಿ ಮೂಲದ ರೋಶನ್ ಎಂಬಾತ ಮೃತಪಟ್ಟಿದ್ದಾರೆ. ಸಂಬಂಧಿಕರ ಮನೆಗೆ ಬಂದಿದ್ದ ಈತ ಇಲವಾಲದಲ್ಲಿ ನಿವೇಶನ ನೋಡಲು ಹೋಗಿದ್ದಾಗ ಸಿಡಿಲು ಬಡಿದು ಈ ಅವಘಡ ಸಂಭವಿಸಿದೆ. ರಾಜಧಾನಿ ಬೆಂಗಳೂರಿನಲ್ಲೂ ಸಹ ಭಾರೀ ಮಳೆಯಾಗುತ್ತಿದ್ದು, ಹಲವೆಡೆ ಮರಗಳು ಉರುಳಿಬಿದ್ದಿವೆ. ಮೇ 30 ರವರೆಗೆ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಪೆಟ್ರೋಲ್ ಬಂಕ್ ಬಳಿ ಡಿಸೇಲ್‌ಗಾಗಿ ಪರದಾಟ; ರೈತರ ಆಕ್ರೋಶ

ಡೀಸೆಲ್ ಸರಬರಾಜು ಖಚಿತಪಡಿಸಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ.

ಪ್ರತಿಭಟನೆ: ನಗರದ ಗಂಜ್ ಹಾಗೂ ಗಾಂಧಿ ಚೌಕ್ ಬಳಿಯ ಗೋವಿಂದರಾವ್ ಪೆಟ್ರೋಲ್ ಬಂಕ್ ಬಳಿ ರೈತರು ಕ್ಯಾನ್ ನಲ್ಲಿ ಡೀಸೆಲ್ ಹಾಕಿಲ್ಲ ಎಂದು ಆರೋಪಿಸಿ ಬಂಕ್ ಬಳಿ ಪ್ರತಿಭಟನೆ ನಡೆಸಿ ಆಕ್ರೋಶ ವ್ಯಕ್ತಪಡಿಸಿದರು.

ಸರ್ಕಾರಿ ನೌಕರರ ವೇತನ ಪ್ಯಾಕೇಜ್ ಯೋಜನೆಯಡಿ ಮೃತ ನೌಕರರ ಕುಟುಂಬಕ್ಕೆ ₹1 ಕೋಟಿ ಪರಿಹಾರ

ಕುಟುಂಬಕ್ಕೆ ಅಗತ್ಯ ಸಹಕಾರ ನೀಡುವುದಾಗಿ ಭರವಸೆ ನೀಡಿದರು.

ಕಾರ್ಯಕ್ರಮದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಜುಬೀನ್ ಮೋಹಪಾತ್ರ, ಎಸ್‌ಬಿಐ ಬ್ಯಾಂಕ್ ಅಧಿಕಾರಿಗಳು, ಸಂಘದ ಪದಾಧಿಕಾರಿ ಶಂಕರಗೌಡ ಎಸ್. ಪಾಟೀಲ್, ವಿವಿಧ ಇಲಾಖೆಗಳ ಅಧಿಕಾರಿಗಳು, ನೌಕರರು ಹಾಗೂ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

ವೇತನ ಪ್ಯಾಕೇಜ್ ಯೋಜನೆಗೆ ಹೆಸರು ಸೇರಿಸಿರುವುದನ್ನು ಪರಿಶೀಲಿಸಿಕೊಳ್ಳಿ

ಸರ್ಕಾರಿ ನೌಕರರು ತಮ್ಮ ವೇತನ ಖಾತೆ ಹೊಂದಿರುವ ಬ್ಯಾಂಕ್‌ನಲ್ಲಿ ವೇತನ ಪ್ಯಾಕೇಜ್ ಯೋಜನೆಯ ಅಡಿಯಲ್ಲಿ ತಮ್ಮ ಹೆಸರು ಸೇರಿಸಿರುವುದನ್ನು ಕಡ್ಡಾಯವಾಗಿ ಪರಿಶೀಲಿಸಿಕೊಳ್ಳಬೇಕು ಎಂದು ಸಂಘದ ಪದಾಧಿಕಾರಿಗಳು ಮನವಿ ಮಾಡಿದ್ದಾರೆ. ಯೋಜನೆಯ ಸೌಲಭ್ಯಗಳು ತುರ್ತು ಸಂದರ್ಭದಲ್ಲಿ ಕುಟುಂಬಗಳಿಗೆ ಆರ್ಥಿಕ ನೆರವಾಗುವುದರಿಂದ ಎಲ್ಲಾ ಸಿಬ್ಬಂದಿಗಳು ಬ್ಯಾಂಕ್‌ನಲ್ಲಿ ಮಾಹಿತಿ ಪಡೆದು ಖಚಿತಪಡಿಸಿಕೊಳ್ಳುವಂತೆ ತಿಳಿಸಿದ್ದಾರೆ.

ರಾಜ್ಯದ ಹಲವೆಡೆ ಭಾರೀ ಅವಾಂತರ ಸೃಷ್ಟಿಸಿದ ಪೂರ್ವ ಮುಂಗಾರು ಮಳೆ

ಬೆಂಗಳೂರು,ಮೇ 27-

ರಾಜ್ಯದ ಹಲವೆಡೆ ಪೂರ್ವ ಮುಂಗಾರು ಮಳೆ ಅಬ್ಬರಿಸಿದ್ದು, ಭಾರೀ ಅವಾಂತರ ಸೃಷ್ಟಿಸಿದ್ದು, ಜನಜೀವನ ಅಸ್ತವ್ಯಸ್ಥಗೊಂಡಿದೆ.ಬೆಂಗಳೂರು, ಬೆಂಗಳೂರು ಗ್ರಾಮಾಂತರ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ, ರಾಮನಗರ, ಮಂಡ್ಯ, ಮೈಸೂರು, ದಾವಣಗೆರೆ, ಚಿತ್ರದುರ್ಗ, ರಾಯಚೂರು, ಗುಲ್ಬರ್ಗ, ಹುಬ್ಬಳ್ಳಿ, ಬೀದರ್ ಸೇರಿದಂತೆ ಮತ್ತಿತರ ಜಿಲ್ಲೆಗಳಲ್ಲಿ ಮಳೆಯಾಗಿದೆ.




ರಾಯಚೂರಿನಲ್ಲಿ ಗುಡುಗು ಸಿಡಿಲು ಸಹಿತ ಮಳೆಯಾಗುತ್ತಿದ್ದು, ಇಂದು ಬೆಳ್ಳಂಬೆಳಿಗ್ಗೆಯೇ ಮಳೆ ಸುರಿದಿದ್ದು, ಜನರು ತೊಂದರೆ ಅನುಭವಿಸಬೇಕಾಯಿತು.ಕೆಲಸ ಕಾರ್ಯಗಳಿಗೆ ತೆರಳಲು ಹಾಗೂ ಬೀದಿಬದಿ ವ್ಯಾಪಾರಿಗಳು ತೊಂದರೆ ಅನುಭವಿಸುವಂತಾಯಿತು.

ರಾಯಚೂರು ತಾಲ್ಲೂಕಿನ ಕಡಗಂದೊಡ್ಡಿಯಲ್ಲಿ ರೈತರೊಬ್ಬರಿಗೆ ಸಿಡಿಲು ಬಡಿದಿದ್ದು, ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಬೀದರ್‌ನಲ್ಲೂ ಸಹ ತಡರಾತ್ರಿ ಬಿರುಗಾಳಿ ಸಹಿತ ಭಾರೀ ಮಳೆಯಾಗಿದ್ದು, ತಗ್ಗುಪ್ರದೇಶಗಳಿಗೆ ನೀರು ನುಗ್ಗಿದೆ. ಅಕ್ಕಮಹಾದೇವಿ ಕಾಲೇಜಿನ ಕಾಂಪೌಂಡ್ ಕುಸಿದುಬಿದ್ದಿದೆ.

ಹುಲಸೂರು ಪಟ್ಟಣದಲ್ಲಿ ಮನೆಯ ಶೀಟ್ ಮೇಲಿಟ್ಟದ್ದ ಕಲ್ಲು ಬಿದ್ದು ಬಾಲಕಿಯೊಬ್ಬಳು ಸಾವನ್ನಪ್ಪಿದ್ದಾಳೆ. ಯಾದಗಿರಿ ಜಿಲ್ಲೆಯಲ್ಲಿ ಸುರಿದ ಮಳೆಗೆ ಕೇಂದ್ರ ಬಸ್ ನಿಲ್ದಾಣದ ಸಮೀಪದ ರಸ್ತೆ ಜಲಾವೃತಗೊಂಡಿದ್ದು, ವಾಹನ ಸವಾರರು ಪರದಾಡುವಂತಾಯಿತು.

ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳುವುದು ಅಗತ್ಯ : ಪ್ರೊ. ವಾಮನ ಗಾಜ್ರೆ



ಕಲಬುರಗಿ,ಮೇ.27-

ಇಂದಿನ ತಂತ್ರಜ್ಞಾನ ಆಧಾರಿತ ಯುಗದಲ್ಲಿ ಭಾವನಾತ್ಮಕ ಬದುಕಿಗಿಂತ ಪ್ರಾಯೋಗಿಕ ಹಾಗೂ ವೈಚಾರಿಕ ಬದುಕು ಅತ್ಯಗತ್ಯವಾಗಿದ್ದು, ವಿದ್ಯಾರ್ಥಿಗಳು ವೈಜ್ಞಾನಿಕ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಸೇಡಂ ಸರ್ಕಾರಿ ಮಹಾವಿದ್ಯಾಲಯದ ಪ್ರಾಧ್ಯಾಪಕ ವಾಮನ ಗಾಜರೆ ಹೇಳಿದರು.

ನಗರದ ನೂತನ ವಿದ್ಯಾಲಯದ ರಸಾಯನಶಾಸ್ತ್ರ ವಿಭಾಗ ಹಾಗೂ ಐಕ್ಯೂಎಸಿ ಸಹಯೋಗದಲ್ಲಿ ಆಯೋಜಿಸಿದ್ದ ವಿಜ್ಞಾನ ಮೇಳದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ವೈಜ್ಞಾನಿಕ ಚಿಂತನೆ ವ್ಯಕ್ತಿಯ ತಾರ್ಕಿಕ ಸಾಮರ್ಥ್ಯವನ್ನು ವೃದ್ಧಿಸುವುದರ ಜೊತೆಗೆ ಸಮಾಜದಲ್ಲಿ ಜಾಗೃತಿ ಮೂಡಿಸಲು ಸಹಕಾರಿಯಾಗುತ್ತದೆ ಎಂದರು.

ವಿದ್ಯಾರ್ಥಿಗಳು ಪ್ರಯೋಗಾತ್ಮಕ ಅಧ್ಯಯನ, ಸಂಶೋಧನಾ ಮನೋವೃತ್ತಿ ಮತ್ತು ನವೀನ ಆವಿಷ್ಕಾರಗಳತ್ತ ಆಸಕ್ತಿ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ಗೌರವ ಉಪಸ್ಥಿತರಾಗಿ ಮಾತನಾಡಿದ ಮಹಾವಿದ್ಯಾಲಯದ ನಿವೃತ್ತ ಪ್ರಾಚಾರ್ಯ ಯುಜಿ ಸರದೇಶಪಾಂಡೆ, ಗೃಹ ವಿಜ್ಞಾನ, ಪೌಷ್ಟಿಕಾಂಶ, ಆಹಾರ ಸಂರಕ್ಷಣೆ ಹಾಗೂ ಆರೋಗ್ಯ ವಿಜ್ಞಾನಗಳ ಮಹತ್ವವನ್ನು ವಿವರಿಸಿದರು.

ಮಹಾವಿದ್ಯಾಲಯದ ನಿರ್ದೇಶಕ ಗೋವಿಂದ ಪೂಜಾರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ವಿಜ್ಞಾನ ಮೇಳದಲ್ಲಿ ಸುಮಾರು 20 ವಿದ್ಯಾರ್ಥಿಗಳು ವೈಜ್ಞಾನಿಕ ಮಾದರಿಗಳು, ರಾಸಾಯನಿಕ ಪ್ರತಿಕ್ರಿಯೆಗಳು, ಶಕ್ತಿ ಪರಿವರ್ತನೆ, ಪರಿಸರ ಸಂರಕ್ಷಣೆ ಹಾಗೂ ಜಲಶುದ್ಧೀಕರಣ ಸೇರಿದಂತೆ ವಿವಿಧ ವಿಷಯಾಧಾರಿತ ಪ್ರಯೋಗಗಳನ್ನು ಪ್ರದರ್ಶಿಸಿ ಗಮನ ಸೆಳೆದರು.

ನೂತನ ವಿದ್ಯಾಲಯ ಸಂಸ್ಥೆಯ ಅಧ್ಯಕ್ಷ ಗೌತಮ ಜಾಹಗಿರದಾರ ಹಾಗೂ ಸಂಸ್ಥೆಯ ಸದಸ್ಯರು ಮೇಳಕ್ಕೆ ಭೇಟಿ ನೀಡಿ ವಿದ್ಯಾರ್ಥಿಗಳ ವೈಜ್ಞಾನಿಕ ಮಾದರಿಗಳು ಮತ್ತು ಪ್ರಯೋಗಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ ವರ್ಗ ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕುಮಾರಿ ನಂದಿನಿ ಪ್ರಾರ್ಥನಾ ಗೀತೆ ಹಾಡಿದರು. ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥೆ ಹಾಗೂ ಕಾರ್ಯಕ್ರಮದ ಆಯೋಜಕರಾದ ಡಾ. ಅಶ್ವಿನಿ ಕೆ.ಆರ್. ಕಾರ್ಯಕ್ರಮ ನಿರೂಪಿಸಿದರು. ಪ್ರೊ. ಭಾರತಿ ಎಸ್.ಆರ್. ವಂದಿಸಿದರು.



ಜೆಎಸ್‌ಡಬ್ಲ್ಯೂ ಫೌಂಡೇಶನ್ ಕೌಶಲ್ಯ ತರಬೇತಿ : 66 ಮಂದಿಗೆ ಉದ್ಯೋಗ

ಸಂಡೂರು,ಮೇ.27-

ತಾಲೂಕಿನ ಸರ್ಕಾರಿ ಐಟಿಐ ಕಾಲೇಜಿನಲ್ಲಿ ಜೆಎಸ್‌ಡಬ್ಲ್ಯೂ ಫೌಂಡೇಶನ್ ವತಿಯಿಂದ ಗ್ರಾಮೀಣ ಯುವಕರಿಗಾಗಿ ಹಮ್ಮಿಕೊಳ್ಳಲಾಗಿದ್ದ ವಿದ್ಯುತ್ ತಂತ್ರಜ್ಞ ತರಬೇತಿ ಕಾರ್ಯಕ್ರಮದ ಮೊದಲ ಹಂತ ಯಶಸ್ವಿಯಾಗಿ ಪೂರ್ಣಗೊಂಡ ಹಿನ್ನೆಲೆಯಲ್ಲಿ, ತರಬೇತಿ ಪಡೆದ ಅಭ್ಯರ್ಥಿಗಳಿಗೆ ಪ್ರಮಾಣಪತ್ರ ಹಾಗೂ ಉದ್ಯೋಗ ನೇಮಕಾತಿ ಪತ್ರಗಳನ್ನು ವಿತರಿಸಲಾಯಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಸಂಡೂರು ಕ್ಷೇತ್ರದ ಶಾಸಕಿ ಅನ್ನಪೂರ್ಣ ತುಕಾರಾಮ್, ''ಗ್ರಾಮೀಣ ಯುವಕರಿಗೆ ಗುಣಮಟ್ಟದ ತಾಂತ್ರಿಕ ತರಬೇತಿ ನೀಡಿ ಉದ್ಯೋಗಾವಕಾಶ ಕಲ್ಪಿಸುತ್ತಿರುವ ಜೆಎಸ್‌ಡಬ್ಲ್ಯೂ ಫೌಂಡೇಶನ್ ಕಾರ್ಯ ಶ್ಲಾಘನೀಯ,'' ಎಂದು ಹೇಳಿದರು.

ಜೆಎಸ್‌ಡಬ್ಲ್ಯೂ ಫೌಂಡೇಶನ್ ದಕ್ಷಿಣ ವಿಭಾಗದ ಮುಖ್ಯಸ್ಥ ಪೆದ್ದಣ್ಣ ಬಿಡಾಲ ಮಾತನಾಡಿ, ''120 ವಿದ್ಯಾರ್ಥಿಗಳು ತರಬೇತಿ ಪಡೆದು ಪ್ರಮಾಣಪತ್ರ ಪಡೆದಿದ್ದು, ಅವರಲ್ಲಿ 66 ಮಂದಿಗೆ ಷ್ನೈಡರ್ ಎಲೆಕ್ಟ್ರಿಕ್, ಟೊಯೋಟಾ ಹಾಗೂ ಸ್ಟೋರ್ ಕ್ರಾಫ್ಟ್ ಸಂಸ್ಥೆಗಳಲ್ಲಿ ಉದ್ಯೋಗ ದೊರೆತಿದೆ. ಆಯ್ಕೆಯಾದ ಅಭ್ಯರ್ಥಿಗಳಿಗೆ ಸರಾಸರಿ 18 ಸಾವಿರ ರೂ. ವೇತನ ಸಿಗುತ್ತಿದೆ,'' ಎಂದು ಮಾಹಿತಿ ನೀಡಿದರು.

ಜೆಎಸ್‌ಡಬ್ಲ್ಯೂ ಸ್ಟೀಲ್ ಲಿಮಿಟೆಡ್ ಸಂಸ್ಥೆಯ ಮಾನವ ಸಂಪನ್ಮೂಲ ವಿಭಾಗದ ಮುಖ್ಯಸ್ಥ ಮಯೂರೇಶ್ ಬಾಪತ್ ಮಾತನಾಡಿ, ''ಯುವಕರಲ್ಲಿ ಕೌಶಲ್ಯ ಹಾಗೂ ಆತ್ಮವಿಶ್ವಾಸ ಬೆಳೆಸುವ ಮೂಲಕ ಕೈಗಾರಿಕೆಗಳಿಗೆ ಅಗತ್ಯವಿರುವ ಪರಿಣತ ಮಾನವ ಸಂಪನ್ಮೂಲ ಸಿದ್ಧಗೊಳಿಸಲಾಗುತ್ತಿದೆ,'' ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜೆಎಸ್‌ಡಬ್ಲ್ಯೂ ಎನರ್ಜಿ ಲಿಮಿಟೆಡ್ ಸಂಸ್ಥೆಯ ಶ್ರೀಕಾಂತ ಹೆಗಡೆ, ಸಿಎಸ್‌ಆರ್ ವಿಭಾಗದ ಶ್ರೇಷ್ಠ, ಗ್ರಾಮ ವಿಕಾಸ ಸೊಸೈಟಿಯ ಸಚಿನ್ ಅಳವಟಗಿ, ಕಾಲೇಜಿನ ಆಡಳಿತಾಧಿಕಾರಿ ಶಾಂತಪ್ಪ ಎಚ್ ಸೇರಿದಂತೆ ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಉಪಸ್ಥಿತರಿದ್ದರು.

ವಾಡಿ: ಶಾಂತಿ ಸೌಹಾರ್ದತೆಗೆ ಸಹಕರಿಸಲು ಡಿವೈಎಸ್ಪಿ ಕರೆ

ವಾಡಿ,ಮೇ.27-

ಪ್ರತಿ ಹಬ್ಬವನ್ನು ಶಾಂತಿ ಸುವ್ಯವಸ್ಥೆ ಮತ್ತು ಭ್ರಾತೃತ್ವದಿಂದ ಆಚರಿಸಲು ಹಾಗೂ ಸಹೋದರತೆ ಸಂದೇಶ ಸಾರಲು ಎಲ್ಲರೂ ಮುಂದೆ ಬರಬೇಕು. ಇದರ ವಿರುದ್ಧ ನಡೆಯುವವರ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಶಹಾಬಾದ ಡಿವೈಎಸ್ಪಿ ಶಂಕರಗೌಡ ಪಾಟೀಲ ಎಚ್ಚರಿಕೆ ನೀಡಿದರು.

ವಾಡಿ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮಂಗಳವಾರ ಆಯೋಜಿಸಿದ್ದ ಶಾಂತಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ತ್ಯಾಗ ಮತ್ತು ಬಲಿದಾನದ ಸಂಕೇತವಾದ ಬಕ್ರೀದ್ ಮೇ. 28ರಂದು ನಡೆಯಲಿದ್ದು ಯಾವುದೇ ಅಹಿತಕರ ಘಟನೆ ಸಂಭವಿಸಿದರೂ ಪೊಲೀಸ್ ಇಲಾಖೆ ಅಂತವರ ವಿರುದ್ಧ ಮುಲಾಜಿಲ್ಲದೆ ಕ್ರಮ ಜರುಗಿಸುತ್ತದೆ ಎಂದರು.

ಅಕ್ರಮ ಸಾಗಾಣಿಕೆ ಕಂಡುಬಂದರೆ ಪೊಲೀಸರಿಗೆ ಮಾಹಿತಿ ನೀಡಬೇಕು. ಸಾಮಾಜಿಕ ಸೌಹಾರ್ದತೆ ಉಳಿಸಲು ಪೊಲೀಸ್ ಇಲಾಖೆ ನಿರಂತರ ಶ್ರಮಿಸುತ್ತಿದೆ. ಇಲಾಖೆ ಸಹ ಎಲ್ಲೆಡೆ ಹದ್ದಿನ ಕಣ್ಣು ನೆಟ್ಟಿದ್ದು ನಿಮ್ಮ ಒಂದು ಸಣ್ಣ ಕಿಡಿಗೇಡಿ ಕೃತ್ಯ ಸಾಮಾಜಿಕ ಸ್ವಾಸ್ಥ್ಯ ಹಾಳು ಮಾಡುತ್ತದೆ. ಇಂತಹ ಸಮಯದಲ್ಲಿ ಪೊಲೀಸರು ಮಧ್ಯೆ ಪ್ರವೇಶಿಸಿ ಅಂತವರ ವಿರುದ್ಧ ಕ್ರಮ ಜರುಗಿಸುತ್ತದೆ ಎಂದು ಕಿವಿಮಾತು ಹೇಳಿದರು.

ತಹಶೀಲ್ದಾರ ನಾಗಯ್ಯ ಹಿರೇಮಠ ಮಾತನಾಡಿ,



ಯಾವುದನ್ನು ಪರೀಕ್ಷೆ ಮಾಡದೇ ಎಲ್ಲವನ್ನು ಸೋಶಿಯಲ್ ಮೀಡಿಯಾದಲ್ಲಿ ಹಾಕುವ ಚಾಳಿ ಇತ್ತೀಚಿಗೆ ಹೆಚ್ಚಾಗುತ್ತಿದೆ. ಘಟನೆ ಜರುಗಿದಾಗ ಅದರ ಸತ್ಯಾಸತ್ಯತೆ ಮತ್ತು ನೈಜತೆ ನೋಡಿ ಹಂಚಬೇಕು. ಸುಳ್ಳು ಇದ್ದರೆ ಕ್ರಮ ಜರುಗಿಸುವ ಕಾನೂನು ಬಂದಿದ್ದು ಇದು ಸಹ ಸಾಮಾಜಿಕ ಜಾಲತಾಣ ಬಳಸುವವರ ಗಮನಕ್ಕೆ ಇರಬೇಕು ಎಂದು ಕಿವಿ ಮಾತು ಹೇಳಿದರು.

ಮುಸ್ಲಿಂ ಸಮಾಜದ ಮುಖಂಡ ಸೈಯ್ಯದ್ ಬಾಬುಮಿಯ್ಯ ಮಾತನಾಡಿ, ಮೇ 28ರಂದು ಬಕ್ರೀದ್ ಹಬ್ಬ ಆಚರಣೆ ಮಾಡುತ್ತಿದ್ದು ಸಮಾಜದ ಎಲ್ಲಾ ಜಾತಿಯ ಎಲ್ಲಾ ಧರ್ಮದ ಜನರನ್ನು ಒಳಗೊಂಡು ಆಚರಣೆ ಮಾಡುತ್ತಿದ್ದು ಸೌಹಾರ್ದತೆಗೆ ಈ ಹಬ್ಬ ನಾಂದಿ ಹಾಡುತ್ತಿದೆ ಎಂದರು.


ಸಿಪಿಐ ಸಿದ್ದಬಸವನಗೌಡ,ಪಿಎಸ್‌ಐ ತಿರುಮಲೇಶ ಕುಂಬಾರ, ಪಶು ಪಾಲನಾ ಇಲಾಖೆ ಸಹಾಯಕ ನಿರ್ದೇಶಕ ಶಂಕರ ಕಣ್ಣಿ, ಪುರಸಭೆ ಮುಖ್ಯಾಧಿಕಾರಿ ಮನೋಜಕುಮಾರ ಗುರಿಕಾರ, ಸೂರ್ಯಕಾಂತ ರದ್ದೇವಾಡಿ, ಶರಣಬಸ್ಸು ಶಿರೂರುಕರ ಮಾತನಾಡಿದರು.

ಅಪರಾಧ ವಿಭಾಗದ ಪಿಎಸ್‌ಐ ರೇಣುಕಾ ಉಡಗಿ, ಬಷೀರ್ ಖುರೇಶಿ, ಶರಣು ನಾಟೀಕಾರ, ಮಹ್ಮದ್ ಗೌಸ್, ಸೂರ್ಯಕಾಂತ ರದ್ದೇವಾಡಿ, ಹರಿ ಗಲಾಂಡೆ, ರವಿ ಕಾರಬಾರಿ, ಶ್ರಾವಣಕುಮಾರ ಮೊಸಲಗಿ, ಮಲ್ಲಯ್ಯ ಗುತ್ತೇದಾರ, ನಾಗೇಂದ್ರ ಜೈಗಂಗಾ, ಸಿದ್ದು ಪೂಜಾರಿ, ಕಿಶಾನ ಜಾಧವ ಹಾಗೂ ಇನ್ನಿತರರು ಇದ್ದರು.

ಕರ್ನಾಟಕ ಪ.ಜಾತಿ/ಪ.ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ.ಜಿ ಬಳ್ಳಾರಿ ಪ್ರವಾಸ

ಬಳ್ಳಾರಿ,ಮೇ 27-

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಪಲ್ಲವಿ.ಜಿ ಅವರು ಮಂಗಳವಾರ ಬಳ್ಳಾರಿಗೆ ಆಗಮಿಸಿ, ಮೇ 28 ರವರೆಗೆ ಜಿಲ್ಲೆಯಲ್ಲಿ ಮೂರು ದಿನಗಳ ಕಾಲ ಪ್ರವಾಸ ಕೈಗೊಳ್ಳುವರು.



ಅಧ್ಯಕ್ಷರು ಮೇ 27 ರಂದು ಬೆಳಿಗ್ಗೆ 10.30 ಗಂಟೆಗೆ ಸಿರಗುಪ್ಪ ತಾಲ್ಲೂಕಿನ ಸಿರಿಗೇರಿ ಗ್ರಾಮದ ಶಂಭುಲಿಗೇಶ್ವರ ದೇವಾಲಯದ ಆವರಣದಲ್ಲಿ ಹಮ್ಮಿಕೊಂಡಿರುವ ಅನ್ನಪೂರ್ಣ ಪ್ರಕಾಶನದ ಪಿ.ಲಂಕೇಶ್ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಭಾಗವಹಿಸಿ ಪ್ರಶಸ್ತಿ ಪ್ರದಾನ ಮಾಡುವರು. ಮಧ್ಯಾಹ್ನ 03 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಅಲೆಮಾರಿ ಸಮುದಾಯದ ಸಂಘ ಸಂಸ್ಥೆಗಳಿದ ಹಾಗೂ ಸಾಮಾನ್ಯ ಜನರಿಂದ ಕುಂದುಕೊರತೆಗಳ ಅಹವಾಲು ಸ್ವೀಕರಿಸುವರು.

ಬಳಿಕ ಮಧ್ಯಾಹ್ನ 03.30 ಗಂಟೆಗೆ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಅನುಷ್ಠಾನ ಸಮಿತಿ ಅಧ್ಯಕ್ಷರ ನೇತೃತ್ವದಲ್ಲಿ ಸಮಾಜ ಕಲ್ಯಾಣ ಇಲಾಖೆ ಮತ್ತು ಜಿಲ್ಲಾ ಅನುಷ್ಠಾನ ಸಮಿತಿ ಸದಸ್ಯರು ಹಾಗೂ ಇತರೆ ಇಲಾಖಾ ಅಧಿಕಾರಿಗಳೊಂದಿಗೆ ನಿಗಮದ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ, ಅನುಪಾಲನಾ ವರದಿ ಹಾಗೂ ಜಿಲ್ಲಾಡಳಿತಕ್ಕೆ ನಡೆಸಲಾದ ಪತ್ರ ವ್ಯವಹಾರಗಳ ಕುರಿತು ಸಮಾಲೋಚನೆ ಸಭೆ ನಡೆಸುವರು. ಸಂಜೆ 5.30 ಗಂಟೆಗೆ ಅದೇ ಸಭಾಂಗಣದಲ್ಲಿ ಸುದ್ದಿಗೋಷ್ಠಿ ನಡೆಸುವರು. ಬಳಿಕ ವಾಸ್ತವ್ಯ ಮಾಡುವರು.

ಮೇ 28 ರಂದು ಬೆಳಿಗ್ಗೆ 10.30 ಗಂಟೆಗೆ ಬಳ್ಳಾರಿ ನಗರದ 6ನೇ ವಾರ್ಡ್, ಬಂಡಿಮೋಟ್ ತಾಯಮ್ಮ ಗುಡಿ ಹತ್ತಿರವಿರುವ ಕೊರಚರ ಗೇರಿಯ ಪರಿಶಿಷ್ಟ ಜಾತಿ ಅಲೆಮಾರಿ ಕೊರಚ ಸಮುದಾಯದ ಕುಟುಂಬಗಳು ವಾಸಿಸುವ ಸ್ಥಳಗಳಿಗೆ ಭೇಟಿ ನೀಡಿ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು.

ನಂತರ ಮಧ್ಯಾಹ್ನ 02 ಗಂಟೆಗೆ ಬಳ್ಳಾರಿಯಿಂದ ಬೆಂಗಳೂರಿಗೆ ಪ್ರಯಾಣಿಸುವರು ಎಂದು ಅಧ್ಯಕ್ಷರ ವಿಶೇಷ ಕರ್ತವ್ಯಾಧಿಕಾರಿ ಶಶಿಧರ್ ಎಂ.ಬಿ ಅವರು ತಿಳಿಸಿದ್ದಾರೆ.

ಕೃಷಿ ಬಿಕ್ಕಟ್ಟು, ನಕಲಿ ಬೀಜ ರಸಗೊಬ್ಬರ ಹಾವಳಿ ವಿರುದ್ಧ ಸಿಪಿಐ ಎಐಕೆಎಸ್ ಜಂಟಿ ಪ್ರತಿಭಟನೆಗೆ ನಿರ್ಧಾರ



ಕಲಬುರಗಿ,ಮೇ.27-

ಜಿಲ್ಲೆಯಲ್ಲಿ ಹೆಚ್ಚುತ್ತಿರುವ ನಕಲಿ ಬೀಜ ಹಾಗೂ ರಸಗೊಬ್ಬರಗಳ ಹಾವಳಿ ಮತ್ತು ಕಾಳಸಂತೆ ಮಾರಾಟವನ್ನು ವಿರೋಧಿಸಿ ಭಾರತ ಕಮ್ಯೂನಿಸ್ಟ್ ಪಕ್ಷ (ಸಿಪಿಐ) ಹಾಗೂ ಅಖಿಲ ಭಾರತ ಕಿಸಾನ್ ಸಭಾ (ಎಐಕೆಎಸ್) ಜಂಟಿಯಾಗಿ ಇದೇ 30ರಂದು ನಗರದ ಜಂಟಿ ಕೃಷಿ ನಿರ್ದೇಶಕರ ಕಚೇರಿ ಮುಂದೆ ಬೃಹತ್ ಪ್ರತಿಭಟನೆ ನಡೆಸಲು ನಿರ್ಧರಿಸಲಾಗಿದೆ.

ಅಂದು ನಗರದ ಜಗತ್ ಪ್ರದೇಶದಿಂದ ಜಂಟಿ ಕೃಷಿ ನಿರ್ದೇಶಕರ ಕಚೇರಿವರೆಗೆ ಪ್ರತಿಭಟನಾ ಮೆರವಣಿಗೆ ನಡೆಯಲಿದ್ದು, ನೂರಾರು ರೈತರು, ರೈತ ಮುಖಂಡರು ಭಾಗವಹಿಸಲಿದ್ದಾರೆ ಎಂದು ಸಿಪಿಐ ಜಿಲ್ಲಾ ಕಾರ್ಯದರ್ಶಿ ಡಾ. ಮಹೇಶಕುಮಾರ ರಾಠೋಡ, ಎಐಕೆಎಸ್ ರಾಜ್ಯ ಕಾರ್ಯಾಧ್ಯಕ್ಷ ಮೌಲಾ ಮುಲ್ಲಾ ಹಾಗೂ ಜಿಲ್ಲಾಧ್ಯಕ್ಷ ಭೀಮಾಶಂಕರ ಮಾಡಿಯಾಳ ಅವರು ಮಂಗಳವಾರ ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

ಜಿಲ್ಲೆಯಲ್ಲಿ ರಸಗೊಬ್ಬರ ಹಾಗೂ ಬೀಜಗಳ ಕೃತಕ ಅಭಾವ ಸೃಷ್ಟಿಸಿ ಕೆಲ ವ್ಯಾಪಾರಿಗಳು ಅತಿರೇಕದ ಬೆಲೆಗೆ ಮಾರಾಟ ಮಾಡುತ್ತಿರುವುದಾಗಿ ಆರೋಪಿಸಿದ ಅವರು, ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ಇಂತಹ ಕಾಳಸಂತೆಕೋರರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಸಣ್ಣ ಹಾಗೂ ಬಡ ರೈತರಿಗೆ ಅನುಕೂಲವಾಗುವಂತೆ ರಸಗೊಬ್ಬರ ವಿತರಣೆಯನ್ನು ಪಡಿತರ ಮಾದರಿಯಲ್ಲಿ ರೈತ ಸಂಪರ್ಕ ಕೇಂದ್ರಗಳ ಮೂಲಕವೇ ನಡೆಸಬೇಕು ಎಂದು ಒತ್ತಾಯಿಸಿದ ಅವರು, ಜೊತೆಗೆ ನಕಲಿ ಬೀಜ ಮತ್ತು ರಸಗೊಬ್ಬರ ಮಾರಾಟ ಜಾಲವನ್ನು ಪತ್ತೆಹಚ್ಚಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಸರ್ಕಾರವನ್ನು ಒತ್ತಾಯಿಸಿದರು.

ಇದೇ ಸಂದರ್ಭದಲ್ಲಿ ದೇಶದ ಉತ್ಪಾದನಾ ವಲಯ ಹಾಗೂ ಎಂಎಸ್‌ಎಂಇಗಳಿಗೆ ನೇರ ಹಣಕಾಸು ನೆರವು ನೀಡುವುದು, ಕೃಷಿ ಆಧಾರಿತ ಗ್ರಾಮೀಣ ಕೈಗಾರಿಕೆಗಳನ್ನು ಉತ್ತೇಜಿಸುವುದು, ಶಿಕ್ಷಣ, ಆರೋಗ್ಯ, ಸಾರ್ವಜನಿಕ ಬ್ಯಾಂಕುಗಳು ಹಾಗೂ ವಿಮಾ ಕ್ಷೇತ್ರಗಳನ್ನು ಬಲಪಡಿಸುವುದು ಹಾಗೂ ಉದ್ಯೋಗ ಸೃಷ್ಟಿ ಮೂಲಕ ಜನರ ಕೊಳ್ಳುವ ಶಕ್ತಿಯನ್ನು ಹೆಚ್ಚಿಸುವ ಅಗತ್ಯವಿದೆ ಎಂದು ಅವರು ಅಭಿಪ್ರಾಯಪಟ್ಟರು.

ಸುದ್ದಿಗೋಷ್ಠಿಯಲ್ಲಿ ಪ್ರಭುದೇವ ಯಳಸಂಗಿ, ಮಹಮ್ಮದ್ ಚೌದರಿ, ಸಾಜೀದ್ ಅಹಮದ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೇ 31ರಂದು ಕೊಪ್ಪಳದಲ್ಲಿ ಈಜು ಸ್ಪರ್ಧೆ

ಕೊಪ್ಪಳ ಮೇ 27-

ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಸ್ವಿಮಿಂಗ್ ಕ್ಲಬ್ ಇವರ ಸಹಯೋಗದೊಂದಿಗೆ ಈಜು ಸ್ಪರ್ಧೆಯನ್ನು ಮೇ 31 ರಂದು ಮಧ್ಯಾಹ್ನ 3 ಗಂಟೆಗೆ ಜಿಲ್ಲಾ ಕ್ರೀಡಾಂಗಣದಲ್ಲಿರುವ ಜಿಲ್ಲಾ ಈಜುಕೊಳದಲ್ಲಿ ಹಮ್ಮಿಕೊಳ್ಳಲಾಗಿದೆ.


ಈಜು ಸ್ಪರ್ಧೆಯಲ್ಲಿ 8 ರಿಂದ 10 ವರ್ಷ ವಯೋಮಿತಿ, 10 ರಿಂದ 12 ವರ್ಷ ವಯೋಮಿತಿ ಹಾಗೂ 12 ರಿಂದ 14ವರ್ಷ ವಯೋಮಿತಿ ಒಳಗಿನ ಬಾಲಕ ಮತ್ತು ಬಾಲಕೀಯರಿಗೆ ಅವಕಾಶವಿದೆ. ಸ್ಪರ್ಧೆಯಲ್ಲಿ ಭಾಗವಹಿಸಲು ಈಜು ಸಮವಸ್ತ್ರ (ಸ್ವಿಮ್ ಸೂಟ್) ಹಾಗೂ ಸ್ವಿಮ್ ಗಾಗಲ್ ಮತ್ತು ಹೆಡ್‌ಕ್ಯಾಪ್ ಕಡ್ಡಾಯವಾಗಿದೆ. ಇದಲ್ಲದೇ ಎರಡು ಭಾವಚಿತ್ರ ಮತ್ತು ಆಧಾರ ಕಾರ್ಡ ಝರಾಕ್ಷ ಪ್ರತಿಯನ್ನು ಕಡ್ಡಾಯವಾಗಿ ತರಬೇಕು. ಮೇ 30ರ ಒಳಗಾಗಿ ಕಡ್ಡಾಯವಾಗಿ ನೊಂದಣಿ ಮಾಡಿಸಬೇಕು.

ಈ ಈಜು ಸ್ಪರ್ಧೆ ಉಚಿತವಾಗಿದ್ದು, ಯಾವುದೇ ರೀತಿಯ ಶುಲ್ಕ ಇರುವುದಿಲ್ಲ. ಈಜುವ ವಿಧಾನ ಫ್ರಿ ಸ್ಟೈಲ್ (), ವಿಜೇತರಿಗೆ ಸೂಕ್ತ ಬಹುಮಾನ ನೀಡಲಾಗುವುದು.

ನಿಮ್ಮೂರು ಸುದ್ದಿ

ಸಂಪಾದಕೀಯ

ಮತದಾನದ ಹಕ್ಕು ಮೂಲಭೂತ ಹಕ್ಕಾಗಬೇಕು, ಅಗತ್ಯ ಜನಜಾಗೃತಿ



ಮತದಾನದ ಹಕ್ಕನ್ನು ಮೂಲಭೂತ ಹಕ್ಕು ಎಂಬುದನ್ನು ವ್ಯಕ್ತವಾಗಿ ಹೇಳದೆ ಇರುವುದು ಸಂವಿಧಾನದ ಲೋಪವಾಗಲಿ, ನಿರ್ಲಕ್ಷ್ಯವಾಗಲಿ ಅಲ್ಲ. ಸಂವಿಧಾನ ರಚನಾಸಭೆಯಲ್ಲಿ ನಡೆದ ಚರ್ಚೆಗಳೇ ಈ ಮಾತಿಗೆ ಸಾಕ್ಷಿ. ಈ ಹಕ್ಕನ್ನು ಮೂಲಭೂತ ಹಕ್ಕೆಂದು ಸಾರಲು ಸಂವಿಧಾನ ರಚನಾ ಸಭೆಯಲ್ಲಿ ಬಹುತೇಕ ಒಮ್ಮತ ಮೂಡಿತ್ತು.

ಭಾರತದ ಪ್ರಜೆಗಳಾದ ನಾವು (, ..) ಎಂಬ ವಿಧಿವತ್ತಾದ ಸಾರ್ವಭೌಮ ಘೋಷಣೆಯೊಂದಿಗೆ ಶುರುವಾಗುತ್ತದೆ ನಮ್ಮ ಸಂವಿಧಾನ. ಭಾರತದ ಸರ್ಕಾರವಾದ ನಾವು ಎಂಬ ಬದಲಿಗೆ ಭಾರತದ ಪ್ರಜೆಗಳಾದ ನಾವು ಎಂಬ ಪದಗುಚ್ಛವನ್ನು ಅತ್ಯಂತ ಪ್ರಜ್ಞಾಪೂರ್ವಕವಾಗಿ ಆರಿಸಿದ್ದಾರೆ ನಮ್ಮ ಸಂವಿಧಾನ ನಿರ್ಮಾಪಕರು. ಪ್ರಜೆಗಳ ಸಮ್ಮತಿಯನ್ನು ಸರ್ಕಾರಕ್ಕಿಂತ ಮೇಲೆ ಇರಿಸಲಾಗಿದೆ. ಮತ ಚಲಾಯಿಸುವ ಪ್ರಜೆಗಳ ಅಧಿಕಾರವನ್ನು ಮೂಲಭೂತ ಹಕ್ಕುಗಳಲ್ಲಿ ಒಂದೆಂದು ವ್ಯಕ್ತವಾಗಿ ಸಾರದೆ ಹೋದರೂ, ಭಾರತದ ಪ್ರಜೆಗಳಾದ ನಾವುಎಂಬ ಶುರುವಾತಿನಲ್ಲಿ ಅವ್ಯಕ್ತವಾಗಿ ಅದೇ ಅರ್ಥ ಹುದುಗಿದೆ.

ಮುಂದೊಂದು ದಿನ ಮೋಶಾ ಸರ್ಕಾರ ದೇಶವನ್ನು ಆಳಲಿದೆ, ಎಸ್.ಐ.ಆರ್.ಎಂಬ ಕರಾಳ ಹತಾರನ್ನು ಜನತಂತ್ರ ಹರಣಕ್ಕೆ ಬಳಸಲಿದೆ, ಕೋಟ್ಯಂತರ ಜನರ ಮತ ಚಲಾಯಿಸುವ ಹಕ್ಕನ್ನೇ ಕಿತ್ತುಕೊಳ್ಳಲಿದೆ ಎಂಬ ಕೆಟ್ಟ ಕಾಲವನ್ನು ಸಂವಿಧಾನ ನಿರ್ಮಾಪಕರು ದೂರ ದೂರಕ್ಕೂ ಊಹಿಸಿರಲಾರರು. ಊಹಿಸಿಕೊಂಡಿದ್ದಿದ್ದರೆ ಮತದಾನದ ಹಕ್ಕನ್ನು ಮೂಲಭೂತ ಹಕ್ಕುಗಳ ಪಟ್ಟಿಗೆ ಸೇರಿಸಿಬಿಡುತ್ತಿದ್ದರು.

ಸಂವಿಧಾನ ಎಷ್ಟೇ ಒಳ್ಳೆಯದಿರಲಿ, ಕೆಡುಕ ಸರ್ಕಾರದ ಕೈಗೆ ಬಿದ್ದರೆ ಕೆಟ್ಟದ್ದೇ ಆಗಿ ಹೋಗುತ್ತದೆ. ಸಂವಿಧಾನ ಎಷ್ಟೇ ಕೆಟ್ಟದಾಗಿದ್ದರೂ, ಒಳ್ಳೆಯ ಸರ್ಕಾರವಿದ್ದರೆ, ಒಳ್ಳೆಯದೇ ಆಗುತ್ತದೆ ಎಂಬ ದಾರ್ಶನಿಕ ಮಾತುಗಳನ್ನು ಸಂವಿಧಾನ ಶಿಲ್ಪಿ ಡಾ.ಬಾಬಾ ಸಾಹೇಬ ಅಂಬೇಡ್ಕರ್ ಹೇಳಿದ್ದು ಅಕ್ಷರಶಃ ಸತ್ಯ.

ಸಂವಿಧಾನವು ನಿಯಮಗಳು, ತತ್ವಗಳು ಹಾಗೂ ಸಾಂಸ್ಥಿಕ ಚೌಕಟ್ಟುಗಳನ್ನು ಹಾಕಿಕೊಡುತ್ತದೆ. ಜನತಂತ್ರದ ಮೂರು ಸ್ತಂಭಗಳನ್ನಾಗಿ ಶಾಸನ ರೂಪಿಸಿಲು ಶಾಸಕಾಂಗ, ಅವುಗಳನ್ನು ಜಾರಿಗೆ ತರಲು ಕಾರ್ಯಾಂಗ ಹಾಗೂ ಇವುಗಳನ್ನು ವ್ಯಾಖ್ಯಾನ ಮಾಡಲು ನ್ಯಾಯಾಂಗವನ್ನು ಸ್ಥಾಪಿಸಿದೆ.

ಆದರೆ ಈ ಸ್ತಂಭಗಳು ತಾವೇ ತಾವಾಗಿ ನಡೆಯಲಾರವು. ಅವುಗಳ ಯಶಸ್ಸು , ಪರಿಣಾಮ ಹಾಗೂ ನೈತಿಕ ದಿಸೆ ದೆಸೆಗಳು ದೇಶವನ್ನು ನಡೆಸಲು ಆಯ್ಕೆಯಾಗಿರುವ ವ್ಯಕ್ತಿಗಳು ಮತ್ತು ರಾಜಕೀಯ ಪಕ್ಷಗಳನ್ನೇ ಅವಲಂಬಿಸಿರುತ್ತದೆ. ಇವರನ್ನು ಚುನಾವಣೆಯ ಮೂಲಕ ಆರಿಸುವ ನಿರಂತರ ಜಾಗೃತ ಪ್ರಜೆಗಳ ಪಾತ್ರವೂ ಅಷ್ಟೇ ಮುಖ್ಯ.

ಮುನ್ನೋಟ ಹೊಂದಿದ ದಾರ್ಶನಿಕರ ಮತ್ತು ನೈತಿಕ ಎಚ್ಚರ ಕಾಪಾಡಿಕೊಂಡ ಜನನಾಯಕರ ಕೈಯಲ್ಲಿ ದೋಷಪೂರಿತ ಸಾಂಸ್ಥಿಕ ವ್ಯವಸ್ಥೆ ಕೂಡ ಜನತಂತ್ರಕ್ಕೆ ಬದ್ಧವಾದ, ಪಾರದರ್ಶಕ ಹಾಗೂ ಸಾರ್ವಜನಿಕ ಕಲ್ಯಾಣದ ವ್ಯವಸ್ಥೆ ಆಗಿಬಿಡಬಹುದು. ಜನನಾಯಕರಿಗೆ ದೇಶದ ವಿವಿಧತೆಯಲ್ಲಿ ಏಕತೆಯನ್ನು ಕಾಣುವ ಕಣ್ಣಿರಬೇಕು ಮತ್ತು ಸಾಮಾಜಿಕ-ಆರ್ಥಿಕ ಅಭಿವೃದ್ಧಿಯಲ್ಲಿ ಆಳವಾದ ವಿಶ್ವಾಸ ಇರಬೇಕು ಅಷ್ಟೇ.

ಹಾಗೆಯೇ ಅದೆಷ್ಟೇ ಜನಪರವಾಗಿ ನಿರ್ಮಿಸಲಾದ ಸಂವಿಧಾನ ಕೂಡ ಭ್ರಷ್ಟ ಮತ್ತು ಏಕಚಕ್ರಾಧಿಪತ್ಯ ಧೋರಣೆಯ ನಾಯಕರ ಕೈಯಲ್ಲಿ ವಕ್ರ ಆಗಿಬಿಡಬಹುದು, ಶೋಷಣೆಗೆ ತುತ್ತಾಗಬಹುದು, ಒಳಗೊಳಗಿನಿಂದಲೇ ಟೊಳ್ಳಾಗಿಸುವ ಹುನ್ನಾರಕ್ಕೆ ಬಲಿಯಾಗಬಹುದು, ಬುಡಮೇಲು ಕೂಡ ಆಗಿ ಹೋಗಬಹುದು. ಕೊಂಚ ಅರೆಕೊರೆಯ ಸಂದಿಗೊಂದಿಗಳನ್ನೂ ಬಳಸಿಕೊಂಡು ಸಾಂವಿಧಾನಿಕ ಸಂಸ್ಥೆಗಳನ್ನು, ಜನತಂತ್ರವನ್ನು ಬಲಹೀನಗೊಳಿಸಬಹುದು. ಅವುಗಳ ಹಿರಿಮೆಯನ್ನು ಕುಗ್ಗಿಸಲೂಬಹುದು. ಹೀಗಾಗಿ ದೇಶವನ್ನು ಆಳುವವರಿಗೆ ಸಾಂವಿಧಾನಿಕ ನೈತಿಕತೆ ಎಂಬುದೊಂದು ಇರಲೇಬೇಕು. ರಾಜ್ಯವ್ಯವಸ್ಥೆಯ () ಕಾರ್ಯವೈಖರಿಗಳು, ನಾಗರಿಕರ ನಡವಳಿಕೆ ಹಾಗೂ ಕಾನೂನಾತ್ಮಕ ವ್ಯಾಖ್ಯಾನಗಳು ಸಂವಿಧಾನದ ಮೂಲಭೂತ ಆಶಯಗಳಾದ ನ್ಯಾಯ, ಸ್ವಾತಂತ್ರ್ಯ, ಸಮಾನತೆ ಹಾಗೂ ಭ್ರಾತೃತ್ವ ಭಾವನೆಗಳಿಗೆ ಹೊಂದುವಂತಿರಬೇಕು ಎಂಬುದನ್ನು ಸಾಂವಿಧಾನಿಕ ನೈತಿಕತೆಯ ತಿರುಳು ಎನ್ನಬಹುದು. ಬಹುಸಂಖ್ಯಾತ ಭಾವನೆಗಳು, ರೂಢಿಗಳು ಅಥವಾ ಸಾರ್ವಜನಿಕ ನೈತಿಕತೆಯನ್ನು ರೂಪಿಸುವ ಸಾಮಾಜಿಕ ಕಟ್ಟುಕಟ್ಟಳೆಗಳನ್ನು ಕೂಡ ಸಾಂವಿಧಾನಿಕ ಮೌಲ್ಯಗಳ ಒರೆಗೆ ಹಚ್ಚುವುದೇ ಸಾಂವಿಧಾನಿಕ ನೈತಿಕತೆ. ಬಹುಸಂಖ್ಯಾತ ಭಾವನೆಗಳ ಹೆಸರಿನಲ್ಲಿ ಸಾಂವಿಧಾನಿಕ ಮೌಲ್ಯಗಳನ್ನು ಮೂಲೆಗುಂಪು ಮಾಡಲು ಅವಕಾಶ ಇಲ್ಲದಿರುವುದು ಸಾಂವಿಧಾನಿಕ ನೈತಿಕತೆ.

ಮತದಾನದ ಹಕ್ಕನ್ನು ಮೂಲಭೂತ ಹಕ್ಕು ಎಂಬುದನ್ನು ವ್ಯಕ್ತವಾಗಿ ಹೇಳದೆ ಇರುವುದು ಸಂವಿಧಾನದ ಲೋಪವಾಗಲಿ, ನಿರ್ಲಕ್ಷ್ಯವಾಗಲಿ ಅಲ್ಲ. ಸಂವಿಧಾನ ರಚನಾಸಭೆಯಲ್ಲಿ ನಡೆದ ಚರ್ಚೆಗಳೇ ಈ ಮಾತಿಗೆ ಸಾಕ್ಷಿ. ಈ ಹಕ್ಕನ್ನು ಮೂಲಭೂತ ಹಕ್ಕೆಂದು ಸಾರಲು ಸಂವಿಧಾನ ರಚನಾ ಸಭೆಯಲ್ಲಿ ಬಹುತೇಕ ಒಮ್ಮತ ಮೂಡಿತ್ತು. ಮೂಲಭೂತ ಹಕ್ಕುಗಳ ಉಪಸಮಿತಿ ಮತ್ತು ಅಲ್ಪಸಂಖ್ಯಾತರ ಉಪಸಮಿತಿ ಎರಡೂ ಈ ಹಕ್ಕನ್ನು ಮೂಲಭೂತ ಹಕ್ಕುಗಳ ಪಟ್ಟಿಗೆ ಸೇರಿಸಲು ಶಿಫಾರಸು ಮಾಡಿದ್ದವು. ಆ ಸಂದರ್ಭದಲ್ಲಿ ಭಾರತದ ಅನೇಕ ಅರಸೊತ್ತಿಗೆಗಳನ್ನು ವಿಲೀನಗೊಳಿಸಿಕೊಳ್ಳುವ ಕುರಿತ ಅವುಗಳ ಪ್ರತಿನಿಧಿಗಳೊಂದಿಗೆ ಸಂಧಾನ ನಡೆದಿತ್ತು. ಈ ಹಂತದಲ್ಲಿ ಮತದಾನದ ಹಕ್ಕನ್ನು ಮೂಲಭೂತ ಹಕ್ಕುಗಳ ಪಟ್ಟಿಗೆ ಸೇರಿಸುವುದು ವಿಲೀನ ಪ್ರಕ್ರಿಯೆಗೆ ಬಾಧೆಯೊಡ್ಡಬಹುದು ಎಂಬ ಸಂದೇಹ ಎದ್ದಿತ್ತು. ಸ್ವತಂತ್ರ ದೇಶವನ್ನು ಒಗ್ಗೂಡಿಸುವ ಪ್ರಕ್ರಿಯೆಯ ನಾಜೂಕಿನ ಗಳಿಗೆಗಳಲ್ಲಿ ತೋರಲಾದ ರಾಜಕೀಯ ವ್ಯಾವಹಾರಿಕತೆಯಿದು. ಅದೇ ಖಾಯಂ ಆಗಿಬಿಡಬಹುದೆಂಬ ಸಂದೇಹ ಅಂದು ಯಾರಿಗೂ ಇರಲಿಲ್ಲ. ಹೀಗೆ ರಾಜಿ ಒಪ್ಪಂದವೊಂದು ದೌರ್ಬಲ್ಯವಾಗಿ ಬದಲಾಗಿ ಬೇರಿ ಬಿಟ್ಟಿತು. ಸುಪ್ರೀಮ್ ಕೋರ್ಟ್ ಕೂಡ ಮತದಾನದ ಹಕ್ಕು ಶಾಸನಾತ್ಮಕವೇ ವಿನಾ ಮೂಲಭೂತ ಹಕ್ಕು ಅಲ್ಲ ಎಂದು 1982ರ ತೀರ್ಪಿನಲ್ಲಿ ವಿಧಿಸಿತು. ಹೀಗಾಗಿ ಯಾವುದು ಅನಾಯಸವಾಗಿ ಸ್ವತಂತ್ರ ಭಾರತದ ಪೌರರ ಹಸ್ತಗತ ಆಗಬೇಕಿತ್ತೋ, ಅದು ಗಗನ ಕುಸುಮವಾಗಿ ದೂರ ಸರಿಯಿತು. ನಂತರದ ನಲವತ್ತು ವರ್ಷಗಳಲ್ಲಿ ಚುನಾವಣಾ ಆಡಳಿತವ್ಯವಸ್ಥೆಯು ಹೆಚ್ಚು ಹೆಚ್ಚು ಸಂಕೀರ್ಣವಾಗಿ ಬೆಳೆದು ನಿಂತಿತು.

ಮತದಾರರ ಪಟ್ಟಿಯ ತೀವ್ರ ಪರಿಷ್ಕರಣೆಯ ನೆಪದಲ್ಲಿ ಕೋಟ್ಯಂತರ ಜನರ ಮತಾಧಿಕಾರ ಹರಣ ನಡೆಯುತ್ತಿರುವ ಇಂದಿನ ವಿಷಮ ಹಂತಕ್ಕೆ ಮುಟ್ಟಿದೆ. ವಲಸಿಗರು, ಅಲ್ಪಸಂಖ್ಯಾತರು, ರಾಜಕೀಯ ವಿರೋಧಿಗಳು, ಮಹಿಳೆಯರು, ಬುಡಕಟ್ಟು ಜನಾಂಗಗಳ ಮೇಲೆ ಭಾರೀ ಆಕ್ರಮಣ ನಡೆದಿದೆ. ನ್ಯಾಯಾಂಗ ಕೂಡ ಅವರ ರಕ್ಷಣೆಗೆ ಮುಂದೆ ಬರುವ ದಿಟ್ಟತನ ತೋರಿಲ್ಲ. ಮೇಲ್ಮನವಿ ನ್ಯಾಯಾಧಿಕರಣಗಳನ್ನು ರಚಿಸಲಾಗಿದೆ. ಬಂಗಾಳದಲ್ಲಿ 19 ನ್ಯಾಯಾಧಿಕರಣಗಳು ತಿಂಗಳುಗಟ್ಟಲೆ ವಿಚಾರಣೆ ನಡೆಸಿದರೂ ಐದಾರು ಸಾವಿರಕ್ಕಿಂತ ಹೆಚ್ಚು ಮೇಲ್ಮನವಿಗಳ ಇತ್ಯರ್ಥ ಸಾಧ್ಯವಾಗಿಲ್ಲ. ಈ ಆಮೆಗತಿ, ಅತ್ಯಂತ ಕ್ಲಿಷ್ಟ ವಿಧಿವಿಧಾನಗಳು ಹಕ್ಕು ಕಳೆದುಕೊಂಡ ಮತದಾರರ ವಿರುದ್ಧವಾಗಿವೆ. ಹೊಟ್ಟೆಬಟ್ಟೆಗೆ ಬಡಿದಾಡಬೇಕಿರುವ ಬಡವರ್ಗಗಳ ಜನ ಜಟಿಲ ಕಾನೂನು ವಿಧಿವಿಧಾನಗಳ ಬೆಟ್ಟವನ್ನು ಏರುವುದು ಸಾಧ್ಯವೇ ಎಂಬ ಪ್ರಶ್ನೆ ಎದುರಾಗಿದೆ. ಪಟ್ಟಿಯಿಂದ ಕೈಬಿಡಲಾದ ಈ ಜನ ಮತಾಧಿಕಾರ ತ್ಯಾಗವನ್ನು ಅನಿವಾರ್ಯ ಆಗಿಸುವ ದುಷ್ಟ ಹುನ್ನಾರಕ್ಕೇ ಮೇಲುಗೈ ಆಗಿಸುವಂತೆ ಕಾನೂನು ಪ್ರಕ್ರಿಯೆಯನ್ನು ಜಟಿಲವಾಗಿಸಿ ವಿನ್ಯಾಸಗೊಳಿಸಲಾಗಿದೆ.

ಸುಪ್ರೀಮ್ ಕೋರ್ಟ್ ಕೂಡ, ಈ ಸಲ ಮತ ಹಾಕದಿದ್ದರೇನಂತೆ, ಮುಂದಿನ ಸಲ ಅವಕಾಶ ಸಿಕ್ಕೀತು ಎಂಬುದಾಗಿ ಮತಾಧಿಕಾರ ವಂಚಿತರ ಅಹವಾಲನ್ನು ಕುರಿತು ಹಗುರ ಟಿಪ್ಪಣಿ ಮಾಡುವಂತಾಗಿರುವುದು ಅತೀವ ದುರದೃಷ್ಟಕರ.

ಮತದಾನದ ಹಕ್ಕನ್ನು ಮೂಲಭೂತ ಹಕ್ಕುಗಳ ಪಟ್ಟಿಗೆ ಸೇರಿಸುವುದೇ ಈ ಹುನ್ನಾರಕ್ಕೆ ಅರೆಯಬಹುದಾದ ಮದ್ದು. ಆಗ ಸುಪ್ರೀಮ್ ಕೋರ್ಟು ಮತಾಧಿಕಾರ ಹರಣವನ್ನು ಪರಿಣಾಮಕಾರಿಯಾಗಿ ಅಂದಂದಿಗೇ ಇತ್ಯರ್ಥಗೊಳಿಸಲು ಬಂದೀತು. ಖಾಸಗಿತನವು ಸಂವಿಧಾನದ ಮೂಲಭೂತ ಹಕ್ಕುಗಳ ಪಟ್ಟಿಯಲ್ಲಿ ಇಲ್ಲ. ಆದರೆ 2027ರಲ್ಲಿ ಸುಪ್ರೀಮ್ ಕೋರ್ಟು ಈ ಹಕ್ಕು ಮೂಲಭೂತ ಎಂದು ವ್ಯಾಖ್ಯಾನಿಸಿತು. ಸಂವಿಧಾನವನ್ನು ಜನತಾಂತ್ರಿಕ ಮೌಲ್ಯಗಳ ಸಜೀವ ದಾಖಲೆಯಾಗಿ ನೋಡಬೇಕೇ ವಿನಾ ಐತಿಹಾಸಿಕ ಸಂದರ್ಭದಲ್ಲಿ ಹೆಪ್ಪುಗಟ್ಟಿರುವ ದಸ್ತಾವೇಜಾಗಿ ಅಲ್ಲ ಎಂದು ಜಸ್ಟಿಸ್ ಕೆ.ಎಸ್.ಪುಟ್ಟಸ್ವಾಮಿ ವರ್ಸಸ್ ಯೂನಿಯನ್ ಆಫ್ ಇಂಡಿಯಾ ಮೊಕದ್ದಮೆಯಲ್ಲಿ ಸಾಂವಿಧಾನಿಕ ನ್ಯಾಯಪೀಠ ಸಾರಿ ಹೇಳಿದೆ. ಮುಕ್ತ ಮತ್ತು ನ್ಯಾಯಯುತ ಚುನಾವಣೆಗಳು ಸಂಸದೀಯ ವ್ಯವಸ್ಥೆಯ ಹೃದಯ ಎಂದು 1978ರ ಮತ್ತೊಂದು ತೀರ್ಪಿನಲ್ಲಿ ಇದೇ ಸುಪ್ರೀಮ್ ಕೋರ್ಟು ಘೋಷಿಸಿತ್ತು.

ಎಲ್ಲ ಮೂಲಭೂತ ಹಕ್ಕುಗಳಿಗೂ ನಿರ್ಬಂಧರಹಿತವೇನೂ ಅಲ್ಲ. ಮತದಾನದ ಮೂಲಭೂತ ಹಕ್ಕು ಕೂಡ ಈ ಮಾತಿಗೆ ಹೊರತಲ್ಲ. ಹೀಗಾಗಿ ಚುನಾವಣಾ ವ್ಯವಸ್ಥೆಯು ವ್ಯಾಜ್ಯಗಳ ಸುಳಿಗೆ ಸಿಲುಕಿ ಹಾಕಿಕೊಳ್ಳುತ್ತದೆ ಎಂಬ ಶಂಕೆಗೆ ಆಧಾರವಿಲ್ಲ.

ಮೂಲಭೂತ ಹಕ್ಕನ್ನು ಕಿತ್ತುಕೊಳ್ಳಲಾಗುತ್ತಿರುವ ಈ ಹೊತ್ತಿನಲ್ಲಿ, ಶಾಸನಾತ್ಮಕ ಹಕ್ಕೊಂದನ್ನು ಮೂಲಭೂತ ಹಕ್ಕಾಗಿಸಲು ಸಂವಿಧಾನಕ್ಕೆ ತಿದ್ದುಪಡಿ ತರುವುದನ್ನು ಊಹಿಸಲೂ ಸಾಧ್ಯವಿಲ್ಲ. ಆದರೆ ಸಾರ್ವಜನಿಕ ಅಭಿಪ್ರಾಯ ಆಂದೋಲನಗಳು ಈ ದಿಕ್ಕಿನಲ್ಲಿ ಸಾಗಬೇಕಿದೆ.

ಸಂದಿಗ್ಧ ಪರಿಸ್ಥಿತಿಯಲ್ಲಿ ಅಲ್ಪಸಂಖ್ಯಾತರ ಪರ ನಿಂತಿರುವ ಕಾಂಗ್ರೆಸ್ ಸರ್ಕಾರ

ಹಿಂದಿನ ಬಿಜೆಪಿ ಸರ್ಕಾರ ಹೇರಿದ್ದ ಹಿಜಾಬ್ ಮೇಲಿನ ನಿಷೇಧವನ್ನು ಇತ್ತೀಚೆಗೆ ನಮ್ಮ ಸರ್ಕಾರ ವಾಪಸ್ ಪಡೆದಿದೆ. ತನ್ಮೂಲಕ ಮುಸ್ಲಿಂ ಯುವತಿಯರ ವಿದ್ಯಾಭ್ಯಾಸಕ್ಕೆ, ಉನ್ನತ ವ್ಯಾಸಂಗಕ್ಕೆ ಇದ್ದ ತೊಡಕೊಂದನ್ನು ನಿವಾರಿಸಿದೆ. ಹೀಗೆ ಹತ್ತು ಹಲವು ರೀತಿಯಲ್ಲಿ ಕೋಮು ಸೌಹಾರ್ದತೆ ರಾಜ್ಯದಲ್ಲಿ ಮರಳಿ ನೆಲೆಸಲು ಕ್ರಮ ಕೈಗೊಂಡಿರುವ ಸರ್ಕಾರವು ಜೊತೆಜೊತೆಯಲ್ಲಿ ಅಲ್ಪಸಂಖ್ಯಾತರ ಆರ್ಥಿಕ ಅಭಿವೃದ್ಧಿಗೂ ಒತ್ತು ನೀಡಿದೆ.

ಭಾರತ-ಪಾಕಿಸ್ತಾನ ವಿಭಜನೆ ಎಂಬ ವಿಷಘಟನೆಯ ನಡುವೆಯೂ ಸ್ವಾತಂತ್ರ್ಯಾನಂತರದ ಕೆಲವು ವರ್ಷಗಳಲ್ಲಿದ್ದ ನಾಯಕತ್ವವು ದೇಶದಲ್ಲಿ ಅಲ್ಪಸಂಖ್ಯಾತರಿಗೆ ಸುರಕ್ಷಿತ ವಾತಾವರಣವನ್ನೇ ರೂಪಿಸಿತ್ತು. ಅಲ್ಪಸಂಖ್ಯಾತರು ಮೊದಲ ಬಾರಿ ಅಧೀರರಾದುದು ಕಮಂಡಲದ ರಾಜಕಾರಣ ಮುನ್ನಲೆಗೆ ಬಂದಾಗ. ತದನಂತರ ಕೋಮುವಾದ ಹಂತಹಂತವಾಗಿ ತೀವ್ರಗೊಳ್ಳುತ್ತಿದ್ದಂತೆ ವರ್ಷದಿಂದ ವರ್ಷಕ್ಕೆ ಅಲ್ಪಸಂಖ್ಯಾತರ ಪರಿಸ್ಥಿತಿ ದಯನೀಯವಾಗತೊಡಗಿತು. 2014ರಿಂದ ಈಚೆಗೆ ಮುಸ್ಲಿಂ ದ್ವೇಷವೇ ರಾಜಕಾರಣದ ಬಹುಮುಖ್ಯ ಅಜೆಂಡಾ ಎನ್ನುವಂತೆ ಬದಲಾಗಿದೆ.

ಇದು ದೇಶಾದ್ಯಂತ ಸಾಮಾನ್ಯವಾಗಿ ಕಂಡುಬರುತ್ತಿರುವ ಚಿತ್ರಣ. ಇದರ ನಡುವೆ ಕೆಲವೇ ಕೆಲವು ಕಡೆ ಸ್ವಲ್ಪ ಭಿನ್ನವಾದ ವಾತಾವರಣವನ್ನು ಕಾಣಬಹುದು. ಅಂಥವುಗಳ ಪೈಕಿ ಕರ್ನಾಟಕವೇ ಮಾದರಿ. ಕರ್ನಾಟಕದ ಅಲ್ಪಸಂಖ್ಯಾತರು, ಅದರಲ್ಲೂ ಮುಸ್ಲಿಮರು ಸಾಮಾಜಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಬೇರೆ ಕಡೆಗಳಿಗಿಂತ ಸುರಕ್ಷಿತ ಭಾವದಿಂದ ಇದ್ದಾರೆ. ಇದಕ್ಕೆ 2013ರಿಂದ 2018ರವರೆಗೆ ಮತ್ತು 2023ರಿಂದ ಇಲ್ಲಿಯವರೆಗೆ ಇರುವ ಕಾಂಗ್ರೆಸ್ ಸರ್ಕಾರ ಕಾರಣ ಎನ್ನುವುದನ್ನು ಯಾವುದೇ ಅಂಜಿಕೆ ಇಲ್ಲದೆ ಹೇಳಬಹುದು.

ನಡುವೆ 2019ರಿಂದ 2023ರವರೆಗೆ ಇದ್ದ ಬಿಜೆಪಿ ಸರ್ಕಾರ ಕರ್ನಾಟಕದ ಸೌಹಾರ್ದ ವಾತಾವರಣವನ್ನು ಕೆಡಿಸಿತ್ತು. ಹಿಜಾಬ್ ವಿಷಯವನ್ನು ಮುನ್ನೆಲೆಗೆ ತಂದು ಲಕ್ಷಾಂತರ ಮುಸ್ಲಿಂ ಯುವತಿಯರ ವಿದ್ಯಾಭ್ಯಾಸಕ್ಕೆ ಕಲ್ಲು ಹಾಕಿತ್ತು. ಆಜಾನ್ ಮತ್ತಿತರ ವಿಷಯಗಳಲ್ಲಿ ಮುಸ್ಲಿಮರ ಧಾರ್ಮಿಕ ಭಾವನೆಗಳಿಗೆ ಧಕ್ಕೆ ತಂದಿತ್ತು. ಊಟ ತನ್ನಿಷ್ಟ ಎಂಬ ಕನಿಷ್ಠ ಸೌಜನ್ಯವೂ ಇಲ್ಲದೆ ಹಲಾಲ್ ಕಟ್ ಮತ್ತು ಜಟ್ಕಾ ಕಟ್ ವಿಷಯಗಳಲ್ಲಿ ಮುಸ್ಲಿಮರನ್ನು ಗುರಿ ಮಾಡಿಕೊಂಡಿತ್ತು. ಬೀದಿ ಬದಿಯಲ್ಲಿ ವ್ಯಾಪಾರ ಮಾಡುವ ಬಡ ಮುಸ್ಲಿಮರನ್ನು ಬಿಡದೆ ಕಾಡಿತ್ತು. ಇವೆಲ್ಲವುಗಳಿಗೂ ಇತಿಶ್ರೀ ಹಾಡಿದ್ದು 2023ರಲ್ಲಿ ಬಂದ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ.

ಕಾಂಗ್ರೆಸ್ ಪಕ್ಷ 2023ರ ಚುನಾವಣೆಗೆ ಹೋಗುವ ಮುನ್ನ ತನ್ನ ಪ್ರಣಾಳಿಕೆಯಲ್ಲೇ ಸರ್ವ ಜನಾಂಗದ ಶಾಂತಿಯ ತೋಟ- ಇದುವೇ ಕಾಂಗ್ರೆಸ್ ಬದ್ಧತೆ ಎಂಬ ಆದ್ಯತೆಯನ್ನು ಸ್ಪಷ್ಟವಾಗಿ ತಿಳಿಸಿತ್ತು. ಕಳೆದ ಮೂರು ವರ್ಷಗಳಲ್ಲಿ ಅದನ್ನು ಮಾಡಿ ತೋರಿಸಿದೆ. ಇಷ್ಟರ ನಡುವೆಯೂ ಬಿಜೆಪಿ ತನ್ನ ಕೋಮುವಾದದ ಪ್ರಯೋಗಶಾಲೆ ಕರಾವಳಿಯಲ್ಲಿ ಶಾಂತಿ ಕದಡುವ ಯತ್ನ ನಡೆಸಿತು. ಎಚ್ಚೆತ್ತುಕೊಂಡ ಸರ್ಕಾರ ಕೂಡಲೇ ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ಮತ್ತು ಮಂಗಳೂರು ಪೊಲೀಸ್ ಆಯುಕ್ತರನ್ನು ಬದಲಾಯಿಸಿ ಪರಿಸ್ಥಿತಿ ಸಹಜ ಸ್ಥಿತಿಗೆ ಮರಳುವಂತೆ ಮಾಡಿತು. ಅದೇ ರೀತಿ ಬಿಜೆಪಿ ಮತ್ತು ಜೆಡಿಎಸ್ ಜಂಟಿಯಾಗಿ ರಾಜ್ಯದ ಅತ್ಯಂತ ಸೌಹಾರ್ದ ಜಿಲ್ಲೆಯಾದ ಮಂಡ್ಯದಲ್ಲಿ ಕೋಮು ಸಂಘರ್ಷವನ್ನು ಸೃಷ್ಟಿಸಲು ಯತ್ನಿಸಿದವು. ಅಷ್ಟೇ ತ್ವರಿತವಾಗಿ ಕ್ರಮ ಕೈಗೊಂಡ ಸರ್ಕಾರ ಮಂಡ್ಯದ ನೆಲದಲ್ಲಿ ನೆತ್ತರು ಹರಿಯಲು ಬಿಡಲಿಲ್ಲ.

ಸಾಮಾಜಿಕ ಸ್ವಾಸ್ಥ್ಯ ನೆಲೆಸಿಲ್ಲದ ನಾಡಿನಲ್ಲಿ ಯಾರೊಬ್ಬರೂ ನೆಮ್ಮದಿಯಿಂದಿರಲು ಸಾಧ್ಯವಿಲ್ಲ. ಅಭಿವೃದ್ಧಿಯೂ



ಸಾಧ್ಯವಿಲ್ಲ ಎನ್ನುವುದು ಕಾಂಗ್ರೆಸ್ ಪಕ್ಷಕ್ಕೆ ಚೆನ್ನಾಗಿ ಗೊತ್ತಿದೆ. ಅದರಿಂದಾಗಿಯೇ ತನ್ನ ಪ್ರಣಾಳಿಕೆಯಲ್ಲಿ ಸರ್ವ ಜನಾಂಗದ ಶಾಂತಿಯ ತೋಟದ ನಿರ್ಮಾಣಕ್ಕೆ ಪಣ ತೊಡಲಾಗಿತ್ತು. ಸರ್ಕಾರ ಬಂದ ನಂತರ ಅದನ್ನು ಸಾಧಿಸಲಾಯಿತು. ಇದರ ಪರಿಣಾಮ ರಾಜ್ಯಕ್ಕೆ ಹರಿದು ಬರುತ್ತಿರುವ ಬಂಡವಾಳ ಹೆಚ್ಚಿದೆ. ರಾಜ್ಯದ ವ್ಯಾಪಾರ ವಹಿವಾಟು ಹೆಚ್ಚಾಗಿದೆ. ತೆರಿಗೆ ಸಂಗ್ರಹ ಜಾಸ್ತಿಯಾಗಿದೆ. ಹೆಚ್ಚಿನ ಉದ್ಯೋಗಗಳು ನಿರ್ಮಾಣವಾಗಿವೆ. ಮುಸ್ಲಿಮರಿಗೆ ಮಾತ್ರವಲ್ಲ, ಅಲ್ಪಸಂಖ್ಯಾತರಿಗೆ ಮಾತ್ರವಲ್ಲ, ಇಡೀ ರಾಜ್ಯದ ಜನರಿಗೆ ಒಳಿತಾಗುತ್ತಿದೆ.

ಹಿಂದಿನ ಬಿಜೆಪಿ ಸರ್ಕಾರ ಮಾಡಿದ್ದ ಹಿಜಾಬ್ ಮೇಲಿನ ನಿಷೇಧವನ್ನು ಇತ್ತೀಚೆಗೆ ನಮ್ಮ ಸರ್ಕಾರ ವಾಪಸ್ ಪಡೆದಿದೆ. ತನ್ಮೂಲಕ ಮುಸ್ಲಿಂ ಯುವತಿಯರ ವಿದ್ಯಾಭಾಸಕ್ಕೆ, ಉನ್ನತ ವ್ಯಾಸಂಗಕ್ಕೆ ಇದ್ದ ತೊಡಕೊಂದನ್ನು ನಿವಾರಿಸಿದೆ. ಹೀಗೆ ಹತ್ತು ಹಲವು ರೀತಿಯಲ್ಲಿ ಕೋಮು ಸೌಹಾರ್ದತೆ ರಾಜ್ಯದಲ್ಲಿ ಮರಳಿ ನೆಲೆಸಲು ಕ್ರಮ ಕೈಗೊಂಡಿರುವ ಸರ್ಕಾರವು ಜೊತೆಜೊತೆಯಲ್ಲಿ ಅಲ್ಪಸಂಖ್ಯಾತರ ಆರ್ಥಿಕ ಅಭಿವೃದ್ಧಿಗೂ ಒತ್ತು ನೀಡಿದೆ.

ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು ಎಂಬುದು ಸಂವಿಧಾನದ ಮೂಲ ಆಶಯ. ಇದಕ್ಕೆ ಅನುಗುಣವಾಗಿಯೇ ಕಾಂಗ್ರೆಸ್ ಸರ್ಕಾರ ಎಲ್ಲರನ್ನೂ ಸಶಕ್ತಗೊಳಿಸಲು ಹಲವು ಉಪಕ್ರಮಗಳನ್ನು ಕೈಗೊಂಡಿದೆ. ಅದು ಕೋಮು ಸಾಮರಸ್ಯದ ವಿಚಾರವಿರಲಿ ಅಥವಾ ಆರ್ಥಿಕ ಅಭಿವೃದ್ಧಿಯ ವಿಚಾರವಿರಲಿ ಕಾಂಗ್ರೆಸ್ ಬಾಯಿ ಮಾತಿಗೆ ಸೀಮಿತವಾಗಿಲ್ಲ. ನುಡಿದಂತೆ ನಡೆದಿದೆ. ಇದು ಹಿಂದಿನ ಬಿಜೆಪಿ ಸರ್ಕಾರ ಹಾಗೂ ಈಗಿನ ಕಾಂಗ್ರೆಸ್ ಸರ್ಕಾರಗಳು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ (ಮುಸ್ಲಿಮರಿಗೆ ಮಾತ್ರವಲ್ಲ) ನೀಡಿರುವ ಅನುದಾನವನ್ನು ಹೋಲಿಕೆ ಮಾಡಿದರೆ ಸ್ಪಷ್ಟವಾಗಿ ತಿಳಿಯುತ್ತದೆ.

2019ರಿಂದ 2023ರವರೆಗೆ (ಸುಮಾರು ನಾಲ್ಕು ವರ್ಷ) ಇದ್ದ ಬಿಜೆಪಿ ಸರ್ಕಾರ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ 5,097 ಕೋಟಿ ರೂಪಾಯಿಗಳನ್ನು ನೀಡಿತ್ತು. ಈಗಿನ ಕಾಂಗ್ರೆಸ್ ಸರ್ಕಾರ ಈ ಮೂರು ವರ್ಷದಲ್ಲಿ 14,378 ಕೋಟಿ ರೂಪಾಯಿ ನೀಡಿದೆ. ಇದನ್ನು ಬಿಜೆಪಿಯವರು, ಸಂಘ ಪರಿವಾರದವರು, ವಾಟ್ಸಾಪ್ ಯುನಿವರ್ಸಿಟಿಯವರು ತಿರುಚಿ ಕಾಂಗ್ರೆಸ್ ಸರ್ಕಾರ ಅಲ್ಪಸಂಖ್ಯಾತರನ್ನು ಓಲೈಸುತ್ತಿದೆ ಎಂದು ಹೇಳಬಹುದು. ಆದರೆ ಇದು ಧಾರ್ಮಿಕ ಹಿನ್ನೆಲೆಯಲ್ಲಿ ನೀಡಿರುವುದಲ್ಲ. ಸಾಂವಿಧಾನಿಕ ರೀತಿಯಲ್ಲಿ ಸರ್ವರಿಗೂ ಸಮಪಾಲು ಸರ್ವರಿಗೂ ಸಮಬಾಳು ಎನ್ನುವ ತತ್ವದಡಿ ಕೊಟ್ಟಿರುವುದು. ಇದನ್ನೂ ಮೀರಿ ವಾಸ್ತವದಲ್ಲಿ ಅಲ್ಪಸಂಖ್ಯಾತರಿಗೆ ಕೊಟ್ಟಿರುವುದು ತೀರಾ ಕಡಿಮೆಯೇ ಆಗಿರುವುದರಿಂದ ತುಷ್ಟೀಕರಣದ ಪ್ರಶ್ನೆಯೇ ಇಲ್ಲ.

ಹೇಗೆಂದರೆ, 2026-27ನೇ ಸಾಲಿನ ರಾಜ್ಯದ ಬಜೆಟ್ ಮೊತ್ತ 4,48,008 ಕೋಟಿ ರೂಪಾಯಿ. ಇದರಲ್ಲಿ ಅಲ್ಪಸಂಖ್ಯಾತ ಕಲ್ಯಾಣ ಇಲಾಖೆಗೆ ಕೊಟ್ಟಿರುವ ಹಣ ಕೇವಲ 4,790 ಕೋಟಿ ರೂಪಾಯಿ. ಶೇಕಡಾವಾರು ಲೆಕ್ಕಾಚಾರದಲ್ಲಿ 1ರಷ್ಟು ಮಾತ್ರ. ಇದನ್ನು ನಾನು ವಿಧಾನಸಭೆಯ ಬಜೆಟ್ ಅಧಿವೇಶನದಲ್ಲೇ ಪ್ರಶ್ನೆ ಮಾಡಿದ್ದೇನೆ. ಸುಮಾರು ಶೇಕಡಾ 15ರಷ್ಟಿರುವ ಅಲ್ಪಸಂಖ್ಯಾತರಿಗೆ ಬಜೆಟ್ ನಲ್ಲಿ ಕೇವಲ ಶೇಕಡಾ 1ರಷ್ಟು ಕೊಟ್ಟರೆ ಸಾಕೆ? ಎಂದು ಕೇಳಿದ್ದೇನೆ. ಆದರೂ, ಹಿಂದಿನ ಸರ್ಕಾರಗಳು ಅಲ್ಪಸಂಖ್ಯಾತರನ್ನು ತೀರಾ ನಗಣ್ಯ ಮಾಡಿದ್ದಕ್ಕೆ ಹೋಲಿಕೆ ಮಾಡಿಕೊಡರೆ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿರುವ ಕೊಡುಗೆ ಸಮಾಧಾನಪಟ್ಟುಕೊಳ್ಳುವಂತಿದೆ.

ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಗೆ ಹೆಚ್ಚಿನ ಹಣ ಕೊಟ್ಟಿರುವುದು ಮಾತ್ರವಲ್ಲ, ಕಳೆದ ಮೂರು ವರ್ಷದಲ್ಲಿ ಅಲ್ಪಸಂಖ್ಯಾತರ ಅಭ್ಯುದಯಕ್ಕಾಗಿ ಹಲವು ಕಲ್ಯಾಣ ಕಾರ್ಯಕ್ರಮಗಳನ್ನು ಕೊಡಲಾಗಿದೆ. ಪ್ರಮುಖ ನಿಗಮ ಮಂಡಳಿಗಳಿಗೆ ಮುಸ್ಲಿಂ ಸಮುದಾಯದ ನಾಯಕರನ್ನು ನೇಮಕ ಮಾಡಲಾಗಿದೆ. ಅಷ್ಟು ಮಾತ್ರವಲ್ಲದೆ ಸಂಘ ಪರಿವಾರದವರು, ಸಮಾಜಘಾತುಕ ಶಕ್ತಿಗಳು, ಸಮಾಜದ ಸ್ವಾಸ್ಥ್ಯವನ್ನು ಕದಡಲೇಬೇಕೆಂದು ಹಲವು ಬಗೆಯ ಮುಖವಾಡ ತೊಟ್ಟು ಅಖಾಡಕ್ಕಿಳಿಯುವವರು, ತೆರೆಯ ಹಿಂದೆ ನಿಂತು ಕುಮ್ಮಕ್ಕು ಕೊಡುವವರು ಒಟ್ಟೊಟ್ಟಿಗೆ ಮುಸ್ಲಿಮರನ್ನು ಅನುಮಾನಿಸುವ, ಅವಮಾನಿಸುವ, ಅಧೀರರನ್ನಾಗಿಸುವ ಪ್ರಯತ್ನ ಮಾಡಿದಾಗಲೆಲ್ಲಾ ಸಿದ್ದರಾಮಯ್ಯ ನೆರವಿಗೆ ಧಾವಿಸಿದ್ದಾರೆ.

ಸರ್ಕಾರದ ನೇತಾರ ಇಂಥದೊಂದು ದೃಢ ನಿರ್ಧಾರ ತೆಗೆದುಕೊಂಡಾಗ ಆಡಳಿತಯಂತ್ರ ತನ್ನಿಂದ ತಾನೇ ಜಾತ್ಯಾತೀತವಾಗುತ್ತದೆ. ಅಲ್ಪಸಂಖ್ಯಾತರ ರಕ್ಷಣೆಗೆ ಬರುತ್ತದೆ. ಕೋಮುವಾದಿಗಳ ಶಕ್ತಿ ಮತ್ತು ಧೈರ್ಯ ಕುಂದುತ್ತದೆ. ಕಳೆದ ಮೂರು ವರ್ಷದಲ್ಲಿ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಆದದ್ದು ಇದೇ. ಮತ್ತು ಅಲ್ಪಸಂಖ್ಯಾತರು ವಿಶೇಷವಾಗಿ ಮುಸ್ಲಿಮರು ನಿರೀಕ್ಷೆ ಮಾಡಿದ್ದು ಕೂಡ ಇದನ್ನೇ.

ಇದೇ ವೇಳೆ ಇನ್ನೊಂದು ವಿಷಯವನ್ನು ಅತ್ಯಂತ ಖಚಿತವಾಗಿ ಸ್ಪಷ್ಟಪಡಿಸಬೇಕಾಗಿದೆ. ನನಗೆ ನನ್ನ ಸಮುದಾಯ ಕೂಡ ನನ್ನ ಪಕ್ಷದಷ್ಟೇ ಮುಖ್ಯ. ಸರ್ಕಾರ ನಮ್ಮ ಸಮುದಾಯಕ್ಕೆ ಮಾಡಿರುವ ಕೆಲಸದ ಬಗ್ಗೆ ಸಮಾಧಾನವಿದೆಯೇ ವಿನಃ ತೃಪ್ತಿ ಇಲ್ಲ. ಮಾಡಬೇಕಿರುವ ಕೆಲಸಗಳು ಇನ್ನೂ ಇವೆ. ಮುಖ್ಯವಾಗಿ ಹಿಂದಿನ ಬಿಜೆಪಿ ಸರ್ಕಾರ ದ್ವೇಷದಿಂದ ತೆಗೆದುಹಾಕಿದ್ದ 2 ಮೀಸಲಾತಿಯನ್ನು ನಮ್ಮ ಸರ್ಕಾರ ಇಷ್ಟೊತ್ತಿಗೆ ಮರು ಸ್ಥಾಪಿಸಬೇಕಾಗಿತ್ತು. ಸಮುದಾಯದ ಯುವಕ/ಯುವತಿಯರ ವಿದ್ಯಾಭಾಸ ಮತ್ತು ಉದ್ಯೋಗದ ದೃಷ್ಟಿಯಿಂದ ಇದು ಆಗಲೇಬೇಕಾದ ಕೆಲಸ. ಆದರೆ ಪ್ರಕರಣ ನ್ಯಾಯಾಲಯದಲ್ಲಿ ಇರುವುದರಿಂದ ತಡವಾಗುತ್ತಿದೆ. ಇದರ ಬಗ್ಗೆ ಸರ್ಕಾರದ ಹಲವು ಹಂತದಲ್ಲಿ ಚರ್ಚೆಗಳು ನಡೆದಿವೆ. ಶೀಘ್ರವೇ ಶುಭ ಸುದ್ದಿ ಸಿಗುವ ಎಲ್ಲಾ ಸಾಧ್ಯತೆಗಳು ಇವೆ.

ಇದಲ್ಲದೆ ಹಿಂದಿನ ಬಿಜೆಪಿ ಸರ್ಕಾರ ಕರ್ನಾಟಕ ಜಾನುವಾರು ಹತ್ಯೆ ಪ್ರತಿಬಂಧಕ ಮತ್ತು ಸಂರಕ್ಷಣಾ ಅಧಿನಿಯಮಕ್ಕೆ 2020ರಲ್ಲಿ ತಿದ್ದುಪಡಿಯನ್ನು ತಂದು ಮುಸ್ಲಿಮರ ಆಹಾರ ಮತ್ತು ವ್ಯಾಪಾರಕ್ಕೆ ಹೊಡೆತ ನೀಡಿತ್ತು. ಗೋಮಾಂಸ ಸೇವನೆ ಮತ್ತು ಸಾಗಾಣೆಗೆ ನಿರ್ಬಂಧ ವಿಧಿಸಲಾಗಿತ್ತು. ಕಾಂಗ್ರೆಸ್ ಪಕ್ಷ ತನ್ನ ಪ್ರಣಾಳಿಕೆಯಲ್ಲಿ ಭರವಸೆ ನೀಡಿದ್ದಂತೆ ಈ ಕಾಯಿದೆಯನ್ನು ವಾಪಸ್ ಪಡೆಯಬೇಕಾಗಿತ್ತು. ಆದರೆ ಇದು ಸರ್ಕಾರ ಮಾಡಬೇಕಾದ ಕೆಲಸ ಎನ್ನುವುದಕ್ಕಿಂತ ಹೆಚ್ಚಾಗಿ ಶಾಸನ ಸಭೆ ಮಾಡಬೇಕಾದ ಕೆಲಸ. ವಿಧಾನ ಪರಿಷತ್ತಿನಲ್ಲಿ ಕಾಂಗ್ರೆಸಿಗೆ ಬಹುಮತ ಇಲ್ಲದ ಕಾರಣಕ್ಕೆ ಕಾಯಿದೆಯನ್ನು ವಾಪಸ್ ಪಡೆಯಲು ಸಾಧ್ಯವಾಗಿಲ್ಲ.

ಇದರ ಜೊತೆಗೆ ಹಿಂದಿನ ಬಿಜೆಪಿ ಸರ್ಕಾರ ಮುಸ್ಲಿಮರನ್ನೇ ಗುರಿಯಾಗಿರಿಸಿಕೊಂಡು ತಂದಿರುವ ಮತಾಂತರ ನಿಷೇಧ ತಿದ್ದುಪಡಿ ಕಾಯಿದೆಯನ್ನು ಬದಲಿಸುವುದಕ್ಕೂ ಬಹುಮತದ ಸಮಸ್ಯೆ ಕಾಡುತ್ತಿದೆ. ಜುಲೈ ತಿಂಗಳಲ್ಲಿ ಕಾಂಗ್ರೆಸ್ ಪಕ್ಷಕ್ಕೆ ವಿಧಾನ ಪರಿಷತಿನಲ್ಲೂ ಬಹುಮತ ಲಭ್ಯವಾಗಲಿದ್ದು ತಕ್ಷಣವೇ ನಮ್ಮ ಸರ್ಕಾರ ತಿದ್ದುಪಡಿ ತರಲಿದೆ ಎನ್ನುವ ವಿಶ್ವಾಸವಿದೆ. ಹೀಗೆ ರಾಜ್ಯ ಕಾಂಗ್ರೆಸ್ ಸರ್ಕಾರ ತುಂಬಾ ಸಂದಿಗ್ದ ಪರಿಸ್ಥಿತಿಯಲ್ಲಿ ಅಲ್ಪಸಂಖ್ಯಾತರ ಪರ ನಿಂತಿದೆ ಎನ್ನುವುದನ್ನು ಗಟ್ಟಿಯಾಗಿ ಹೇಳಬಹುದು.

ಹೊಸ ಓದು 'ಇಂದಿನ ಜಗತ್ತಿಗೆ ಬೌದ್ಧಧರ್ಮ' ಬುದ್ಧನನ್ನು ಅರಿಯಲು ಮತ್ತೊಂದು ಮಾರ್ಗ

ಲೋಕದ ಜಂಜಾಟಗಳಿಗೆ ಕಾರಣಗಳನ್ನು ಹುಡುಕಲು ಹೊರಟ ಹಾದಿಯಲ್ಲಿ ಬುದ್ಧನಿಗೆ ಗೋಚರಿಸಿದ 'ಸತ್ಯ-ಶೀಲ-ಮಾರ್ಗ' ಎಂಬ ತ್ರಿವಳಿ ತತ್ವಗಳೇ ಅವನ ಒಟ್ಟಾರೆ ಸಂದೇಶಗಳಾಗಿದ್ದವು. ಈ ತ್ರಿವಳಿ ಅಂಶಗಳಾಚೆ ಬುದ್ಧ ಏನನ್ನೂ ಹೇಳಲಿಲ್ಲ. ಇಂದು ಸಂಜೆ 5ಕ್ಕೆ ಚಿತ್ರಕಲಾ ಪರಿಷತ್ತಿನಲ್ಲಿ ಬಿಡುಗಡೆಯಾಗುತ್ತಿರುವ 'ಇಂದಿನ ಜಗತ್ತಿಗೆ ಬೌದ್ಧಧರ್ಮ' ಕೃತಿಯಿಂದ ಆಯ್ದ ಒಂದು ಅಧ್ಯಾಯ ಇಲ್ಲಿದೆ.

ಬುದ್ಧನೇ ಏಕೆ?

ಬುದ್ಧನು ಅನನ್ಯ. ತಾತ್ವಿಕ ಚಿಂತನೆಯಲ್ಲಿ ಅವನನ್ನು ಮೀರಿಸಿದವರು ಯಾರೂ ಇಲ್ಲ. ತನ್ನ ಶ್ರೋತೃಗಳನ್ನು ಮಂತ್ರಮುಗ್ಧರನ್ನಾಗಿಸಿ, ತಾನು ಹೇಳಿದ ವಿಷಯವನ್ನು ಅರ್ಥ ಮಾಡಿಕೊಳ್ಳುವಂತೆ ಮಾಡಿ, ವಿಶ್ವಾಸಾರ್ಹತೆ ಮೂಡಿಸಬಲ್ಲ ಅಂತಹ ವಕ್ತಾರರು ಮತ್ತೊಬ್ಬರು ಸಿಗುವುದಿಲ್ಲ. ಪವಿತ್ರರಲ್ಲಿ ಪವಿತ್ರ. ಎಲ್ಲಾ ಕಾಲಕ್ಕೂ ಹೊಂದಿಕೆಯಾಗುವ ಆದರ್ಶಗಳ ಮೂರ್ತರೂಪ ಅವನು. ಅವನ ಸಂಕಲ್ಪ, ಅನುಕಂಪ, ಸೇವೆ, ಪರಿತ್ಯಾಗ, ಆದರ್ಶಯುತ ವೈಯಕ್ತಿಕ ಜೀವನ, ಧರ್ಮವನ್ನು ಬೋಧಿಸುವಲ್ಲಿ ಅವನು ಅನುಸರಿಸಿದ ನಿರ್ದೋಷ ವಿಧಾನಗಳು, ಅವನ ಅಂತಿಮ ಗೆಲುವು- ಇವೆಲ್ಲವೂ ಅವನನ್ನು ಮಹಾನ್ ಧರ್ಮ ಪ್ರವಾದಿಯನ್ನಾಗಿ ಮಾಡಿವೆ.

ಧಮ್ಮದೂತವನ್ನು ನೆರವೇರಿಸುವುದರಲ್ಲಿ ಇಡೀ ಜಗತ್ತಿನಲ್ಲಿಯೇ ಮೊದಲಿಗ ಅವನು. ಉತ್ತರ ಭಾರತದಾದ್ಯಂತ ಕಾಲ್ನಡಿಗೆಯಲ್ಲಿ ನಲವತ್ತೈದು ವರ್ಷಗಳ ಕಾಲ ಸುತ್ತಿ ಧರ್ಮಬೋಧನೆ ಮಾಡಿದ. ಕೊನೆಯ ಉಸಿರು ಇರುವವರೆಗೂ ಮಾನವಕುಲಕ್ಕೆ ಆದರ್ಶಮೂರ್ತಿಯಾಗಿ ನಿಂತ. ಅಷ್ಟೇ ಅಲ್ಲದೆ ಸದ್ಗುಣಶೀಲನಾಗಿಯೂ ಇದ್ದ.

ಬುದ್ಧನು ಹೇಳಿದ ಕೊನೆಯ ಮಾತುಗಳು- ''ತಾಳ್ಮೆಯಿಂದ, ಶ್ರದ್ಧೆಯಿಂದ ಪ್ರಯತ್ನಿಸು. ನಿನ್ನ ಪ್ರಯತ್ನವೇ ನಿನ್ನನ್ನು ದಡ ಸೇರಿಸುತ್ತದೆ. ಮತ್ತಾರೂ ನಿನಗೆ ಏನೂ ಮಾಡಲಾರರು. ನೀನು ಪೂಜೆ, ಪುರಸ್ಕಾರ, ಪ್ರಾರ್ಥನೆಗಳನ್ನು ಮಾಡಬೇಕಾದ ಅಗತ್ಯವಿಲ್ಲ. ಅವುಗಳ ಬದಲಾಗಿ ನೀನು ವಿಪಶ್ಯನ ಧ್ಯಾನ ಮಾಡು. ಅದು ನಿನ್ನ ಆತ್ಮನಿಗ್ರಹಕ್ಕೆ, ಪರಿಶುದ್ಧವಾಗಲು, ಜ್ಞಾನೋದಯವಾಗಲು ದಾರಿ ಮಾಡಿಕೊಡುತ್ತದೆ.'' ಬುದ್ಧನ ದೌತ್ಯದ ಗುರಿ ಮಾನವರನ್ನು ದುಃಖದಿಂದ ಮುಕ್ತಗೊಳಿಸುವುದು, ದುಃಖದ ಕಾರಣವನ್ನು ತಿಳಿಸಿ, ಜನನ-ಮರಣಗಳಿಗೆ ಅಂತ್ಯ ಹಾಡುವುದು. ಅವನು ಕೇವಲ ಆಧ್ಯಾತ್ಮಿಕ ಪ್ರಗತಿಗೆ ಮಾತ್ರವಲ್ಲದೆ, ಭೌತಿಕ ಪ್ರಗತಿಗೂ ಪ್ರಾಮುಖ್ಯತೆ ನೀಡಿದ. ಎರಡೂ ಇದ್ದರೆ ಮಾತ್ರ ಯಾವುದೇ ಜನಾಂಗ ಅಥವಾ ದೇಶ ಪ್ರಗತಿ ಸಾಧಿಸುತ್ತದೆ.

ನೆಹರೂ ಅವರು ಬುದ್ಧನನ್ನು ಭಾರತದ ಪುತ್ರರಲ್ಲಿ ಅತ್ಯಂತ ಶ್ರೇಷ್ಠ ಎಂದು ಆಗಾಗ ಹೇಳುತ್ತಿದ್ದರು. ರಾಧಾಕೃಷ್ಣನ್ ಅವರು ಅವನ ಬಗ್ಗೆ ಹೀಗೆ ಹೇಳಿದರು- ''ಮಾನವಕುಲದ ಜೀವನ, ಚಿಂತನೆಗಳ ಮೇಲೆ ಪ್ರಭಾವವನ್ನು ಪರಿಗಣಿಸಿದರೆ, ಬುದ್ಧನು ಯಾವಾಗಲೂ ಪ್ರಥಮ ಸ್ಥಾನವನ್ನೇ ಪಡೆಯುತ್ತಾನೆ. ಯಾವುದೇ ಧರ್ಮಕ್ಕಿಂತಲೂ ಅವನ ಧರ್ಮ ಮಾನವ ಕುಲದ ಮೇಲೆ ಅತ್ಯಂತ ಪ್ರಭಾವ ಬೀರಿದೆ. ಅವನು ಜಾಗತಿಕ ಚಿಂತನೆಯ ಇತಿಹಾಸಕ್ಕೆ ಸೇರಿದವನು. ಸಂಸ್ಕಾರಯುತ ಮಾನವಕುಲದ ವಾರಸುದಾರ. ಚರಿತ್ರೆಯಲ್ಲಿಯೇ ಅತ್ಯಂತ ಮಹಾನ್ ವ್ಯಕ್ತಿಗಳಲ್ಲಿ ಒಬ್ಬ.'' ಎಚ್.ಜಿ. ವೆಲ್ಸ್ ಪ್ರಕಾರ ಮಾನವ ಚರಿತ್ರೆಯಲ್ಲಿ ಅತ್ಯಂತ ಶ್ರೇಷ್ಠರಾದ ಮೂವರಲ್ಲಿ ಒಬ್ಬ. ಬುದ್ಧನು ಮಾನವ, ಸರಳ ಮಾನವ. ಕಟ್ಟುಕಥೆಗಳ ಪುರುಷನಲ್ಲ. ಮಾನವ ಕುಲಕ್ಕೆ ಬೆಳಕು ನೀಡಲು ಶ್ರಮಿಸಿದ. ಮಾನವಕುಲದ ಎಲ್ಲರಿಗೂ ಉಪಯುಕ್ತವಾದ ಸಾರ್ವತ್ರಿಕ ಸಂದೇಶವನ್ನು ನೀಡಿದ. ಇಂದಿನ ಅತ್ಯಂತ ಪ್ರಮುಖ ಭಾವನೆಗಳು ಅವನ ಸಂದೇಶಕ್ಕೆ ಹತ್ತಿರವಾಗಿವೆ. ಈ ಕಷ್ಟಗಳಿಗೆ, ಕಣ್ಣೀರಿಗೆ ಕಾರಣ ಮಾನವನ ಸ್ವಾರ್ಥ ಎಂದ. ಒಬ್ಬ ಮನುಷ್ಯ ಪವಿತ್ರನಾಗಬೇಕಾದರೆ ತನ್ನ ಸ್ವಾರ್ಥ, ತನ್ನ ಇಂದ್ರಿಯ ಸುಖಗಳಿಗಾಗಿ ಬದುಕುವುದನ್ನು ನಿಲ್ಲಿಸಬೇಕು. ಕ್ರಿ.ಪೂ. 500 ವರ್ಷಗಳ ಹಿಂದೆ. ಬುದ್ಧನು ಬೇರೆ ಭಾಷೆಯಲ್ಲಿ ತನ್ನನ್ನು ತಾನು ಮರೆತು ಹೋಗಬೇಕೆಂದು(ಸ್ವಾರ್ಥಕ್ಕಾಗಿ ಬದುಕಬಾರದು) ಬೋಧಿಸಿದನು. ಅನೇಕ ವಿಷಯಗಳಲ್ಲಿ ಬುದ್ಧನು, ಯಾವುದೇ ಪ್ರವಾದಿಗಿಂತಲೂ ಆಧುನಿಕ ಮಾನವನಿಗೆ ಹತ್ತಿರವಾಗಿದ್ದಾನೆ. ವ್ಯಕ್ತಿತ್ವಕ್ಕೆ, ತ್ಯಾಗಕ್ಕೆ, ಸೇವೆಗೆ ಅತ್ಯಂತ ಪ್ರಾಮುಖ್ಯತೆ ನೀಡಿದನು.

ಬುದ್ಧನು ಕೇವಲ ಮಾನವನಲ್ಲ, ಅಸಾಧಾರಣ ಮಾನವ. ಅವನು ಹುಟ್ಟಿನಿಂದಲೇ ಬುದ್ಧನಾಗಿರಲಿಲ್ಲ. ತನ್ನನ್ನು ತಾನು ಬುದ್ಧನನ್ನಾಗಿ ಮಾಡಿಕೊಂಡ. ''ಸಿದ್ಧಾರ್ಥನು ತನ್ನನ್ನು ತಾನು ಬುದ್ಧನನ್ನಾಗಿ ಮಾಡಿಕೊಂಡ.'' ಯಾವುದೇ ಮಾನವನು ತನ್ನನ್ನು, ತನಗೆ ಬೇಕಾದ ರೀತಿಯಲ್ಲಿ, ಬದಲಾಯಿಸಿಕೊಳ್ಳಲು ಅವನಿಗೆ ಅವಕಾಶ, ಸ್ವಾತಂತ್ರ್ಯ ಇವೆ ಎಂದ ಬುದ್ಧ. ಅವನು ಹೇಗೆ ಯೋಚಿಸುತ್ತಾನೋ ಹಾಗೆಯೇ ಆಗುತ್ತಾನೆ. ಅದಕ್ಕೆ ಧಮ್ಮಪದದಲ್ಲಿ '' '' ಎಂದು ಹೇಳಲಾಗಿದೆ. ಸಿದ್ಧಾರ್ಥನ ಚಿಂತನೆಯ ಫಲವೇ ಬುದ್ಧ.

ಬುದ್ಧನನ್ನು ಅವನ ಅನುಯಾಯಿಗಳು ಶ್ರೇಷ್ಠ ಗುರು ಎಂದು ಗೌರವಿಸಿದರೇ ಹೊರತು, ಎಂದಿಗೂ, ಯಾರೂ ಅವನನ್ನು ಪೂಜಿಸಲಿಲ್ಲ. ಇತರರು ದೇವರಿಗೆ ವರಗಳಿಗಾಗಿ ಬೇಡಿಕೊಂಡಂತೆ, ಪ್ರಾರ್ಥಿಸಿದಂತೆ. ಬುದ್ಧನನ್ನು ದೇವರನ್ನಾಗಿ ಮಾಡಿ. ಯಾರೂ ಆರಾಧಿಸಲಿಲ್ಲ. ಭೂಮಿಯ ಮೇಲೆ ಇಲ್ಲಿಯವರೆಗೆ ''ಬುದ್ಧನಂತೆ, ದೇವರಾಗದೆ ದೇವರಾದವನು'' ಇನ್ನೊಬ್ಬನಿಲ್ಲ.

ನಾಸ್ತಿಕವಾದವನ್ನು ಧರ್ಮರಹಿತ ಎಂದು ಪರಿಗಣಿಸಬಾರದು. ಮಾನವ ಕುಲದಲ್ಲಿ ಶಾಂತಿ ಮತ್ತು ಸೌಖ್ಯಗಳನ್ನು ಸ್ಥಾಪಿಸಬೇಕಾದರೆ, ಒಂದು ಪ್ರಾಮಾಣಿಕ ಧಾರ್ಮಿಕ ಜ್ಞಾನೋದಯ(ಇಲ್ಲಿ ದೇವರು ಇಲ್ಲದ ಧರ್ಮ) ನೈತಿಕವಾಗಿ ದಿವಾಳಿಯಾದ ಇಂದಿನ ಜಗತ್ತಿಗೆ ಅವಶ್ಯಕ. ಬೇಕಾಗಿರುವುದು ಕಟ್ಟುನಿಟ್ಟಿನ ಧರ್ಮಗಳಲ್ಲಿನ ಮೂಢನಂಬಿಕೆಯಲ್ಲ, ಕೇವಲ ಪೂಜೆ, ಕರ್ಮಕಾಂಡ, ಕ್ರಿಯೆಗಳಲ್ಲ(ಅವು ಸಾಮಾನ್ಯ ಜನರಿಗೆ ಜೋಗುಳ ಹಾಡಬಹುದು). ಪ್ರವಾದಿಗಳು ಹೇಳಿದ ಉದಾತ್ತ ಸೂತ್ರಗಳ ಮೇಲೆ ಆಧಾರಿತವಾದ ನ್ಯಾಯಬದ್ಧ, ಸರಳ ಮತ್ತು ತಾರ್ಕಿಕ ಪ್ರೇಮಮಯ ಜೀವನ ಬೇಕು. ಸಿ.ಇ.ಎಂ. ಜೋಡ್ ಹೀಗೆ ಹೇಳುತ್ತಾರೆ. ''ಕ್ರಿ.ಪೂ. 6ನೇ ಶತಮಾನದಲ್ಲಿ ಭಾರತ ಮತ್ತು ಚೀನಾಗಳಲ್ಲಿ ಮೂವರು ಮಹಾಪ್ರವಕ್ತರು ಜನಿಸಿದರು. ಅವರು ದೇವರು ಇದ್ದಾನೋ ಇಲ್ಲವೋ ಎಂದು ಯೋಚಿಸದೆ, ಧರ್ಮವನ್ನು ಬೇರೆ ಯಾವುದೇ ಪ್ರಯೋಜನವನ್ನು ಆಶಿಸದೆ, ಕೇವಲ ಧರ್ಮಕ್ಕಾಗಿಯೇ ಅಂದರೆ ಧರ್ಮಕ್ಕಾಗಿಯೇ ಧರ್ಮವನ್ನು ಆಚರಿಸಬೇಕೆಂದು ಬೋಧಿಸಿದರು. ಆ ಮೂವರಲ್ಲಿ ಅತ್ಯಂತ ಪ್ರಮುಖ ಬುದ್ಧ.''

ಬುದ್ಧ ನಿಸ್ವಾರ್ಥ ಸೇವೆಯನ್ನು, ಶೀಲವನ್ನು, ಮಿತಿಯಿಲ್ಲದ ಮೈತ್ರಿಯನ್ನು ರಾಜರು, ರಾಜಕುಮಾರರು, ಕುಲೀನರು, ಶ್ರೀಮಂತರು ಮಾತ್ರವಲ್ಲದೆ, ಬಡವರು, ಕೆಳವರ್ಗದ ಜನರಿಗೂ ಬೋಧಿಸಿದ. ತನ್ನ ಬೌದ್ಧಸಂಘಕ್ಕೆ ಸೇರುವ ಅವಕಾಶವನ್ನು ಎಲ್ಲರಿಗೂ ಕಲ್ಪಿಸಿದ. ಸಮಾನತೆಯನ್ನು ಪಾಲಿಸಿದ. ಇದರಿಂದ ಕೆಳವರ್ಗದವರ ಸ್ಥಾನಮಾನ ಹೆಚ್ಚುವ ಅವಕಾಶ ಸಿಕ್ಕಿತು. ಅವನು ಬೋಧಿಸುವ ಮೊದಲು ಹಸಿದವರಿಗೆ ಅನ್ನ ಹಾಕಿಸುತ್ತಿದ್ದ. ಮನಸ್ಸಿಗೆ ಆಹಾರ ಎಷ್ಟು ಅವಶ್ಯಕವೋ, ದೇಹಕ್ಕೂ ಆಹಾರ ಅಷ್ಟೇ ಅವಶ್ಯಕವೆಂದು ಭಾವಿಸಿದ್ದ.

ಬುದ್ಧ ವರ್ಗರಹಿತ ಸಮಾಜವನ್ನು ಸೃಷ್ಟಿಸಿದ. ದೊಡ್ಡ-ಚಿಕ್ಕ, ಹೆಚ್ಚು-ಕಡಿಮೆ ಎಂಬ ಭೇದವಿಲ್ಲದೆ ಎಲ್ಲರಿಗೂ ಅದರಲ್ಲಿ ಪ್ರವೇಶ ಕಲ್ಪಿಸಿದ. ಈ ಸಂದರ್ಭದಲ್ಲಿ ಲಾರ್ಡ್ ಜೆಟ್ ಲ್ಯಾಂಡ್ ಹೇಳಿದ್ದನ್ನು ಉಲ್ಲೇಖಿಸೋಣ: ''2000 ವರ್ಷಗಳ ಹಿಂದೆ ಅಥವಾ ಅದಕ್ಕೂ ಮೊದಲು, ಭಾರತದಲ್ಲಿ ಬೌದ್ಧ ಅಸೆಂಬ್ಲಿಗಳು, ಇಂದಿನ ಸಂಸದೀಯ ಪ್ರಜಾಪ್ರಭುತ್ವದ ಮೂಲಭೂತ ಭಾವನೆಗಳನ್ನು ಹೊಂದಿದ್ದವು ಎಂದು ನೋಡಿದರೆ ಆಶ್ಚರ್ಯವಾಗುತ್ತದೆ.'' ಬೌದ್ಧಧರ್ಮ ಅಂದಿಗೂ, ಇಂದಿಗೂ ನಿರಂತರವಾಗಿ ಹರಡುತ್ತಿದೆ. ಈಗ ಅದು ಮುಖ್ಯವಾಗಿ ಪಾಶ್ಚಾತ್ಯ ದೇಶಗಳಿಗೆ, ಅದರ ತರ್ಕಬದ್ಧತೆ, ಪ್ರಾಯೋಗಿಕತೆ, ಸಮರ್ಥತೆ, ಅಹಿಂಸೆ, ಸಹನೆ, ಸಾರ್ವತ್ರಿಕತೆಗಳ ಕಾರಣದಿಂದ ಹರಡುತ್ತಿದೆ. ಬೌದ್ಧಧರ್ಮ ಏಷ್ಯಾ ದೇಶಗಳು ಸಾಂಸ್ಕೃತಿಕ ವಿಕಾಸಕ್ಕೆ ಬಹಳಷ್ಟು ಸಹಾಯ ಮಾಡಿದೆ. ವಾಸ್ತವವಾಗಿ ಏಷ್ಯಾ ದೇಶಗಳೆಲ್ಲವೂ ಬೌದ್ಧರ ಜೋಗುಳ ಹಾಡಿನಿಂದಲೇ ಬೆಳೆದು ದೊಡ್ಡದಾಗಿವೆ. ರಾಷ್ಟ್ರಗಳು ಬಂದವು, ಹೋದವು. ಬಲದ ಮೇಲೆ ಆಧಾರಿತವಾದ ಮಹಾ ಸಾಮ್ರಾಜ್ಯಗಳು ಬೆಳಗಿದವು. ಮಣ್ಣು ಸೇರಿ ಹೋದವು. ಆದರೆ ಪ್ರೀತಿ, ಅನುಕಂಪ, ತರ್ಕಗಳ ಮೇಲೆ ಬುದ್ಧ ಸ್ಥಾಪಿಸಿದ ಸಾಮ್ರಾಜ್ಯ ಬೆಳಗುತ್ತಲೇ ಇದೆ. ಹಾಗೆ ಮುಂದೆಯೂ ಬೆಳಗುತ್ತಲೇ ಇರುತ್ತದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR